ಸಂಪಾದಕರು: ರವಿಕುಮಾರ್ ಸಿ.ಹೆಚ್.
RNI: KARKAN/2021/80805
ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ
# ಸೂರ್ಯ ಪ್ರಗತಿ
SURYA PRAGATHI Kannada daily
ಪ್ರತಿ ಸುದ್ದಿಯ ಧ್ವನಿ
suryapragathidailynews@gmail.com 9901010100 L2/RNP-1285/TMR/2025-27
Volume: 05 ಸಂಪುಟ: 05 | Issue:234 ಸಂಚಿಕೆ: 234 | Date:13-10-2026 Tuesday | RNI NO : KARKAN/2021/80805 | L2/RNP-1285/TMR/2025-27 | Page:4 ಪುಟ : 4 | Price: 1.00 ಬೆಲೆ: 1.00 ರೂ

# ‘ಅತ್ಯಾಧುನಿಕ ಆರೋಗ್ಯ ಸೇವೆ ಒದಗಿಸಲು ಸರ್ಕಾರದ ಬದ್ಧ’



**ತುಮಕೂರು:** ಗ್ರಾಮೀಣ ಮತ್ತು ಸೌಲಭ್ಯ ವಂಚಿತ ಜನಸಂಖ್ಯೆಗೆ ಅತ್ಯಾಧುನಿಕ ಆರೋಗ್ಯ ಸೇವೆಗಳನ್ನು ಒದಗಿಸಲು ಹಾಗೂ ಆರೋಗ್ಯ ಸೇವೆಗಳ ಲಭ್ಯತೆ ಮತ್ತು ಸಮಾನತೆಯ ಅಂತರವನ್ನು ಕಡಿಮೆ ಮಾಡಲು ಸರ್ಕಾರದ ಬದ್ಧವಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ಯು. ಟಿ. ಖಾದರ್ ಅವರು ಹೇಳಿದ್ದಾರೆ.

ನಗರದ ಅಗಲಕೋಟೆಯಲ್ಲಿ ಶ್ರೀ ಸಿದ್ಧಾರ್ಥ ಅಕಾಡೆಮಿ ಆಫ್ ಹೈಯರ್ ಎಜುಕೇಶನ್‌ನ ಅಂಗಸಂಸ್ಥೆಯಾದ ಶ್ರೀ ಸಿದ್ಧಾರ್ಥ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಸಮುದಾಯ ವೈದ್ಯಕೀಯ ವಿಭಾಗದಡಿಯಲ್ಲಿ ಏರ್ಪಡಿಸಲಾಗಿದ್ದ ಭಾರತೀಯ ಪ್ರಿವೆಂಟಿವ್ ಮತ್ತು ಸಾಮಾಜಿಕ ವೈದ್ಯಕೀಯ ಸಂಘದ 6 ನೇ ಕರ್ನಾಟಕ ರಾಜ್ಯ ಸಮ್ಮೇಳನ –?ಐಎಪಿಎಸ್‌ಎಂ ಕಾರ್ಕಾನ್–2026?(ಖಂಕಖಿಒ ಏಂಖಅಔಓ 2026) ದಲ್ಲಿ ?ಆರೋಗ್ಯ ಪರಂಪರೆ–ಜೀವನ ಕ್ರಮ ಮತ್ತು ತಲೆಮಾರುಗಳ ಅಂತ್ಯದವರೆಗೆ ಸಮುದಾಯ ಆರೋಗ್ಯ" ವಿಷಯ ಕುರಿತ ಮೂರು ದಿನಗಳ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಪ್ರತ್ಯೇಕ ರೋಗಿಗಳಿಗೆ ಚಿಕಿತ್ಸೆ ನೀಡುವುದರ ಬದಲಾಗಿ, ಸಮಗ್ರ ಜನಸಂಖ್ಯೆ ಮತ್ತು ಸಮುದಾಯಗಳ ಆರೋಗ್ಯವನ್ನು ರಕ್ಷಿಸುವ, ರೋಗ ನಿಯಂತ್ರಣ ಕ್ರಮವನ್ನು ಉತ್ತೇಜಿಸುವ ಹಾಗೂ ಸಮುದಾಯದ ಇಚ್ಛಾಶಕ್ತಿಯನ್ನು ಪುನಃಸ್ಥಾಪಿಸುವತ್ತ ವೈದ್ಯಕೀಯ ಸಮದಾಯ ಗಮನಹರಿಸಬೇಕಾಗಿದೆ ಎಂದು ಸಚಿವರು ನುಡಿದರು. ಗ್ರಾಮೀಣ ಮತ್ತು ಸೌಲಭ್ಯ ವಂಚಿತ ಜನಸಂಖ್ಯೆಗೆ ಅತ್ಯಾಧುನಿಕ ಆರೋಗ್ಯ ಸೇವೆಗಳನ್ನು ಒದಗಿಸಲು ಹಾಗೂ ಆರೋಗ್ಯ ಸೇವೆಗಳ ಲಭ್ಯತೆ ಮತ್ತು ಸಮಾನತೆಯ ಅಂತರವನ್ನು ಕಡಿಮೆ ಮಾಡಲು ಸರ್ಕಾರದ ಬದ್ಧವಾಗಿದೆ ಎಂದ ಸಚಿವರಾದ ಯು. ಟಿ. ಖಾದರ್ ಅವರು ವೈದ್ಯಕೀಯ ಶಿಕ್ಷಣ, ಆರೋಗ್ಯ ಸೇವೆಗಳ ವಿತರಣೆ ಮತ್ತು ಸಮುದಾಯ ಸೇವೆಯಲ್ಲಿ ಶ್ರೇಷ್ಠತೆಯನ್ನು ಕಾಯ್ದುಕೊಳ್ಳಲು ಶ್ರಮಿಸುವಂತೆ ವೈದ್ಯ ಸಮುದಾಯಕ್ಕೆ ಕರೆ ನೀಡಿದರು. ಸಾಹೇ ವಿವಿ ಉಪಕುಲಪತಿಗಳಾದ ಡಾ. ಲಿಂಗೇಗೌಡ ಕೆ. ಬಿ. ಅವರು ಮಾತನಾಡಿ, ಪೀಳಿಗೆಯಿಂದ ಪೀಳಿಗೆಗೆ ಜೀವನಕ್ರಮ ಮತ್ತು ಸಮುದಾಯದ ಆರೋಗ್ಯ: ಗರ್ಭದಿಂದ ಸಮಾಧಿಯವರೆಗೆ – ಎಲ್ಲರಿಗೂ ಸಾರ್ವಜನಿಕ ಆರೋಗ್ಯ ಮುಖ್ಯವಾಗಿದೆ. ಈ ನಿಟ್ಟಿನಲ್ಲಿ ಸಮುದಾಯ ವೈದ್ಯಕೀಯವು ವಿಭಾಗವು ಪ್ರತ್ಯೇಕ ರೋಗಿಗಳಿಗೆ ಚಿಕಿತ್ಸೆ ನೀಡುವುದರ ಬದಲಾಗಿ, ಸಮಗ್ರ ಜನಸಂಖ್ಯೆ ಮತ್ತು ಸಮುದಾಯಗಳ ಆರೋಗ್ಯವನ್ನು ರಕ್ಷಿಸುವ, ಉತ್ತೇಜಿಸುವ ಹಾಗೂ ಪುನಃಸ್ಥಾಪಿಸುವತ್ತ ಗಮನಹರಿಸುತ್ತದೆ ಎಂದರು.

ರೋಗ ತಡೆಗಟ್ಟುವಿಕೆ ಮತ್ತು ನಿಯಂತ್ರಣದಲ್ಲಿ, ಪ್ರಾಥಮಿಕ ಆರೋಗ್ಯ ಸೇವೆಯಲ್ಲಿ ವೈದ್ಯರ ಸೇವೆ ಪ್ರಧಾನವಾಗಿದೆ. ಸಮುದಾಯ ಆರೋಗ್ಯ ಕಾರ್ಯಕರ್ತರಿಗೆ ತರಬೇತಿ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಉತ್ತಮ ಸೇವೆ ನೀಡುವ ಮೂಲಕ ತಳಮಟ್ಟದ ಆರೋಗ್ಯ ವ್ಯವಸ್ಥೆಗಳನ್ನು ಬಲಪಡಿಸಬೇಕಾಗಿದೆ ಎಂದು ಕುಲಸಚಿವರಾದ ಡಾ. ಅಶೋಕ್ ಮೆಹ್ತಾ ಅವರು ಅಭಿಪ್ರಾಯಪಟ್ಟರು.

ಪ್ರಾಸ್ತಾವಿಕವಾಗಿ ಮಾತನಾಡಿದ ?ಐಎಪಿಎಸ್‌ಎಂ ಕಾರ್ಕಾನ್–2026? ಸಂಘಟನಾ ಸಮಿತಿಯ ಅಧ್ಯಕ್ಷರು ಹಾಗೂ ಸಮುದಾಯ ವೈದ್ಯಕೀಯ ವಿಭಾಗದ ಮುಖ್ಯಸ್ಥರಾದ ಡಾ. ಸವಿತಾ ರಾಣಿ ಬಿ. ಬಿ. "ಗರ್ಭದಿಂದ ಸಮಾಧಿ–ಎಲ್ಲರಿಗೂ ಸಾರ್ವಜನಿಕ ಆರೋಗ್ಯ" ಎಂಬ ಘೋಷಣಾ ವಾಕ್ಯದಡಿಯಲ್ಲಿ "ಆರೋಗ್ಯ ಪರಂಪರೆ ಜೀವನ ಕೋರ್ಸ್ ಮತ್ತು ತಲೆಮಾರುಗಳಾದ್ಯಂತ ಸಮುದಾಯ ಆರೋಗ್ಯ"

ಜೀವನದ ಎಲ್ಲಾ ಹಂತಗಳಲ್ಲಿ ಸಮಗ್ರ ಮತ್ತು ಅಂತರ್ಗತ ಸಾರ್ವಜನಿಕ ಆರೋಗ್ಯವನ್ನು ಕುರಿತು ಚರ್ಚಿಸಲಾಗುತ್ತದೆ. ಈ ಕಾರ್ಯಾಗಾರದ ಮೂಲಕ ಶೈಕ್ಷಣಿಕ, ಸಾರ್ವಜನಿಕ ಆರೋಗ್ಯದ ವೃತ್ತಿಪರರು, ಸಂಶೋಧಕರು ಮತ್ತು ವಿದ್ಯಾರ್ಥಿಗಳಿಗೆ ಜ್ಞಾನವನ್ನು ಹಂಚಿಕೊಳ್ಳಲು, ವಿಚಾರಗಳನ್ನು ವಿನಿಮಯ ಮಾಡಿಕೊಳ್ಳಲು ಮತ್ತು ಸಹಯೋಗಗಳನ್ನು ಬಲಪಡಿಸಲ ವೇದಿಕೆಯಲ್ಲಿ ಅಮೂಲ್ಯವಾದ ಸಂವಾದ, ಚರ್ಚೆಗಳು ನಡೆಯಲಿವೆ ಎಂದರು.

ಪ್ರಾಂಶುಪಾಲರಾದ ಡಾ. ಮಲ್ಲಿಕಾರ್ಜುನ ಬಿ. ಸಾಣಿಕೊಪ್ಪ, ಉಪ ಪ್ರಾಂಶುಪಾಲರಾದ ಡಾ. ಪ್ರಭಾಕರ ಜಿ. ಎನ್., ಐಎಪಿಎಸ್‌ಎಂನ ರಾಷ್ಟ್ರೀಯ ಘಟಕದ ಅಧ್ಯಕ್ಷರಾದ ಮೇಜರ್ ಜನರಲ್ ಡಾ. ಅತುಲ್ ಕೋಟ್ವಾಲ್, ಪ್ರಧಾನ ಕಾರ್ಯದರ್ಶಿಯಾದ ಡಾ. ಮನೀಶ್ ಕುಮಾರ್ ಸಿಂಗ್, ರಾಜ್ಯ ಘಟಕದ ಅಧ್ಯಕ್ಷರಾದ ಡಾ. ಸುನಿಲ್ ಕುಮಾರ್ ಡಿ. ಆರ್., ಕಾರ್ಯದರ್ಶಿ ಡಾ. ಉಮೇಶ್ ರಾಮದುರ್ಗ, ಸಂಘಟನಾ ಸಮಿತಿ ಡಾ. ರಮ್ಯ ಕೆ. ಎಸ್., ಸಂಘಟನಾ ಕಾರ್ಯದರ್ಶಿ ಡಾ. ವರ್ಷಾ ಆರ್. ಮೊಖಾಸಿ, ಜಂಟಿ ಕಾರ್ಯದರ್ಶಿ ಡಾ. ಸಾಯಿ ಕೀರ್ತಿ ಡಿ. ಮುಂತಾದವರು ಸಮಾರಂಭದಲ್ಲಿ ಹಾಜರಿದ್ದರು.

# ಒಂದು ತಿಂಗಳ ಪ್ರಾಯೋಗಿಕ ತರಬೇತಿ ಶಿಬಿರ ಯಶಸ್ವಿ



**ತುಮಕೂರು:** ವಾಸ್ತವ ಪ್ರಪಂಚದ ಎಂಜಿನಿಯರಿಂಗ್ ಸಮಸ್ಯೆಗಳನ್ನು ಪರಿಹರಿಸುವ ಮೂಲಕ ಶೈಕ್ಷಣಿಕ ಜ್ಞಾನ ಮತ್ತು ಕೈಗಾರಿಕಾ ಕಾರ್ಯವಿಧಾನಗಳ ನಡುವಿನ ಅಂತರವನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ನಗರದ ಶ್ರೀ ಸಿದ್ಧಾರ್ಥ ಇಂಜಿನಿಯರಿಂಗ್ ಕಾಲೇಜಿನಲ್ಲಿ ಒಂದು ತಿಂಗಳ ಪ್ರಾಯೋಗಿಕ ತರಬೇತಿ ಶಿಬಿರ ಯಶಸ್ವಿಯಾಗಿ ಮುಕ್ತಾಯಗೊಂಡಿದೆ.

ಕ್ಯಾಂಪಸ್‌ನ ಎಂಬೆಡೆಡ್ ಸಿಸ್ಟಮ್ಸ್ ಲ್ಯಾಬ್‌ನಲ್ಲಿ ಎಲೆಕ್ಟ್ರಾನಿಕ್ಸ್ ಮತ್ತು ಟೆಲಿಕಮ್ಯೂನಿಕೇಷನ್ ಹಾಗೂ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯೂನಿಕೇಷನ್ ವಿಭಾಗಗಳು ?ಅನ್ವೇಷಣಾ 2026? ಮಾಸಿಕ ಶಿಬಿರವನ್ನು 'ಶ್ರೀ ಸಿದ್ಧಾರ್ಥ ಇನ್ನೋವೇಶನ್' ಸಹಯೋಗದೊಂದಿಗೆ ಹಮ್ಮಿಕೊಂಡಿದ್ದವು.

ಶ್ರೀ ಸಿದ್ಧಾರ್ಥ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ಪ್ರಾಂಶುಪಾಲರಾದ ಡಾ. ಮಹಂತೇಶ್ ಎಂ. ನಡಕಟ್ಟಿ ಮಾತಣಾಡಿ, ಅನ್ವೇಷಣಾ 2026ರ ಮೂಲಕ ವಿದ್ಯಾರ್ಥಿಗಳಲ್ಲಿ ನಾವೀನ್ಯತೆ, ಹೊಸ ಪರಿಕಲ್ಪನೆಗಳ ನಿರ್ಮಾಣ ಮತ್ತು ಪ್ರಾಜೆಕ್ಟ್ ಗಳನ್ನು ಸಿದ್ಧಪಡಿಸುವುದಕ್ಕೆ ಶಿಬಿರಲದಲಿ ಸ್ಫೂರ್ತಿ ತುಂಬುವ ಕೆಲಸ ಮಾಡಲಾಗುತ್ತದೆ ಎಂದರು

ಇಂದಿನ ಆಲೋಚನೆಗಳು, ನಾಳೆಯ ಪ್ರಭಾವಕ್ಕೆ ಕಾರಣವಾಗುತ್ತವೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ನವೀನ ಎಂಬೆಡೆಡ್ ಸಿಸ್ಟಮ್ ಮೂಲಮಾದರಿಗಳನ್ನು ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಮತ್ತು ಆತ್ಮವಿಶ್ವಾಸದಿಂದ ಪ್ರಸ್ತುತಪಡಿಸಲು ಸಶಕ್ತರನ್ನಾಗಿಸುವುದು ಮುಖ್ಯ ಉದ್ದೇಶವಾಗಿದೆ ಎಂದರು.

ಪ್ರಾಯೋಗಿಕ ಕಲಿಕೆಯ ಮೂಲಕ ಮತ್ತು ಕೋಡಿಂಗ್ ಬಳಸಿ ಎಂಬೆಡೆಡ್ ಸಿಸ್ಟಮ್‌ಗಳಲ್ಲಿ ಪ್ರಾಯೋಗಿಕ ಕೌಶಲ್ಯಗಳನ್ನು ಬೆಳೆಸುವುದು. ಪ್ರಾಯೋಗಿಕ ಕಲಿಕೆಯಲ್ಲಿ ತಜ್ಞರ ಮಾರ್ಗದರ್ಶನ ಮತ್ತು ಯೋಜನಾ–ಆಧಾರಿತ ಅಭಿವೃದ್ಧಿಯ ಮೂಲಕ ಉದ್ಯಮಕ್ಕೆ ಸಿದ್ಧವಾಗುವ ಕೌಶಲ್ಯಗಳನ್ನು ಬೆಳೆಸಿಕೊಳ್ಳಲು ಉತ್ತೇಜನವನ್ನು ಈ ಮಾಸಿಕ ಪ್ರಾಯೋಗಿಕ ತರಬೇತಿ ಶಿಬಿರದಲ್ಲಿ ನೀಡಲಾಗುವುದು .

ಅನ್ವೇಷಣಾ ಪ್ರಾಯೋಗಿಕ ಪ್ರಯೋಗಾಲಯದ ಅವಧಿಯಲ್ಲಿ ಯೋಜನೆಗಳನ್ನು ಸಿದ್ದಮಾಡುವುದು,ತಜ್ಞರ ಮಾರ್ಗದರ್ಶನ ನೀಡುವುದು, ಯಶಸ್ವಿ ಪೂರ್ಣಗೊಳಿಸುವಿಕೆಯ ನಂತರ ಪ್ರಮಾಣಪತ್ರ ವಿತರಿಸಲಾಗುವುದು.ಅಲ್ಲದೆ ಪ್ರಶಸ್ತಿಗಳು, ಅತ್ಯುತ್ತಮ ಯೋಜನೆ ಪ್ರಶಸ್ತಿ, ಅತ್ಯುತ್ತಮ ನವೀನ ಕಲ್ಪನೆ ಪ್ರಶಸ್ತಿ ಹಾಗೂ ಅತ್ಯುತ್ತಮ ಪ್ರಸ್ತುತಿ ಪ್ರಶಸ್ತಿಗಳನ್ನು ನೀಡಲಾಗುದು ಎಂದು ಶಿಬಿರದ ಸಮಯೋಜಕರಾದ ಡಾ. ಡಾ. ಡಾ.ಜೀವಿತ್ ಎಸ್. ಹೆಚ್ ತಿಳಿಸಿದ್ದಾರೆ.

ಸಂಪನ್ಮೂಲ ವ್ಯಕ್ತಿಗಳಾದ ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯ ಮಾಜಿ ಕಾರ್ಯದರ್ಶಿ ಡಾ. ಎಸ್. ಜಿ. ಶ್ರೀಕಂಠೇಶ್ವರ ಸ್ವಾಮಿ ಅವರು ಸಂವಹನ ಕೌಶಲ್ಯಗಳು ಮತ್ತು ವೃತ್ತಿಪರ ಅಭಿವೃದ್ಧಿ ಕುರಿತು ಸಂವಾದ ಮತ್ತು ತರಬೇತಿ ನೀಡಿದರು.

ಎಲೆಕ್ಟ್ರಾನಿಕ್ಸ್ ಮತ್ತು ಟೆಲಿಕಮ್ಯೂನಿಕೇಷನ್ ವಿಭಾಗದ ಸಹಾಯಕ ಪ್ರಾಧ್ಯಾಪಕರುಗಳಾದ ಪ್ರೊ. ಯೋಗೀಶ್ ಎಂ ಮತ್ತು ಪ್ರೊ. ಕೆವಿನ್ ಅವರು ಎಂಬೆಡೆಡ್ ಸಿಸ್ಟಮ್ಸ್ ಮತ್ತು ರೊಬೊಟಿಕ್ಸ್ ಬಗ್ಗೆ ಬೆಳಕು ಚೆಲ್ಲಿದರು.

ಜೈವಿಕ ವೈದ್ಯಕೀಯ ಎಂಜಿನಿಯರಿಂಗ್ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಪ್ರೊ. ರಾಘವೇಂದ್ರ ಡಿ. ಅವರು ಸಾಫ್ಟ್‌ವೇರ್ ಅಭಿವೃದ್ಧಿ ವಿಷಯಗಳನ್ನು ವಿದ್ಯಾರ್ಥಿಗಳೊಂದಿಗೆ ಪ್ರಾಯೋಗಿಕವಾಗಿ ಹಂಚಿಕೊಂಡರು. ಎಲೆಕ್ಟ್ರಾನಿಕ್ಸ್ ಮತ್ತು ಟೆಲಿಕಮ್ಯೂನಿಕೇಷನ್ ವಿಭಾಗದ ಸಹಾಯಕ ಮನೋಜ್ ಎಂ. ಆರ್., ಅವರು ವಿನ್ಯಾಸ ಮತ್ತು ಲೇಔಟ್‌ಗಳ ಬಗ್ಗೆ ವಿಷಯಗಳನ್ನು ಮಂಡಿಸಿದರು. ಶಿಬಿರದ ಸಂಯೋಜಕರಾಗಿ ಪ್ರಾಧ್ಯಾಪಕರಾದ ಪ್ರೊ. ಯೋಗೀಶ್ ಎಂ, ಡಾ. ಜೀವಿತ್ ಎಸ್. ಹೆಚ್.,ಪ್ರೊ. ಕೆವಿನ್ ಮತ್ತು ಡಾ. ಕೋಮಲ ಕೆ, ವಿದ್ಯಾರ್ಥಿ ಘಟಕದ ಪ್ರಿಯಾಂಕ ಮತ್ತು ಅಜಯ್ ಎಂ. ಆರ್. ಶಿಬಿರದಲ್ಲಿ ಕಾರ್ಯನಿರ್ವಹಿಸಿದರು.

# ಹೆಲಿರೈಡ್ ಸೇರಿದಂತೆ ಹಲವು ಆಕರ್ಷಣೆಗಳೊಂದಿಗೆ ತುಮಕೂರು ದಸರಾ: ಡಿಸಿಎಂ ಪರಮೇಶ್ವರ್



**ತುಮಕೂರು:** ದಸರಾ ಮಹೋತ್ಸವದ ಅಂಗವಾಗಿ ಹೆಲಿರೈಡ್ ಸೇರಿದಂತೆ ಹಲವು ಆಕರ್ಷಣೆಗಳೊಂದಿಗೆ ವಿವಿಧ ಚಟುವಟಿಕೆಗಳನ್ನು ಆಯೋಜಿಸಲಾಗಿದೆ. ಕಳೆದ ವರ್ಷದಂತೆ ಈ ಬಾರಿಯೂ ಹೆಲಿಕಾಪ್ಟರ್ ರೈಡ್ ವ್ಯವಸ್ಥೆ ಮಾಡಲಾಗಿದೆ. ಪೂಜ್ಯ ಸ್ವಾಮೀಜಿಗಳು ಹೆಲಿರೈಡ್‌ನಲ್ಲಿ ಪಾಲ್ಗೊಂಡು ಒಂದು ಸುತ್ತು ಪ್ರಯಾಣಿಸಿರುವುದು ಸಂತೋಷದ ಸಂಗತಿಯಾಗಿದೆ ಎಂದು ಉಪಮುಖ್ಯಮಂತ್ರಿಗಳು ಹಾಗೂ ತುಮಕೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ.ಪರಮೇಶ್ವರ ಅವರು ಹೇಳಿದರು.

ತುಮಕೂರು ವಿಶ್ವವಿದ್ಯಾಲಯದ ಆವರಣದಲ್ಲಿ ತುಮಕೂರು ದಸರಾ ಮಹೋತ್ಸವದ ಅಂಗವಾಗಿ ಹೆಲಿರೈಡ್‌ಗೆ ಚಾಲನೆ ನೀಡಿದ ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಮೈಸೂರು ದಸರಾದ ಐತಿಹಾಸಿಕ ಮಹತ್ವ, ತುಮಕೂರು ದಸರಾ ಆಯೋಜನೆಯ ಉದ್ದೇಶದ ಬಗ್ಗೆ ವಿವರಿಸಿದರು.

ಮೈಸೂರು ದಸರಾ ನಮ್ಮ ರಾಜ್ಯದ ಅತ್ಯಂತ ಮಹತ್ವದ ಐತಿಹಾಸಿಕ ಪರಂಪರೆಯಾಗಿದೆ. ಹಿಂದಿನ ಕಾಲದಲ್ಲಿ ಮಹಾರಾಜರು ನಡೆಸಿಕೊಂಡು ಬಂದಿದ್ದು, ಅವರ ನಂತರ ಸರ್ಕಾರವು ಅದನ್ನು ಮುನ್ನಡೆಸಿಕೊಂಡು ಬಂದಿದೆ. ಪ್ರತಿವರ್ಷ ತಾಯಿ ಚಾಮುಂಡೇಶ್ವರಿಯನ್ನು ಆರಾಧಿಸಿ, ಪೂಜೆ ಸಲ್ಲಿಸಿ, ನಾಡಿನ ಪ್ರತಿಯೊಬ್ಬ ನಾಗರಿಕನಿಗೂ ಶಾಂತಿ ಮತ್ತು ನೆಮ್ಮದಿ ದೊರೆಯಲಿ ಎಂದು ಪ್ರಾರ್ಥಿಸಲಾಗುತ್ತದೆ ಎಂದರು. ಕಳೆದ ಎರಡು ವರ್ಷಗಳಿಂದ ತುಮಕೂರು ದಸರಾಕ್ಕೆ ಉತ್ತಮ ಸ್ಪಂದನೆ ದೊರೆತಿದ್ದು, ಈ ವರ್ಷ ಮೂರನೇ ಬಾರಿಗೆ ಮಹೋತ್ಸವವನ್ನು ಆಯೋಜಿಸಲಾಗಿದೆ. ತುಮಕೂರು ಜಿಲ್ಲೆಯ ಜನರು ಈ ಮಹೋತ್ಸವದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳ ಪ್ರಯೋಜನ ಪಡೆದುಕೊಳ್ಳಬೇಕು. ಜಿಲ್ಲೆಯ ಜನರೆಲ್ಲರೂ ಒಟ್ಟಾಗಿ ಆಚರಿಸುವ ಹಬ್ಬವಾಗಿ ತುಮಕೂರು ದಸರಾ ರೂಪುಗೊಳ್ಳಬೇಕು ಎಂಬುದು ನಮ್ಮ ಆಶಯವಾಗಿದೆ ಎಂದು ಹೇಳಿದರು.

# ಸ್ಥಳೀಯ ಕಲಾವಿದರಿಗೆ ಹೆಚ್ಚಿನ ಅವಕಾಶ ದೊರೆಯಲಿ: ಡಾ. ಜಿ. ಪರಮೇಶ್ವರ್



**ತುಮಕೂರು:** ಸ್ಥಳೀಯ ಕಲಾವಿದರಿಗೆ ಹೆಚ್ಚಿನ ಅವಕಾಶ ದೊರೆಯಬೇಕು ಎಂದು ಉಪಮುಖ್ಯಮಂತ್ರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ಅವರು ತಿಳಿಸಿದರು.

ನಾಡಹಬ್ಬ ತುಮಕೂರು ದಸರಾ ಉತ್ಸವದ ಅಂಗವಾಗಿ ಗುಬ್ಬಿ ವೀರಣ್ಣ ಕಲಾಕ್ಷೇತ್ರದಲ್ಲಿ ನಿರ್ಮಿಸಿರುವ ಬೆಳ್ಳಾವೆ ನರಹರಿ ಶಾಸ್ತ್ರಿಗಳ ರಂಗವೇದಿಕೆಯಲ್ಲಿ ಆಯೋಜಿಸಿದ್ದ “ತುಮಕೂರು ರಂಗ ದಸರಾ ನಾಟಕೋತ್ಸವ–2026”ಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ದಸರಾ ಹಬ್ಬವು ನಮ್ಮ ಕಲೆ, ಸಂಸ್ಕೃತಿ ಮತ್ತು ಧಾರ್ಮಿಕ ಪರಂಪರೆಯನ್ನು ಉಳಿಸಿ ಬೆಳೆಸುವ ಮಹತ್ವದ ಉತ್ಸವವಾಗಿದೆ. ನಮ್ಮ ಪೂರ್ವಜರು ನೀಡಿರುವ ಸಾಂಸ್ಕೃತಿಕ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು.

ವಿಶ್ವದಾದ್ಯಂತ ಭಾರತೀಯ ಸಂಸ್ಕೃತಿಗೆ ಗೌರವವಿದೆ. ಕಲಾವಿದರಿಗೆ ತಮ್ಮ ಪ್ರತಿಭೆ ಪ್ರದರ್ಶಿಸಲು ಹೆಚ್ಚಿನ ಅವಕಾಶಗಳನ್ನು ಕಲ್ಪಿಸಬೇಕು. ಅದರಲ್ಲೂ ಸ್ಥಳೀಯ ಕಲಾವಿದರಿಗೆ ಆದ್ಯತೆ ನೀಡುವ ಮೂಲಕ ಅವರ ಪ್ರತಿಭೆಯನ್ನು ಪ್ರೋತ್ಸಾಹಿಸುವ ಸಲುವಾಗಿ ಈ ವೇದಿಕೆಯನ್ನು ನಿರ್ಮಿಸಿ ಅವಕಾಶ ನೀಡಲಾಗಿದೆ ಎಂದು ತಿಳಿಸಿದರು. ರಂಗ ದಸರಾ ನಾಟಕೋತ್ಸವದಲ್ಲಿ ಹತ್ತು ದಿನಗಳ ಕಾಲ ನಡೆಯುವ ನಾಟಕ ಪ್ರದರ್ಶನಗಳು ಹಾಗೂ ವಿವಿಧ ಕಲಾ ಕಾರ್ಯಕ್ರಮಗಳನ್ನು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ವೀಕ್ಷಿಸಿ ಕಲಾವಿದರನ್ನು ಪ್ರೋತ್ಸಾಹಿಸಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಡಾ. ಜಿ. ಪರಮೇಶ್ವರ್ ಅವರು ಹಾಡೊಂದನ್ನು ಹಾಡಿ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿದರು.

ಕಾರ್ಯಕ್ರಮದಲ್ಲಿ ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ. ಮಹೇಶ್, ಹಿರಿಯ ಕಲಾವಿದ ಡಾ: ಲಕ್ಷ್ಮಣ್‌ದಾಸ್, ಕನ್ನಿಕಾ ಪರಮೇಶ್ವರಿ, ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ವಿ. ಅಶ್ವಿಜಾ, ಅಪರ ಜಿಲ್ಲಾಧಿಕಾರಿ ಡಾ: ತಿಪ್ಪೇಸ್ವಾಮಿ ಸೇರಿದಂತೆ ಮತ್ತಿತರರು ಹಾಜರಿದ್ದರು.

# ಸುಭಿಕ್ಷ ನಾಡಿಗಾಗಿ ದಸರಾ ಆಚರಣೆ–ಪರಮೇಶ್ವರ್





**ತುಮಕೂರು:** ತಾಯಿ ಚಾಮುಂಡೇಶ್ವರಿ ಆರಾಧನೆ ಮೂಲಕ ಸುಭಿಕ್ಷ ನಾಡು, ಜನರ ಶಾಂತಿ ಮತ್ತು ನೆಮ್ಮದಿಗಾಗಿ ದಸರಾ ಉತ್ಸವವನ್ನು ಆಚರಿಸಲಾಗುತ್ತಿದೆ ಎಂದು ಉಪಮುಖ್ಯಮಂತ್ರಿ ಡಾ: ಜಿ. ಪರಮೇಶ್ವರ ತಿಳಿಸಿದರು.

ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜು ಮೈದಾನದ ಅಮರಶಿಲ್ಪಿ ಜಕಣಾಚಾರಿ ಸಾಂಸ್ಕೃತಿಕ ವೈಭವ ಮಹಾವೇದಿಕೆಯಲ್ಲಿ ಜಿಲ್ಲಾಡಳಿತದ ವತಿಯಿಂದ ಅಕ್ಟೋಬರ್ 11 ರಿಂದ 21ರವರೆಗೆ ಒಟ್ಟು 11 ದಿನಗಳ ಕಾಲ ಹಮ್ಮಿಕೊಂಡಿರುವ ತುಮಕೂರು ದಸರಾ ಉತ್ಸವಕ್ಕೆ ಭಾನುವಾರ ನಗಾರಿ ಬಾರಿಸುವ ಮೂಲಕ ವಿದ್ಯುಕ್ತವಾಗಿ ಚಾಲನೆ ನೀಡಿ ಮಾತನಾಡಿದ ಅವರು ಕಳೆದೆರಡು ವರ್ಷಗಳಿಂದ ಆಚರಿಸಿಕೊಂಡು ಬರುತ್ತಿರುವ ತುಮಕೂರು ದಸರಾ ಉತ್ಸವದ ಯಶಸ್ಸಿಗೆ ಕಾರಣರಾದ ಜಿಲ್ಲೆಯ ಜನತೆ, ಜನಪ್ರತಿನಿಧಿಗಳು, ಜಿಲ್ಲಾಡಳಿತಕ್ಕೆ ನಾನು ಆಭಾರಿಯಾಗಿದ್ದೇನೆ. ಜಿಲ್ಲಾಡಳಿತದೊಂದಿಗೆ ಜೊತೆ–ಜೊತೆಯಾಗಿ ಪೊಲೀಸ್ ಇಲಾಖೆ, ಜಿಲ್ಲಾ ಪಂಚಾಯತಿ, ಪಾಲಿಕೆ ಸೇರಿದಂತೆ ಎಲ್ಲ ಇಲಾಖಾಧಿಕಾರಿಗಳ ಶ್ರಮ ಶ್ಲಾಘನೀಯವೆಂದು ಸ್ಮರಿಸಿದರು.

ಬರಗಾಲದಲ್ಲಿಯೂ ದಸರಾ ಆಚರಣೆ ಏಕೆಂಬ ಕೂಗು ಕೇಳಿ ಬರುತ್ತಿದೆ. ನಾಡಿನಲ್ಲಿ ಉದ್ಭವವಾಗಿರುವ ಅನಾವೃಷ್ಟಿಯನ್ನು ಹೋಗಲಾಡಿಸಲು ಚಾಮುಂಡಿ ದೇವಿಯ ಅನುಗ್ರಹ ನಮಗೆ ಅಗತ್ಯವಿದೆ.

ನಾಡಿನ ಮಳೆ–ಬೆಳೆ ಪರಿಸ್ಥಿತಿ ಉತ್ತಮವಾಗಲೆಂದು ಈ ನವರಾತ್ರಿ ಸಂದರ್ಭದಲ್ಲಿ ದೇವಿಯನ್ನು ಪೂಜಿಸುವುದನ್ನು ಹಿರಿಯರು ನಮಗೆ ಬಳುವಳಿಯಾಗಿ ಬಿಟ್ಟು ಹೋಗಿದ್ದಾರೆ. ಹಿರಿಯರ ಪರಂಪರೆಯನ್ನು ಮುಂದಿನ ಪೀಳಿಗೆಗೂ ಕೊಂಡೊಯ್ಯುವುದೇ ನಮ್ಮ ಈ ಪ್ರಯತ್ನವಾಗಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಕಳೆದೆರಡು ವರ್ಷಗಳಿಂದ ಆಚರಿಸಿಕೊಂಡು ಬರಲಾಗುತ್ತಿರುವ ದಸರಾ ಉತ್ಸವದ ಬಗ್ಗೆ ಬಂದ ಕೆಲವು ಟೀಕೆ–ಟಿಪ್ಪಣಿಗಳನ್ನು ಸ್ವೀಕರಿಸಿ ತಪ್ಪುಗಳಿದ್ದಲ್ಲಿ ಸರಿಪಡಿಸಿಕೊಂಡು ಮುಂದುವರೆಸಿಕೊಂಡು ಹೋಗಲಾಗುತ್ತಿದೆ. ಪ್ರಜೆಗಳನ್ನು ಅನೀತಿ ಹಾದಿಯಲ್ಲಿ ಸಾಗದಂತೆ ಸಾಂಸ್ಕೃತಿಕ ಹಾಗೂ ಧಾರ್ಮಿಕವಾಗಿ ಕಟ್ಟಿಹಾಕುವ ದೃಷ್ಟಿಯಿಂದ ವಿಜಯನಗರ ಸಾಮ್ರಾಜ್ಯದಲ್ಲಿ ದಸರಾ ಆಚರಣೆ ಪ್ರಾರಂಭವಾಯಿತು. ವಿಜಯನಗರ ಸಾಮ್ರಾಜ್ಯ ಅಳಿವಿನ ಅಂಚಿಗೆ ಬಂದ ಸಂದರ್ಭದಲ್ಲಿ ಉತ್ಸವ ಆಚರಣೆಯನ್ನು ಮೈಸೂರು ಸಂಸ್ಥಾನಕ್ಕೆ ಸ್ಥಳಾಂತರಿಸಲಾಯಿತು. ಅನೀತಿ, ಅಧರ್ಮ ಅಳಿದು ಧರ್ಮಕ್ಕೇ ಜಯ ಸಿಗಬೇಕೆಂದು ದೇವಿಯನ್ನು ಆರಾಧಿಸಲು ಪ್ರಾರಂಭವಾದ ಮೈಸೂರು ದಸರಾ ಇಂದು ವಿಶ್ವಪ್ರಸಿದ್ಧವಾಗಿದೆ. ಮೈಸೂರು ದಸರಾ ಉತ್ಸವದ ಸಂಭ್ರಮವನ್ನು ವೀಕ್ಷಿಸಲು ಸಾಧ್ಯವಾಗದವರು ತುಮಕೂರಿನಲ್ಲಿ ಕಣ್ತುಂಬಿಕೊಳ್ಳಲಿ ಎಂಬ ಉದ್ದೇಶದಿಂದ ದಸರಾ ಆಚರಣೆಯನ್ನು ಜಿಲ್ಲೆಯಲ್ಲಿ ಆಚರಿಸಲು ಪ್ರಾರಂಭಿಸಲಾಯಿತು ಎಂದು ತಿಳಿಸಿದರು.

ದೇವಿಯ ಆಶೀರ್ವಾದದಿಂದ ಜನಸಮುದಾಯ ಶಾಂತಿ ಹಾಗೂ ಸಹಬಾಳ್ವೆಯಿಂದ ಬಾಳಬೇಕೆಂಬ ದಸರಾ ಉತ್ಸವವನ್ನು ಆಚರಣೆ ಮಾಡಲಾಗುತ್ತಿದೆ. ಸಾಹಿತಿ ಬೆಳ್ಳಾವಿ ನರಹರಿಶಾಸ್ತ್ರಿ, ನಾಟಕರತ್ನ ಡಾ: ಗುಬ್ಬಿ ವೀರಣ್ಣ, ಅಮರಶಿಲ್ಪಿ ಜಕಣಾಚಾರಿ ಸೇರಿದಂತೆ ಜಿಲ್ಲೆಯ ಹಲವಾರು ಸಾಹಿತಿಗಳು, ಕಲಾವಿದರು ಶ್ರೀಮಂತಗೊಳಿಸಿರುವ ಸಾಹಿತ್ಯ–ಕಲೆ–ಸಂಸ್ಕೃತಿಯನ್ನು ಇಂದಿನ ಯುವಕರು ಉತ್ಸವದಲ್ಲಿ ಪಾಲ್ಗೊಂಡು ತಿಳಿದುಕೊಳ್ಳಬೇಕು ಎಂದರಲ್ಲದೆ ಜಿಲ್ಲೆಯ ಮಕ್ಕಳ ಉತ್ತಮ ಭವಿಷ್ಯಕ್ಕಾಗಿ ಕೈಗಾರಿಕಾ ಕ್ಷೇತ್ರದಲ್ಲಿ ತುಮಕೂರನ್ನು ಅಗ್ರಸ್ಥಾನಕ್ಕೆ ತರುವ ಆಶಯ ಹೊಂದಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯ ಜನತೆ ದಸರಾ ಉತ್ಸವದ ಪ್ರಯುಕ್ತ ನಗರದ ಸರ್ಕಾರಿ ಜೂನಿಯರ್ ಕಾಲೇಜು ಮೈದಾನದಲ್ಲಿ ಭವ್ಯವಾಗಿ ನಿರ್ಮಿಸಿರುವ ಶ್ರೀ ಶ್ರೀ ಶ್ರೀ ಡಾ: ಶಿವಕುಮಾರ ಮಹಾಸ್ವಾಮೀಜಿ ಧಾರ್ಮಿಕ ಮಹಾಮಂಟಪದಲ್ಲಿ ಪ್ರತಿಷ್ಠಾಪಿಸಿರುವ ಶ್ರೀ ಚಾಮುಂಡೇಶ್ವರಿ ದೇವಿಯ ದರ್ಶನ ಪಡೆದು ತಾಯಿಯ ಅನುಗ್ರಹಕ್ಕೆ ಪಾತ್ರರಾಗಬೇಕೆಂದು ಮನವಿ ಮಾಡಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ವಹಿಸಿದ್ದ ಸಿದ್ದಗಂಗಾ ಮಠದ ಶ್ರೀ ಶ್ರೀ ಶ್ರೀ ಸಿದ್ಧಲಿಂಗ ಮಹಾಸ್ವಾಮಿ ಮಾತನಾಡಿ ಮನುಷ್ಯನ ಅಂತರಂಗ–ಬಹಿರಂಗ ಶುದ್ಧಿಗಾಗಿ ಇಂತಹ ಹಬ್ಬಗಳ ಆಚರಣೆ ಅತ್ಯಾವಶ್ಯಕ. ಇಲ್ಲಿ ಪೂಜಿಸುವ ಶಕ್ತಿರೂಪಿಣಿ ಚಾಮುಂಡೇಶ್ವರಿಯ ಆಶೀರ್ವಾದ ಜಿಲ್ಲೆಗೆ ದೊರೆಯಲಿ ಎಂದು ತಿಳಿಸಿದರು.

ಎಲೆರಾಂಪುರ ಶ್ರೀ ಕುಂಚಿಟಿಗರ ಮಹಾಸಂಸ್ಥಾನ ಮಠದ ಶ್ರೀ ಶ್ರೀ ಶ್ರೀ ಡಾ: ಹನುಮಂತನಾಥ ಮಹಾಸ್ವಾಮೀಜಿ ತಮ್ಮ ಆಶೀರ್ವಚನದಲ್ಲಿ ತುಮಕೂರು ದಸರಾ ಉತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ. ದಸರಾ ಉತ್ಸವ ಆಚರಣೆಯಲ್ಲಿ ತುಮಕೂರು ಎರಡನೇ ಸ್ಥಾನ ಪಡೆದುಕೊಂಡಿದೆ ಎಂದರೆ ತಪ್ಪಾಗಲಾರದು. ಕಲೆ, ಸಾಹಿತ್ಯ, ಸಂಸ್ಕೃತಿ, ಕ್ರೀಡೆಗಳನ್ನೊಳಗೊಂಡ ಈ ದಸರಾ ಆಚರಣೆ ಮನೆ–ಮನ ಗೆಲ್ಲುವಲ್ಲಿ ಯಶಸ್ವಿಯಾಗಿದೆ ಎಂದು ನುಡಿದರು.

ಸುಕ್ಷೇತ್ರ ಸಿದ್ದರಬೆಟ್ಟ ಬಾಳೆಹೊನ್ನೂರು ಮಠದ ಶ್ರೀ ಷ: ಬ್ರ: ವೀರಭದ್ರ ಶಿವಾಚಾರ್ಯ ಮಾತನಾಡಿ ಲೋಕ ಕಲ್ಯಾಣಾರ್ಥವಾಗಿ ತಾಯಿ ಚಾಮುಂಡೇಶ್ವರಿಯು ದುಷ್ಟಶಕ್ತಿಯನ್ನು ಸಂಹರಿಸಿದಂತೆ ನಮ್ಮಲ್ಲಿರುವ ಕಾಮ, ಕ್ರೋಧ, ಮದ, ಮತ್ಸರವನ್ನು ಸಂಹಾರ ಮಾಡಿಕೊಳ್ಳಬೇಕೆಂಬುದೇ ನವರಾತ್ರಿಯ ಆಚರಣೆ ಪ್ರತೀಕವೆಂದು ಮಾರ್ಮಿಕವಾಗಿ ಹೇಳಿದರು.

ಬೆಳ್ಳಾವಿ ಶ್ರೀ ಕಾರದೇಶ್ವರ ಮಠದ ಶ್ರೀ ಶ್ರೀ ಶ್ರೀ ಕಾರದ ವೀರಬಸವ ಮಹಾಸ್ವಾಮಿಗಳು ಮಾತನಾಡಿ ಜಿಲ್ಲಾ ದಸರಾ ಉತ್ಸವವು “ತುಮಕೂರು ದಸರಾ–ಎಷ್ಟೊಂದು ಸುಂದರ” ಎನ್ನುವಂತೆ ಮಾಡಿದೆ. ಬರಗಾಲವಿದ್ದರೂ ದಸರಾ ಆಚರಣೆ ಮೂಲಕ ಜಿಲ್ಲೆಯಲ್ಲಿ ಉಂಟಾಗಿರುವ ಬರಪರಿಸ್ಥಿತಿಯಿಂದ ಪಾರು ಮಾಡೆಂದು ದೇವಿಸ್ತುತಿ ಮಾಡುವುದು ತಪ್ಪಲ್ಲವೆಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ್ದ ಶಾಸಕ ಜ್ಯೋತಿಗಣೇಶ್ ಮಾತನಾಡಿ ದೇವಿಯನ್ನು ಪ್ರತಿಷ್ಠಾಪಿಸಲು ನಿರ್ಮಿಸಿರುವ ದಸರಾ ಉತ್ಸವದ ಧಾರ್ಮಿಕ ಮಂಟಪವು ಅರಮನೆ ಪ್ರವೇಶ ಮಾಡಿದ ಅನುಭವ ನೀಡುತ್ತದೆ. ದೇವಿಯ ಅಲಂಕಾರವು ಎಲ್ಲರ ಮನದಲೂ ಭಕ್ತಿ–ಭಾವ ಮೂಡುವಂತಿದೆ. ದಸರಾ ಉತ್ಸವವು ಧಾರ್ಮಿಕ ಭಾವನೆ ಮೂಡಿಸುವುದಲ್ಲದೆ ಇಲ್ಲಿ ಏರ್ಪಡಿಸಿರುವ ವಸ್ತುಪ್ರದರ್ಶನವು ವಿದ್ಯಾರ್ಥಿಗಳಿಗೆ ಜಾನಾರ್ಜನೆಯನ್ನೂ ನೀಡುತ್ತದೆ. ತುಮಕೂರಿನ ಜನರು ದೇವಿಯ ಕೃಪಾಕಟಾಕ್ಷದೊಂದಿಗೆ ವಸ್ತುಪ್ರದರ್ಶನದ ಪ್ರಯೋಜನ ಪಡೆಯಬೇಕೆಂದು ಮನವಿ ಮಾಡಿದರು.

ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ಸ್ವಾಗತಿಸಿದರು. ರಾಣಿ ಸತೀಶ್ ನಿರೂಪಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ್ ಕು ಮಿರ್ಜಿ ವಂದಿಸಿದರು.

ವೇದಿಕೆಯಲ್ಲಿ ನವದೆಹಲಿಯ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ ಹಾಗೂ ಶಾಸಕ ಟಿ.ಬಿ. ಜಯಚಂದ್ರ, ರಾಜ್ಯ ಕಾಂಪೋಸ್ಟ್ ಅಭಿವೃದ್ಧಿ ನಿಗಮದ ಎ.ಎನ್. ನಟರಾಜ್ ಗೌಡ, ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ. ಮಹೇಶ್, ಶಾಸಕ ಷಡಕ್ಷರಿ, ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ಅಧ್ಯಕ್ಷ ಹಾಗೂ ಶಾಸಕ ಹೆಚ್.ವಿ. ವೆಂಕಟೇಶ್, ವಿಧಾನ ಪರಿಷತ್ ಸದಸ್ಯ ಡಿ.ಟಿ. ಶ್ರೀನಿವಾಸ್, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಜಿ. ಚಂದ್ರಶೇಖರ್ ಗೌಡ, ಬಿಎಂಟಿಸಿ ಉಪಾಧ್ಯಕ್ಷ ನಿಕೇತ್ ರಾಜ್ ಎಂ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ವಿ. ಅಶ್ವಿಜಾ, ಪಾಲಿಕೆ ಆಯುಕ್ತೆ ಶುಭ, ತಹಶೀಲ್ದಾರ್ ರಾಜೇಶ್ವರಿ ಸೇರಿದಂತೆ ಮತ್ತಿತರರು ಹಾಜರಿದ್ದರು.

ಡಿಸಿಎಂ ದಂಪತಿಗಳಿಂದ ದೇವಿಗೆ ಪೂಜೆ: ಇದಕ್ಕೂ ಮುನ್ನ ದಸರಾ ಉತ್ಸವ ಪ್ರಯುಕ್ತ ನಗರದ ಸರ್ಕಾರಿ ಜೂನಿಯರ್ ಕಾಲೇಜು ಮೈದಾನದಲ್ಲಿ ಪ್ರತಿಷ್ಠಾಪಿಸಿರುವ ಶೈಲಪುತ್ರಿ ಅಲಂಕಾರದಲ್ಲಿ ಕಂಗೊಳಿಸುತ್ತಿದ್ದ ಚಾಮುಂಡೇಶ್ವರಿ ದೇವಿಗೆ ಉಪಮುಖ್ಯಮಂತ್ರಿ ಡಾ: ಜಿ. ಪರಮೇಶ್ವರ್ ಹಾಗು ಕನ್ನಿಕಾಪರಮೇಶ್ವರಿ ದಂಪತಿಗಳಿಂದ ಪೂಜೆ ಸಲ್ಲಿಸಲಾಯಿತು.

ದಂಪತಿ ಸಮೇತ ಗಣಹೋಮ, ನವಗ್ರಹ ಹೋಮ, ಮೃತ್ಯುಂಜಯ ಹೋಮ, ಶ್ರೀ ದುರ್ಗಾ ಹೋಮ, ಪೂರ್ಣಾಹುತಿಯಲ್ಲಿ ಭಾಗಿಯಾಗಿ ದೇವಿಯ ಆಶೀವಾದ ಪಡೆದರು.

ದಸರಾ ಉತ್ಸವದ ಧ್ವಜಾರೋಹಣಕ್ಕೆ ಪ್ರವೇಶದ್ವಾರದಿಂದ ಡಿಸಿಎಂ ದಂಪತಿ ಹಾಗೂ ಗಣ್ಯರನ್ನು ಹಸಿರು ಸೀರೆಯುಟ್ಟ ಮಹಿಳೆಯರು ಪೂರ್ಣಕುಂಭದೊಂದಿಗೆ ಸ್ವಾಗತಿಸಿದರು. ನಂದಿಧ್ವಜಪೂಜೆ ನೆರವೇರಿಸಿ ಧಾರ್ಮಿಕ ವಿಧಿ–ವಿಧಾನಗಳಿಗೆ ಶಾಸ್ತ್ರೋಕ್ತವಾಗಿ ಚಾಲನೆ ನೀಡಲಾಯಿತು.

## ಸರ್ಕಾರಿ ನೌಕರರ ಸೇವಾ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಮಧುಗಿರಿ :** ಉತ್ತಮ ಸಾರ್ವಜನಿಕ ಸೇವೆ ಸಲ್ಲಿಸಿದ ರಾಜ್ಯ ಸರ್ಕಾರದ ಅಧಿಕಾರಿ ಹಾಗೂ ನೌಕರರಿಗೆ ರಾಜ್ಯಾಧ್ಯಕ್ಷರಾದ ಸಿ.ಎಸ್ ಷಡಾಕ್ಷರಿ ನೇತೃತ್ವದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ವತಿಯಿಂದ ಸರ್ಕಾರಿ ನೌಕರರ ಸೇವಾ ಪ್ರಶಸ್ತಿಗೆ ನಾಮನಿರ್ದೇಶನಗಳನ್ನು ಆಹ್ವಾನಿಸಲಾಗಿದೆ ಎಂದು ಮಧುಗಿರಿ ಶೈಕ್ಷಣಿಕ ಜಿಲ್ಲೆಯ ಜಿಲ್ಲಾಧ್ಯಕ್ಷ ರಂಗಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಪ್ರಶಸ್ತಿಯ ಉದ್ದೇಶ** : ದಕ್ಷತೆ, ಕ್ರಿಯಾಶೀಲ, ಪ್ರಾಮಾಣಿಕತೆ, ಜನಾನುರಾಗಿ, ಅನನ್ಯ ಶ್ಲಾಘನೀಯ ಹಾಗೂ ಮಾದರಿ ಸೇವೆಯನ್ನು ಸಲ್ಲಿಸಿದ ರಾಜ್ಯ ಸರ್ಕಾರಿ ನೌಕರರನ್ನು ಗುರುತಿಸಿ ಅವರ ಸೇವೆಯನ್ನು ಗೌರವಿಸುವುದು ಹಾಗೂ ತನ್ಮೂಲಕ ಇತರೆ ನೌಕರರಲ್ಲೂ ಸೇವಾ ಮನೋಭಾವವನ್ನು ಉತ್ತೇಜಿಸುವುದಾಗಿದೆ.

**ನಾಮನಿರ್ದೇಶನ ಸಲ್ಲಿಸಲು ಅರ್ಹತೆ ಮತ್ತು ವಿಧಾನ :** ರಾಜ್ಯ ಸರ್ಕಾರದ ಗ್ರೂಪ್ ಎ ಬಿ ಸಿ ಡಿ ವೃಂದದ ಖಾಯಂ ನೌಕರರಾಗಿದ್ದು, ಸಂಘಕ್ಕೆ ಪ್ರತಿವರ್ಷ ವಾರ್ಷಿಕ ಸದಸ್ಯತ್ವ ಶುಲ್ಕ ಪಾವತಿಸಿರಬೇಕು, ಸರ್ಕಾರಿ ಸೇವೆಗೆ ಸೇರ್ಪಡೆಗೊಂಡು ಕನಿಷ್ಠ ಐದು ವರ್ಷಗಳ ಸೇವೆಯನ್ನು ಪೂರ್ಣಗೊಳಿಸಿರಬೇಕು, ಯಾವುದೇ ನೌಕರರು ಸ್ವತ: ಅರ್ಜಿ ಸಲ್ಲಿಸುವಂತಿಲ್ಲ, ಇಲಾಖೆಗಳ ಮುಖ್ಯಸ್ಥರು, ಮೇಲಾಧಿಕಾರಿಗಳು, ಸಹೋದ್ಯೋಗಿಗಳು, ಸಂಘ-ಸಂಸ್ಥೆಗಳು, ಸಾರ್ವಜನಿಕರು, ರಾಜ್ಯ ಸರ್ಕಾರಿ ನೌಕರರ ಜಿಲ್ಲಾ /ತಾಲ್ಲೂಕು ಸಂಘಗಳ ಪದಾಧಿಕಾರಿಗಳು ಅರ್ಹ ನೌಕರರನ್ನು ಪ್ರಶಸ್ತಿಗೆ ಸೂಚಿಸಬಹುದಾಗಿದೆ. ಅರ್ಜಿಯನ್ನು ಕಡ್ಡಾಯವಾಗಿ ಆನ್ಲೈನ್ POWERMEDIA.INFO ಲಿಂಕ್ ಮುಖಾಂತರ ಕೊನೆಯ ದಿನಾಂಕವಾದ ಅಕ್ಟೋಬರ್ ಹದಿನೈದರೊಳಗಾಗಿ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾಧ್ಯಕ್ಷ ರಂಗಪ್ಪ (9901819994), ಜಿಲ್ಲಾ ಕಾರ್ಯದರ್ಶಿ ಮಂಜುನಾಥ್ ಬಿ (9743251399), ಜಿಲ್ಲಾ ಖಜಾಂಚಿ ನಟರಾಜ ಎಂ.ಎನ್ (9900897526), ರಾಜ್ಯ ಪರಿಷತ್ ಸದಸ್ಯ ರವಿಕುಮಾರ್(9964744418) ರನ್ನು ಸಂಪರ್ಕಿಸಲು ಕೋರಿದೆ.

# ಟಿ ಅಂಗಡಿಗಳು ಇಂದು 'ಸ್ಮೋಕಿಂಗ್ ಜೋನ್'

## ಧರ್ಮಸ್ಥಳ ಯೋಜನೆಯ ಜಿಲ್ಲಾ ನಿರ್ದೇಶಕ ಪ್ರವೀಣ್ ಕುಮಾರ್ ಕಳವಳ

**ಹುಳಿಯಾರು:** ಇಂದಿನ ದಿನಗಳಲ್ಲಿ ಹಳ್ಳಿಯ ಸಣ್ಣಪುಟ್ಟ ಟಿ ಸ್ಟಾಲ್‌ಗಳು ಕೂಡ ಸಿಗರೇಟ್ ಜೋನ್‌ಗಳಾಗಿ (ಸ್ಮೋಕಿಂಗ್ ಜೋನ್) ಪರಿವರ್ತನೆಯಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಧೂಮಪಾನ ಹಾಗೂ ಮದ್ಯಪಾನದ ಜೊತೆಗೆ ಯುವಜನತೆ ಮತ್ತು ವಿದ್ಯಾರ್ಥಿಗಳು 'ಡ್ರಗ್ಸ್' ನಂತಹ ಮಾರಕ ಪಿಡುಗಿಗೆ ಅಡಿಯಾಗುತ್ತಿರುವುದು ಕಳವಳ ತಂದಿದೆ. ಈ ವ್ಯಸನಗಳಿಂದ ಯುವಪೀಳಿಗೆಯನ್ನು ಪಾರು ಮಾಡಲು ಎಲ್ಲರೂ ಎಚ್ಚೆತ್ತುಕೊಳ್ಳಬೇಕು ಎಂದು ಧರ್ಮಸ್ಥಳ ಯೋಜನೆಯ ಜಿಲ್ಲಾ ನಿರ್ದೇಶಕ ಪ್ರವೀಣ್ ಕುಮಾರ್ ಕಳವಳ ವ್ಯಕ್ತಪಡಿಸಿದರು.

ಹುಳಿಯಾರಿನ ಅಂಬೇಡ್ಕರ್ ಭವನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಹುಳಿಯಾರಿನಲ್ಲಿ ಆಯೋಜಿಸಲಾಗಿದ್ದ 'ಗಾಂಧೀ ಸ್ಮೃತಿ ಹಾಗೂ ಜೀವನೋತ್ಸವ' ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಇಂದಿನ ಮಕ್ಕಳು ಮತ್ತು ವಿದ್ಯಾರ್ಥಿಗಳು ಮೊಬೈಲ್‌ಗೆ ತೀವ್ರವಾಗಿ ಅಡಿಕ್ಟ್ ಆಗುತ್ತಿದ್ದಾರೆ. ಶಾಲೆಯಿಂದ ಅಸೈನ್‌ಮೆಂಟ್ಸ್ ಹಾಗೂ ನೋಟ್ಸ್ ಕೊಡುತ್ತಿರುವುದರಿಂದ ಪೋಷಕರು ಮೊಬೈಲ್ ನೀಡುತ್ತಿದ್ದು, ಮಕ್ಕಳು ದಾರಿ ತಪ್ಪುತ್ತಿದ್ದಾರೆ. ಮೊಬೈಲ್‌ನ ಅತಿಯಾದ ಬಳಕೆಯಿಂದ ಮಕ್ಕಳ ಭವಿಷ್ಯ ಹಾಳಾಗುತ್ತಿದ್ದು, ಮೊಬೈಲ್ ಬಳಕೆಯನ್ನು ಆದಷ್ಟು ದೂರವಿಡುವ ಪ್ರಯತ್ನ ಮಾಡಬೇಕಿದೆ ಎಂದು ಅವರು ಕಿವಿಮಾತು ಹೇಳಿದರು.



ಹುಳಿಯಾರಿನ ಅಂಬೇಡ್ಕರ್ ಭವನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಹುಳಿಯಾರಿನಲ್ಲಿ ಆಯೋಜಿಸಲಾಗಿದ್ದ 'ಗಾಂಧೀ ಸ್ಮೃತಿ ಹಾಗೂ ಜೀವನೋತ್ಸವ' ಕಾರ್ಯಕ್ರಮದ ಉದ್ಘಾಟನೆ

2007 ರಲ್ಲಿ ಗ್ರಾಮಾಭಿವೃದ್ಧಿ ಯೋಜನೆಯಡಿ 'ಸುಜ್ಞಾನನಿಧಿ ಶಿಷ್ಯವೇತನ' ಕಾರ್ಯಕ್ರಮವು 25 ವರ್ಷಗಳ ಸವಿ ನೆನಪಿಗಾಗಿ ಪ್ರಾರಂಭವಾಯಿತು. ನಮ್ಮ ತುಮಕೂರು ಜಿಲ್ಲೆಯಲ್ಲಿ (ಚಿಕ್ಕನಾಯಕನಹಳ್ಳಿ, ಶಿರಾ, ಕೊರಟಗೆರೆ, ಮಧುಗಿರಿ ಮತ್ತು ಪಾವಗಡ ಸೇರಿದಂತೆ 5 ತಾಲೂಕುಗಳಲ್ಲಿ) ಕಳೆದ 20 ವರ್ಷಗಳಲ್ಲಿ ರೂ. 2.5 ಕೋಟಿಯಷ್ಟು ವಿದ್ಯಾರ್ಥಿ ವೇತನವನ್ನು ವಿದ್ಯಾರ್ಥಿಗಳಿಗೆ ನೀಡಲಾಗಿದೆ. ಇನ್ನು ರಾಜ್ಯಾದ್ಯಂತ ಒಟ್ಟು ರೂ. 146 ಕೋಟಿ ಮೊತ್ತದ ವಿದ್ಯಾರ್ಥಿ ವೇತನವನ್ನು ಅರ್ಹ ವಿದ್ಯಾರ್ಥಿಗಳಿಗೆ ತಲುಪಿಸುವ ಬೃಹತ್ ಸತ್ಕಾರ್ಯವನ್ನು ಪೂಜ್ಯ ಹೆಗ್ಗಡೆಯವರು ಮಾಡಿದ್ದಾರೆ ಎಂದು ತಿಳಿಸಿದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಧರ್ಮಸ್ಥಳದ ಹಣದಿಂದ ಸಾಲ ನೀಡುವುದಿಲ್ಲ ಅಥವಾ ಬಡ್ಡಿ ವಸೂಲಿ ಮಾಡುವುದಿಲ್ಲ. ಬದಲಾಗಿ, ಇದು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಸೇರಿದಂತೆ ಒಟ್ಟು 6 ಪ್ರಮುಖ ರಾಷ್ಟ್ರೀಕೃತ ಬ್ಯಾಂಕ್‌ಗಳೊಂದಿಗೆ ಒಡಂಬಡಿಕೆ ಮಾಡಿಕೊಂಡು ಬ್ಯಾಂಕಿಂಗ್ ಕರೆಸ್ಪಾಂಡೆಂಟ್ (ಬಿಸಿ) ಆಗಿ ಕಾರ್ಯನಿರ್ವಹಿಸುತ್ತಿದೆ. ಸ್ವಸಹಾಯ ಸಂಘಗಳಿಗೆ ಸಾಲ ಒದಗಿಸುವುದು ಬ್ಯಾಂಕ್‌ಗಳಾಗಿದ್ದು, ಆ ಸಾಲವನ್ನು ಮರುಪಾವತಿಸುವ ಹಾಗೂ ಸಂಘಗಳನ್ನು ಮುನ್ನಡೆಸುವ ಜವಾಬ್ದಾರಿಯನ್ನು ಧರ್ಮಸ್ಥಳ ಯೋಜನೆಯು ನಿರ್ವಹಿಸುತ್ತಿದೆ. ಪೂಜ್ಯ ಹೆಗ್ಗಡೆಯವರು ಸ್ವತಃ ಸಾಲಕ್ಕೆ ಜಾಮೀನುದಾರರಾಗಿ ನಿಂತು ಬಡವರಿಗೆ ಬ್ಯಾಂಕ್ ಮೂಲಕ ಸಾಲ ಕೊಡಿಸುವ ಕೆಲಸ ಮಾಡುತ್ತಿದ್ದಾರೆ ಎಂದು ವಿವರಿಸಿದರು.

ತಹಸೀಲ್ದಾರ್ ಎಂ.ಮಮತಾ, ಪಿಎಸ್‌ಐ ರೇಣುಕಾಯಾದವ್, ಜಿಲ್ಲಾ ಜನ ಜಾಗೃತಿ ವೇದಿಕೆಯ ಸದಸ್ಯರುಗಳಾದ ಆರ್.ಚನ್ನಬಸವಯ್ಯ, ಎಂ.ಮಲ್ಲೇಶಯ್ಯ, ಜಿ.ದಾಸಪ್ಪ, ಡಿ.ಪಿ.ಲಕ್ಷ್ಮೀಕಾಂತ್, ಟಿ.ಎಚ್.ಉಮೇಶ್, ಯೋಜನಾಧಿಕಾರಿಗಳಾದ ರಾಮಚಂದ್ರ, ಶಾಲಿನಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಶ್ರೀ ಕುಂಚಿಟಿಗರ ಮಹಾಸಂಸ್ಥಾನ ಮಠದಲ್ಲಿ ಅಕ್ಟೋಬರ್ 11ರಿಂದ 21ರವರೆಗೆ ಶರನ್ನವರಾತ್ರಿ ವೈಭವ



**ತುಮಕೂರು** :ಎಲೆರಾಂಪುರದ ಶ್ರೀ ಕುಂಚಿಟಿಗರ ಮಹಾಸಂಸ್ಥಾನ ಮಠದ ವತಿಯಿಂದ ಶ್ರೀ ನರಸಿಂಹಗಿರಿ ಸುಕ್ಷೇತ್ರದಲ್ಲಿ ಅಕ್ಟೋಬರ್ 11ರಿಂದ 21ರವರೆಗೆ ಶರನ್ನವರಾತ್ರಿ ವೈಭವವನ್ನು ಹಮ್ಮಿಕೊಳ್ಳಲಾಗಿದೆ. ಶ್ರೀ ಮಠದ ಪೀಠಾಧ್ಯಕ್ಷರ ಮಾರ್ಗದರ್ಶನದಲ್ಲಿ ನಡೆಯಲಿರುವ ಈ ಧಾರ್ಮಿಕಕಾರ್ಯಕ್ರಮದಲ್ಲಿಪ್ರತಿದಿನ ವಿಶೇಷ ಪೂಜೆ, ವಿವಿಧ ಧಾರ್ಮಿಕ ವಿಧಿವಿಧಾನಗಳು ಹಾಗೂ ದೇವತಾ ಆರಾಧನೆಗಳನ್ನು ಆಯೋಜಿಸಲಾಗಿದೆ. ಅಕ್ಟೋಬರ್ 11ರಂದು ಭಾನುವಾರದಿಂದ ಆರಂಭವಾಗುವ ಕಾರ್ಯಕ್ರಮಗಳು ಅಕ್ಟೋಬರ್ 21ರಂದು ವಿಜಯದಶಮಿಯೊಂದಿಗೆ ಸಮಾಪನಗೊಳ್ಳಲಿವೆ. ಹನ್ನೊಂದು ದಿನಗಳ ಕಾಲ ನಡೆಯಲಿರುವ ಶರನ್ನವರಾತ್ರಿ ಉತ್ಸವದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು, ವಿಶೇಷ ಅಲಂಕಾರಗಳು ಹಾಗೂ ಪೂಜಾ ಕೈಂಕರ್ಯಗಳು ನೆರವೇರಲಿವೆ. ಉತ್ಸವದ ಅಂಗವಾಗಿ ವಿವಿಧ ಗಣ್ಯರು, ಧಾರ್ಮಿಕ ಮುಖಂಡರು ಹಾಗೂ ಭಕ್ತಾದಿಗಳು ಭಾಗವಹಿಸಲಿದ್ದಾರೆ.

ಮಠದ ವತಿಯಿಂದ ಭಕ್ತಾದಿಗಳಿಗೆ ಸೂಕ್ತ ವ್ಯವಸ್ಥೆಗಳನ್ನು ಕಲ್ಪಿಸಲಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ದೇವರ ದರ್ಶನ ಪಡೆದು ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕೆಂದು ಮಠದ ಆಡಳಿತ ಮಂಡಳಿ ಮನವಿ ಮಾಡಿದೆ. ಸ್ಥಳ: ಶ್ರೀ ಕುಂಚಿಟಿಗರ ಮಹಾಸಂಸ್ಥಾನ ಮಠ, ಶ್ರೀ ನರಸಿಂಹಗಿರಿ ಸುಕ್ಷೇತ್ರ, ಎಲೆರಾಂಪುರ, ತುಮಕೂರು ಜಿಲ್ಲೆ.

ದಿನಾಂಕ: ಅಕ್ಟೋಬರ್ 11ರಿಂದ 21ರವರೆಗೆ, 2026.

### ಮುಖ್ಯಮಂತ್ರಿಗಳ ತಾಂತ್ರಿಕ ಸಲಹೆಗಾರರಾಗಿ

## ಡಾ: ಕೆ. ಜೈಪ್ರಕಾಶ್ ನೇಮಕ



**ತುಮಕೂರು:** ಮೂಲತಃ ತುಮಕೂರಿನವರಾದ ರಾಜ್ಯ ಸರ್ಕಾರದ ನಿವೃತ್ತ ಕಾರ್ಯದರ್ಶಿ ಹಾಗೂ ಹಿರಿಯ ಆಡಳಿತಾಧಿಕಾರಿ ಡಾ: ಕೆ. ಜೈಪ್ರಕಾಶ್ ಅವರನ್ನು ಕರ್ನಾಟಕದ ಮಾನ್ಯ ಮುಖ್ಯಮಂತ್ರಿಗಳ ತಾಂತ್ರಿಕ ಸಲಹೆಗಾರರನ್ನಾಗಿ ನೇಮಿಸಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ಆದೇಶ ಹೊರಡಿಸಿದೆ. ಡಾ: ಜೈಪ್ರಕಾಶ್ ಅವರು ಈ ಹಿಂದೆ ಎಂಜಿನಿಯರ್-ಇನ್-ಚೀಫ್, ಮುಖ್ಯ ಎಂಜಿನಿಯರ್ (ಅ&ಃದಕ್ಷಿಣ, ರಾಷ್ಟ್ರೀಯ ಹೆದ್ದಾರಿಗಳು) ಸೇರಿದಂತೆ ವಿವಿಧ ಉನ್ನತ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ್ದಾರೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕಾರ್ಯನಿರ್ವಹಿಸಿರುವ ಇವರು, ವಿಶ್ವೇಶ್ವರಯ್ಯ ಜಲ ನಿಗಮ ಹಾಗೂ ಕಾವೇರಿ ನೀರಾವರಿ ನಿಗಮಗಳ ವ್ಯವಸ್ಥಾಪಕ ನಿರ್ದೇಶಕರಾಗಿಯೂ ಸೇವೆ ಸಲ್ಲಿಸಿದ್ದಾರೆ. ಬಯಲುಸೀಮೆ ಜಿಲ್ಲೆಗಳ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವ ಮಹತ್ವಾಕಾಂಕ್ಷೆಯ ಯೋಜನೆಗಳ ಅನುಷ್ಠಾನದಲ್ಲಿ ಅವರು ಪ್ರಮುಖ ಪಾತ್ರ ವಹಿಸಿದ್ದಾರೆ. ಜಲಸಂಪನ್ಮೂಲ ಕ್ಷೇತ್ರದಲ್ಲಿ ಅಪಾರ ಆಡಳಿತಾತ್ಮಕ ಅನುಭವ ಮತ್ತು ತಾಂತ್ರಿಕ ಪರಿಣತಿ ಹೊಂದಿರುವ ಜೈಪ್ರಕಾಶ್ ಅವರು, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ತಾಂತ್ರಿಕ ಸಲಹೆಗಾರರಾಗಿಯೂ ಕಾರ್ಯನಿರ್ವಹಿಸಿದ್ದಾರೆ. ಈ ನೇಮಕಾತಿಯು ತಕ್ಷಣದಿಂದ ಜಾರಿಗೆ ಬರಲಿದ್ದು, ಮುಖ್ಯಮಂತ್ರಿಗಳ ಅಧಿಕಾರಾವಧಿ ಮುಗಿಯುವವರೆಗೆ ಅಥವಾ ಮುಂದಿನ ಆದೇಶದವರೆಗೆ ಅವರು ಈ ಹುದ್ದೆಯಲ್ಲಿ ಕಾರ್ಯನಿರ್ವಹಿಸಲಿದ್ದಾರೆ.

## ಅರ್ಜಿ ಆಹ್ವಾನ

**ತುಮಕೂರು:** ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಮಕ್ಕಳು ಮತ್ತು ಯುವಜನರಲ್ಲಿರುವ ಕಲಾ ಪ್ರತಿಭೆಯನ್ನು ಗುರುತಿಸಿ ಉತ್ತೇಜಿಸಲು ಹಾಗು ಅವರಲ್ಲಿರುವ ಕಲಾ ನೈಪುಣ್ಯವನ್ನು ಪ್ರೋತ್ಸಾಹಿಸಲು ಕಲಾಪ್ರತಿಭೋತ್ಸವ ಸ್ಪರ್ಧೆಯನ್ನು ಆಯೋಜಿಸಲಾಗಿದ್ದು, ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ್ ಕು ಮಿರ್ಜಿ ತಿಳಿಸಿದ್ದಾರೆ.ಅರ್ಜಿ ಸಲ್ಲಿಸುವವರು ಭರ್ತಿ ಮಾಡಿದ ಅರ್ಜಿಯನ್ನು ಅಕ್ಟೋಬರ್ 23ರೊಳಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಡಾ: ಗುಬ್ಬಿ ವೀರಣ್ಣ ಕಲಾಕ್ಷೇತ್ರ ಬಳಿ, ತುಮಕೂರು ಇವರಿಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಬಹುದಾಗಿದೆ. ಕಲಾಪ್ರತಿಭೋತ್ಸವ ಸ್ಪರ್ಧೆಯನ್ನು 8 ರಿಂದ 14 ವರ್ಷದೊಳಗಿನ ಬಾಲಪ್ರತಿಭೆ; 14 ರಿಂದ 18 ವರ್ಷದೊಳಗಿನ ಕಿಶೋರ ಪ್ರತಿಭೆ ಹಾಗು 18 ರಿಂದ 30 ವರ್ಷದೊಳಗಿನ ಯುವ ಪ್ರತಿಭೆ ಸೇರಿದಂತೆ 3 ವಿಭಾಗಗಳಲ್ಲಿ ಆಯೋಜಿಸಲಾಗುವುದು.

ಬಾಲ ಪ್ರತಿಭೆ ಹಾಗೂ ಕಿಶೋರ ಪ್ರತಿಭೆ ವಿಭಾಗದ ಏಕ ವ್ಯಕ್ತಿ ಸ್ಪರ್ಧೆಯ ಕಲಾ ಪ್ರಕಾರಗಳಲ್ಲಿ ಶಾಸ್ತ್ರೀಯ ನೃತ್ಯ ಸ್ಪರ್ಧೆಗೆ 10 ನಿಮಿಷ; ಚಿತ್ರಕಲೆಗೆ 120 ನಿಮಿಷ ಹಾಗೂ ಸುಗಮ ಸಂಗೀತ, ಜನಪದ ಗೀತೆ, ಹಿಂದೂಸ್ತಾನಿ ವಾದ್ಯ ಸಂಗೀತ, ಕರ್ನಾಟಕ ಶಾಸ್ತ್ರೀಯ ಸಂಗೀತ ಸ್ಪರ್ಧೆಗೆ ತಲಾ 7 ನಿಮಿಷವನ್ನು ನಿಗದಿಪಡಿಸಲಾಗಿದೆ. ಯುವ ಪ್ರತಿಭೆ ವಿಭಾಗದ ಏಕ ವ್ಯಕ್ತಿ ಸ್ಪರ್ಧೆಯ ಕಲಾ ಪ್ರಕಾರಗಳಲ್ಲಿ ಶಾಸ್ತ್ರೀಯ ನೃತ್ಯ ಸ್ಪರ್ಧೆಗೆ 10 ನಿಮಿಷ; ಚಿತ್ರಕಲೆಗೆ 120 ನಿಮಿಷ ಹಾಗೂ ಆಶು ಭಾಷಣ, ಸುಗಮ ಸಂಗೀತ, ಕರ್ನಾಟಕ ಶಾಸ್ತ್ರೀಯ ಸಂಗೀತ, ಹಿಂದೂಸ್ತಾನಿ ವಾದ್ಯ ಸಂಗೀತ, ಜನಪದ ಗೀತೆ ಸ್ಪರ್ಧೆಗೆ ತಲಾ 7 ನಿಮಿಷವನ್ನು ನಿಗದಿಪಡಿಸಲಾಗಿದೆ. ಯುವಪ್ರತಿಭೆ ವಿಭಾಗದಲ್ಲಿ ನಾಟಕ ಕಲಾ ಪ್ರಕಾರದ ಸಮೂಹ ಸ್ಪರ್ಧೆಗೆ 45 ನಿಮಿಷ ಹಾಗೂ ಜನಪದ ನೃತ್ಯ ಸ್ಪರ್ಧೆಗೆ 10 ನಿಮಿಷಗಳ ಕಾಲಾವಕಾಶ ನೀಡಲಾಗುವುದು.

ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದವರನ್ನು ವಲಯ ಮಟ್ಟದ ಸ್ಪರ್ಧೆಗೆ ಹಾಗೂ ವಲಯ ಮಟ್ಟದಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದವರನ್ನು ರಾಜ್ಯ ಮಟ್ಟದ ಸ್ಪರ್ಧೆಗಳಿಗೆ ಕಳುಹಿಸಿ ಕೊಡಲಾಗುವುದು. ರಾಜ್ಯ ಮಟ್ಟದ ಏಕವ್ಯಕ್ತಿ ಸ್ಪರ್ಧೆಗಳಲ್ಲಿ ಪ್ರತಿ ಪ್ರಕಾರದಲ್ಲೂ ಪ್ರಥಮ ಸ್ಥಾನ ಗಳಿಸಿದವರಿಗೆ 15,000 ರೂ., ದ್ವಿತೀಯ 10,000 ರೂ. ಹಾಗೂ ತೃತೀಯ ಸ್ಥಾನ ಪಡೆದುಕೊಂಡವರಿಗೆ 7,500 ರೂ.ಗಳು ಹಾಗೂ ಸಮೂಹ ಸ್ಪರ್ಧೆಗಳಲ್ಲಿ ಪ್ರಥಮ 50,000 ರೂ., ದ್ವಿತೀಯ 40,000 ರೂ. ಹಾಗೂ ತೃತೀಯ 30,000 ರೂ.ಗಳ ನಗದು ಬಹುಮಾನ ನೀಡಲಾಗುವುದು. ಜಿಲ್ಲಾ ಮತ್ತು ವಲಯ ಮಟ್ಟದಲ್ಲಿ ಭಾಗವಹಿಸುವ ಎಲ್ಲಾ ಸ್ಪರ್ಧಿಗಳಿಗೂ ಪ್ರಮಾಣ ಪತ್ರ ನೀಡಲಾಗುವುದು.

ಸ್ಪರ್ಧೆಯಲ್ಲಿ ಭಾಗವಹಿಸುವ ಸ್ಪರ್ಧಿಗಳು ವಯಸ್ಸಿನ ದೃಢೀಕರಣಕ್ಕಾಗಿ ತಾವು ವ್ಯಾಸಂಗ ಮಾಡುತ್ತಿರುವ ವಿದ್ಯಾ ಸಂಸ್ಥೆಯಿಂದ ಪಡೆದ ಪ್ರಮಾಣ ಪತ್ರ, 10ನೇ ತರಗತಿ ಅಂಕಪಟ್ಟಿಯನ್ನು ಸ್ವವಿವರಗಳನ್ನು ಬರೆದ ಅರ್ಜಿಯ ಜೊತೆಗೆ ಲಗತ್ತಿಸಬೇಕು. ಚಿತ್ರಕಲಾ ಸ್ಪರ್ಧಿಗಳು ತಮಗೆ ಬೇಕಾದ ಬಣ್ಣ ಇತ್ಯಾದಿಗಳನ್ನು ತಾವೇ ತರಬೇಕು. ನೃತ್ಯ ಪ್ರದರ್ಶನವನ್ನು ಲೈವ್ ಅಥವಾ ರೆಕಾರ್ಡ್ ಮೂಲಕ ಪ್ರದರ್ಶಿಸಬಹುದು (ಸ್ಪರ್ಧಿಗಳು ಪೆನ್ ಡ್ರೈವ್ ಅಥವಾ ಸಿ.ಡಿ.ಯನ್ನು ತಾವೇ ತರಬೇಕು. ಮೊಬೈಲ್‌ಗೆ ಜಾಕ್ ಸೌಲಭ್ಯವನ್ನು ಒದಗಿಸಲಾಗುವುದು. ತೀರ್ಪುಗಾರರ ನಿರ್ಣಯವೇ ಅಂತಿಮವಾಗಿರುತ್ತದೆ. ಒಬ್ಬರಿಗೆ ಒಂದು ಕಲಾ ಪ್ರಕಾರದಲ್ಲಿ ಮಾತ್ರ ಸ್ಪರ್ಧಿಸಲು ಅವಕಾಶವಿರುತ್ತದೆ. ಶಾಲಾ ಮುಖ್ಯಸ್ಥರು ತಮ್ಮ ಶಾಲಾ ಮೂಲಕ ಸ್ಪರ್ಧಿಗಳು ಅರ್ಜಿ ಸಲ್ಲಿಸುವಾಗ ಪ್ರತಿ ಪ್ರಕಾರ(ಸಂಗೀತ, ನೃತ್ಯ ಇತರೆ) ಹಾಗೂ ಪ್ರತಿ ವಿಭಾಗದ ಸ್ಪರ್ಧಿಗಳ ಜನ್ಮ ದಿನಾಂಕವನ್ನು ದೃಢೀಕರಿಸಿ, ಪಟ್ಟಿಯನ್ನು ಪ್ರತ್ಯೇಕವಾಗಿ ಕಳುಹಿಸಬೇಕು. ಖಾಸಗಿ ಸ್ಪರ್ಧಿಯಾಗಿದ್ದಲ್ಲಿ ಶಾಲಾ/ ಕಾಲೇಜಿನ ಜನ್ಮ ದಿನಾಂಕ ದೃಢೀಕರಣ ಪತ್ರ ಅಥವಾ ಪಂಚಾಯಿತಿ, ಪುರಸಭೆ, ನಗರಸಭೆಗಳಿಂದ ಪಡೆದಿರುವ ಜನನ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

# ಮಧುಗಿರಿಯಲ್ಲಿ ಎಚ್‌ಐವಿ-ಏಡ್ಸ್ ಜಾಗೃತಿ ನಾಟಕ ಪ್ರದರ್ಶನ



**ಮಧುಗಿರಿ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ನಿಯಂತ್ರಣ ಘಟಕ, ತುಮಕೂರು ಹಾಗೂ ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ಮಧುಗಿರಿ ಇವರ ಸಹಯೋಗದೊಂದಿಗೆ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮಿಡಿಗೇಶಿಯ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಘಟಕದ ವತಿಯಿಂದ ಸಾರ್ವಜನಿಕರಲ್ಲಿ ಎಚ್‌ಐವಿ?ಏಡ್ಸ್ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಅಂಗವಾಗಿ ಮಧುಗಿರಿ ಸಾರ್ವಜನಿಕ ಆಸ್ಪತ್ರೆ, ರಾಘವೇಂದ್ರ ಮಠದ ಸಮೀಪ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮಧುಗಿರಿ ಸೇರಿದಂತೆ ಮೂರು ಸ್ಥಳಗಳಲ್ಲಿ ಎಚ್‌ಐವಿ?ಏಡ್ಸ್ ಜಾಗೃತಿ ಮೂಡಿಸುವ ಬೀದಿ ನಾಟಕ ಪ್ರದರ್ಶಿಸಲಾಯಿತು.

ಕಾರ್ಯಕ್ರಮದಲ್ಲಿ ತಾಲ್ಲೂಕು ಆರೋಗ್ಯ ಕಚೇರಿಯ ಸಿಬ್ಬಂದಿ ಹಾಗೂ ಕಾರ್ಯಕ್ರಮ ಅಧಿಕಾರಿಗಳು, ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ. ಮೋಹನ್ ಕುಮಾರ್, ಡಿಎಸ್‌ಆರ್‌ಸಿ ಆಪ್ತಸಮಾಲೋಚಕಿ ಸುಧಾ ಮಣಿ, ಮನೋವೈದ್ಯ ಡಾ. ಸ್ಯಾಮ್ಯುಯೆಲ್, ಆಯುಷ್ ವೈದ್ಯ ಡಾ. ರೆಹಮಾನ್, ನೇತ್ರ ತಜ್ಞೆ ಡಾ. ಜೆನ್ನಿ ಡಿಸೋಜ, ಮಕ್ಕಳ ತಜ್ಞೆ ಡಾ. ಇಂದಿರಾ, ಸಹಾಯಕ ಆಡಳಿತಾಧಿಕಾರಿ ನಾಗರಾಜು, ಆರ್‌ಎಚ್‌ಕೆಎನ್‌ಟಿಸಿಪಿ ಸಿಬ್ಬಂದಿ, ಶುಶ್ರೂಷಾ ಅಧೀಕ್ಷಕಿ ಚಂದ್ರಕಲಾ ಸೇರಿದಂತೆ ಆಸ್ಪತ್ರೆಯ ಸಿಬ್ಬಂದಿ ಉಪಸ್ಥಿತರಿದ್ದರು. ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮಧುಗಿರಿಯ ಪ್ರಾಂಶುಪಾಲರಾದ ಡಾ. ಕುಮಾರ್, ರಾಷ್ಟ್ರೀಯ ಸೇವಾ ಯೋಜನೆಯ ಅಧಿಕಾರಿಗಳಾದ ಡಾ. ಮಂಜುನಾಥ್, ಮಂಜುನಾಥ್ ಬಿ., ಡಾ. ಲೀಲಾವತಿ ಹಾಗೂ ಮಂಜುನಾಥ್ ಪೂಜಾರಿ, ಕಾಲೇಜಿನ ವಿದ್ಯಾರ್ಥಿಗಳು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಭಾಗವಹಿಸಿದ್ದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮಿಡಿಗೇಶಿಯ ಎನ್‌ಎಸ್‌ಎಸ್ ಅಧಿಕಾರಿ ಡಾ. ಎಲ್. ಮಂಜು ಭಾರ್ಗವಿ ಅವರ ನೇತೃತ್ವದಲ್ಲಿ ವಿದ್ಯಾರ್ಥಿಗಳಾದ ಸಂಪ್ರೀತ್, ಬಾಬಾ ಫಕ್ರುದ್ದೀನ್, ಮೇಘಲಕ್ಷ್ಮಿ, ಶಶಿಕಲಾ, ವೀಣಾ, ಮೋನಿಕಾ, ಬಿಂದು, ಸಂಧ್ಯಾ, ರೇಣುಕಾ, ಬಿಂದು ಹಾಗೂ ಕರಿಷ್ಮಾ ಕಾರ್ಯಕ್ರಮದಲ್ಲಿ ಭಾಗವಹಿಸಿದರು.

ಸಾರ್ವಜನಿಕರಲ್ಲಿ ಎಚ್‌ಐವಿ ಸೋಂಕಿನ ಕುರಿತು ಜಾಗೃತಿ ಮೂಡಿಸುವುದು ಹಾಗೂ ಯುವಜನರು ಜವಾಬ್ದಾರಿಯುತವಾಗಿ ನಡೆದುಕೊಂಡು ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂಬ ಸಂದೇಶವನ್ನು ಸಾರುವುದು ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿತ್ತು ಎಂದು ಎನ್‌ಎಸ್‌ಎಸ್ ಅಧಿಕಾರಿ ಡಾ. ಎಲ್. ಮಂಜು ಭಾರ್ಗವಿ ತಿಳಿಸಿದರು.

# ಬೇಜವಾಬ್ದಾರಿ ರಸ್ತೆ ಕಾಮಗಾರಿ ಖಂಡಿಸಿ ಪ್ರತಿಭಟನೆ

**ತಿಪಟೂರು:** ತಾಲೂಕಿನ ಲಿಂಗದಹಳ್ಳಿ ಗೇಟ್ ಬಳಿ ಲಾರಿ ಹಾಗೂ ಬೈಕ್ ನಡುವೆ ಸಂಭವಿಸಿದ ಅಪಘಾತದಲ್ಲಿ ಬೈಕ್ ಸವಾರ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮೃತರನ್ನು ನಗರದ ಗಾಂಧಿನಗರ ನಿವಾಸಿ ಆಸೀಫ್ (35) ಎಂದು ಗುರುತಿಸಲಾಗಿದೆ.

ಅಪಘಾತದ ಬಳಿಕ ಲಾರಿ ಚಾಲಕ ವಾಹನ ನಿಲ್ಲಿಸದೆ ಪರಾರಿಯಾಗಿದ್ದಾನೆ ಎನ್ನಲಾಗಿದ್ದು, ಇದರಿಂದ ಮೃತರ ಕುಟುಂಬಸ್ಥರು ಹಾಗೂ ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದರು. ವಿಷಯ ತಿಳಿದು ಮುಸ್ಲಿಂ ಸಮುದಾಯದವರು ಸೇರಿದಂತೆ ಸಾರ್ವಜನಿಕರು ಸ್ಥಳದಲ್ಲಿ ಜಮಾಯಿಸಿದರು.

ತಿಪಟೂರು-ಹಾಸನ ರಸ್ತೆ ಕಾಮಗಾರಿ ನಿಧಾನಗತಿಯಲ್ಲಿ ನಡೆಯುತ್ತಿದ್ದು, ಸುರಕ್ಷತಾ ಕ್ರಮಗಳನ್ನು ಸಮರ್ಪಕವಾಗಿ ಕೈಗೊಳ್ಳದಿರುವುದೇ ಅಪಘಾತಗಳಿಗೆ ಕಾರಣವಾಗುತ್ತಿದೆ ಎಂದು ಸಾರ್ವಜನಿಕರು ಆರೋಪಿಸಿದರು. ಕಳೆದ ಒಂದು ವರ್ಷದಿಂದ ಕಾಮಗಾರಿ ನಡೆಯುತ್ತಿದ್ದು, ಅವೈಜ್ಞಾನಿಕ ಕಾಮಗಾರಿ ಹಾಗೂ ಸೂಕ್ತ ಸೂಚನಾ ಫಲಕಗಳ ಕೊರತೆಯಿಂದ ಪದೇಪದೇ ಅಪಘಾತಗಳು ಸಂಭವಿಸುತ್ತಿವೆ. ಇದುವರೆಗೆ ನಾಲ್ಕಕ್ಕೂ ಹೆಚ್ಚು ಅಪಘಾತಗಳು ನಡೆದಿದ್ದು, ಇದೀಗ ಮತ್ತೊಂದು ಜೀವ ಬಲಿಯಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಕಾಮಗಾರಿ ಪೂರ್ಣಗೊಂಡಿರುವ ಕೆಲವೆಡೆ ಅಡ್ಡ ಕಂಬಿಗಳನ್ನು ತೆರವುಗೊಳಿಸಿಲ್ಲ. ಒಂದು ಬದಿಯಲ್ಲಿ ಕಾಮಗಾರಿ ನಡೆಸಿ ಮತ್ತೊಂದು ಬದಿಯನ್ನು ಹಾಗೆಯೇ ಬಿಡಲಾಗಿದ್ದು, ಭಾರೀ ವಾಹನಗಳು ಬಂದಾಗ ದ್ವಿಚಕ್ರವಾಹನ ಸವಾರರು ರಸ್ತೆ ಬದಿಗೆ ತೆರಳಲು ಸಾಧ್ಯವಾಗದೆ ಅಪಾಯ ಎದುರಿಸುತ್ತಿದ್ದಾರೆ. ಕಾಮಗಾರಿ ಪೂರ್ಣಗೊಳ್ಳುವವರೆಗೆ ಭಾರೀ ವಾಹನಗಳ ಸಂಚಾರ ನಿರ್ಬಂಧಿಸಬೇಕು ಎಂದು ಒತ್ತಾಯಿಸಿದರು. ಘಟನೆ ಖಂಡಿಸಿ ಸಾರ್ವಜನಿಕರು ತಾಲೂಕು ಆಡಳಿತ ಸೌಧದ ಮುಂಭಾಗ ಪ್ರತಿಭಟನೆ ನಡೆಸಿ, ರಸ್ತೆ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಬೇಕು, ಮೃತರ ಕುಟುಂಬಕ್ಕೆ ಸೂಕ್ತ ಪರಿಹಾರ ನೀಡಬೇಕು ಹಾಗೂ ಅಪಘಾತಕ್ಕೆ ಕಾರಣವಾದ ವಾಹನವನ್ನು ಪತ್ತೆಹಚ್ಚಿ ಚಾಲಕನ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಈ ಕುರಿತು ಉಪವಿಭಾಗಾಧಿಕಾರಿಗಳಿಗೆ ಮನವಿ ಸಲ್ಲಿಸಿದರು. ಸ್ಥಳಕ್ಕೆ ಡಿಎಸ್ಪಿ ಉಮೇಶ್, ನಗರ ಪೊಲೀಸ್ ಠಾಣೆ ವೃತ್ತ ನಿರೀಕ್ಷಕ ರವಿಕುಮಾರ್ ಹಾಗೂ ಗ್ರಾಮಾಂತರ ಠಾಣೆ ವೃತ್ತ ನಿರೀಕ್ಷಕ ಚಂದ್ರಶೇಖರ್ ವೆಂಕಟೇಶ್ ಭೇಟಿ ನೀಡಿ ಪ್ರತಿಭಟನಾಕಾರರೊಂದಿಗೆ ಮಾತುಕತೆ ನಡೆಸಿದರು. ರಸ್ತೆ ಸುರಕ್ಷತಾ ಸಮಸ್ಯೆಗಳನ್ನು ಸರಿಪಡಿಸುವ ಭರವಸೆ ನೀಡಿದ ಹಿನ್ನೆಲೆಯಲ್ಲಿ ಪ್ರತಿಭಟನೆ ಕೈಬಿಡಲಾಯಿತು. ಪ್ರತಿಭಟನೆಯಲ್ಲಿ ಮದೀನ ಮಸೀದಿ ಮುತವಲ್ಲಿ ಮುನಾವರ್, ಭೀಮ್ ಆರ್ಮಿ ಅಧ್ಯಕ್ಷ ಜಕ್ಕನಹಳ್ಳಿ ಮೋಹನ್, ಜೆಡಿಎಸ್ ಮುಖಂಡ ಇಮ್ರಾನ್ ಸೇರಿದಂತೆ ಹಲವರು ಭಾಗವಹಿಸಿದ್ದರು.



# ಹೊಸಹಳ್ಳಿ ಸರ್ಕಾರಿ ಶಾಲೆಯ ಹೆಣ್ಣು ಮಕ್ಕಳ ತ್ರೋಬಾಲ್ ಸಾಧನೆ

**ತಿಪಟೂರು:** ಸರ್ಕಾರಿ ಶಾಲೆಯ ಮಕ್ಕಳಲ್ಲಿಯೂ ಅಪಾರ ಪ್ರತಿಭೆ ಇದೆ; ಸೂಕ್ತ ಮಾರ್ಗದರ್ಶನ, ನಿರಂತರ ಅಭ್ಯಾಸ ಮತ್ತು ಛಲ ದೊರೆತರೆ ಅವರು ಯಾವುದೇ ಮಟ್ಟದ ಸಾಧನೆ ಮಾಡಬಲ್ಲರು ಎಂಬುದಕ್ಕೆ ತಿಪಟೂರು ತಾಲೂಕಿನ ಹೊಸಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಹೆಣ್ಣು ಮಕ್ಕಳು ಸಾಕ್ಷಿಯಾಗಿದ್ದಾರೆ.

ತುರುವೇಕೆರೆ ತಾಲೂಕಿನ ಅಮ್ಮಸಂದ್ರದಲ್ಲಿ ನಡೆದ 14 ವರ್ಷ ವಯೋಮಿತಿಯ ಜಿಲ್ಲಾಮಟ್ಟದ ತ್ರೋಬಾಲ್ ಪಂದ್ಯಾವಳಿಯಲ್ಲಿ ಹೊಸಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಹೆಣ್ಣು ಮಕ್ಕಳ ತಂಡ ಪ್ರಥಮ ಸ್ಥಾನ ಪಡೆದು ವಿಭಾಗ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದೆ.

ಈ ಗೆಲುವು ಸಾಮಾನ್ಯವಾದುದಲ್ಲ ಏಕೆಂದರೆ ಕೇವಲ 10 ರಿಂದ 12ವಿದ್ಯಾರ್ಥಿಗಳನ್ನು ಇಟ್ಟುಕೊಂಡು ಆ ವಿದ್ಯಾರ್ಥಿಗಳನ್ನೇ ಬಳಸಿಕೊಂಡು ಯಾವುದೇ ಆಯ್ಕೆಗಳಲ್ಲದೆ ತಂಡವನ್ನು ಕಟ್ಟುವುದು ಅಸಾಧ್ಯವಾದ ಕೆಲಸವಾಗಿತ್ತು ಆದರೆ ಇದನ್ನೇ ಒಂದು ದೊಡ್ಡ ಸವಾಲನ್ನಾಗಿ ತೆಗೆದುಕೊಂಡು ಈ ತಂಡವನ್ನು ದೊಡ್ಡ ಮಟ್ಟಕ್ಕೆ ಬೆಳೆಸಬೇಕೆಂದು ನಿರ್ಧರಿಸಿ ತಂಡವನ್ನು ಗೆಲುವಿನ ಕಡೆ ಕೊಂಡೊಯ್ದಿದ್ದಾರೆ.

ಒಂದೆರಡು ದಿನಗಳ ಅಭ್ಯಾಸದ ಫಲವಲ್ಲ ಸತತ ಮೂರು ವರ್ಷಗಳಿಂದ ಜಿಲ್ಲಾಮಟ್ಟಕ್ಕೆ ಆಯ್ಕೆಯಾಗುತ್ತಿದ್ದ ತಂಡ, ಈ ಬಾರಿ ಪ್ರಥಮ ಸ್ಥಾನ ಪಡೆಯಬೇಕೆಂಬ ದೃಢಸಂಕಲ್ಪದೊಂದಿಗೆ ಕಳೆದ ಮೂರು ತಿಂಗಳಿಂದ ನಿರಂತರ ಅಭ್ಯಾಸ ನಡೆಸಿತ್ತು. ಪ್ರತಿದಿನ ಬೆಳಗಿನ ಜಾವ 5 ಗಂಟೆಗೆ ಎದ್ದು ತಿಪಟೂರಿನ

ಕಲ್ಪತರು ಕ್ರೀಡಾಂಗಣದಲ್ಲಿ ತರಬೇತಿ ಪಡೆಯುತ್ತಿದ್ದ ವಿದ್ಯಾರ್ಥಿನಿಯರು, ತಮ್ಮ ಬೆವರಿನ ಪ್ರತಿಯೊಂದು ಹನಿಯನ್ನೂ ಗೆಲುವಿನ ಮೆಟ್ಟಿಲನ್ನಾಗಿ ಮಾಡಿಕೊಂಡಿದ್ದಾರೆ.

ಮೂರು ವರ್ಷಗಳ ಜಿಲ್ಲಾಮಟ್ಟದ ಅನುಭವವೂ ಈ ಮಕ್ಕಳ ಆತ್ಮವಿಶ್ವಾಸವನ್ನು ಮತ್ತಷ್ಟು ಹೆಚ್ಚಿಸಿತ್ತು. ಹಿಂದಿನ ಅನುಭವಗಳಿಂದ ಪಾಠ ಕಲಿತು, ಸೋಲನ್ನು ಸವಾಲಾಗಿ ಸ್ವೀಕರಿಸಿ, ಈ ಬಾರಿ ?ಪ್ರಥಮ ಸ್ಥಾನ ಪಡೆಯಲೇಬೇಕು? ಎಂಬ ಹಠದೊಂದಿಗೆ ಮೈದಾನಕ್ಕಿಳಿದ ತಂಡ ಅಂತಿಮವಾಗಿ ಜಿಲ್ಲಾಮಟ್ಟದ ಚಾಂಪಿಯನ್ ಆಗಿ ಹೊರಹೊಮ್ಮಿದೆ.



ಈ ಯಶಸ್ಸಿನ ಹಿಂದೆ ಶಾಲೆಯ ಮುಖ್ಯ ಶಿಕ್ಷಕ ಭರತ್ ಪಾಟೀಲ್ ಃ ಖ ಅವರ ನಿರಂತರ ಪರಿಶ್ರಮವೂ ಪ್ರಮುಖವಾಗಿದೆ ಮಕ್ಕಳಿಗೆ ನಿರಂತರ ತರಬೇತಿ ಹಾಗೂ ಮಾರ್ಗದರ್ಶನ ನೀಡಿದ ಪ್ರತಾಪ್ ಅವರ ಕೊಡುಗೆಯೂ ಈ ಸಾಧನೆಯಲ್ಲಿ ಮಹತ್ವದ್ದಾಗಿದೆ.

ಮಕ್ಕಳ ಈ ಸಾಧನೆಯ ಹಿಂದೆ ಶಾಲೆಯ ಶಿಕ್ಷಕರ ಒಗ್ಗಟ್ಟಿನ ಪ್ರಯತ್ನವೂ ಇದೆ. ಪುಷ್ಪಾವತಿ ಊ ಖ, ರೇಷ್ಮಾ ಭಾನು ಏ ಖ ಹಾಗೂ ಗಾನವಿ ಏ ಖ ಅವರು ಮಕ್ಕಳಿಗೆ ಪ್ರೋತ್ಸಾಹ ಮತ್ತು ಸಹಕಾರ ನೀಡಿದ್ದು, ಅವರ ಸಾಧನೆಗೆ ಉತ್ತೇಜನ ನೀಡಿದ್ದಾರೆ.

# ದಾಳಿಂಬೆಯ ಬೀಡು, ಜೇನಿನ ಗೂಡಾಗಿರುವ ನಮ್ಮ ಮಧುಗಿರಿ



ಏಕಶಿಲಾ ನಾಡಿನ ಯುವಕರ ಚಿತ್ತ ಮಸಣದತ್ತ!! ಕರ್ನಾಟಕ ರಾಜ್ಯದ ತುಮಕೂರು ಜಿಲ್ಲೆಯಲ್ಲಿ ಅವಿಭಾಜ್ಯ ಅಂಗವಾಗಿ ಅನೇಕ ರಾಜಮನೆತನಗಳು ಅನೇಕ ರಾಜಮನೆತನಗಳು ವಿಶ್ವದ ವಿಖ್ಯಾತ ಹೊಂದಿರುವ ಏಕಶಿಲಾ ನಗರ ದಾಳಿಂಬೆಯ ಬೀಡು, ಜೇನಿನ ಗೂಡಾಗಿರುವ ನಮ್ಮ ಮಧುಗಿರಿ ತಾಲೂಕಿಗೆ ಇತ್ತೀಚಿನ ದಿನಗಳಲ್ಲಿ ನಾವು ಕಂಡಂತೆ ಮದುಗಿರಿ ತಾಲೂಕಿನ ಜನರ ವೈಮನಸಿನ ಸೊಗಡನ್ನು ಸಕರಾತ್ಮಕ ಬದುಕು ರೂಪಿಸಿಕೊಳ್ಳುವ ಬಾಂಧವ್ಯದ ಗೂಡಾಗಿ ಇತ್ತು ವಿಜಯನಗರ ಮೈಸೂರು ಒಡೆಯರು ಹೊಯ್ಸಳರು ಚಾಲುಕ್ಯರು ಗಂಗರು ಅನೇಕ ರಾಜಮನೆತನಗಳು ಮಧುಗಿರಿಯನ್ನು ಆಳ್ವಿಕೆ ನಡೆಸಿ ನಿಟ್ಟಿನಲ್ಲಿ ನಮ್ಮ ಮಧುಗಿರಿಯನ್ನು ಗತವೈಭವದ ವಿಶ್ವಮಟ್ಟದಲ್ಲಿ ಕೊಂಡೊಯ್ಯುವ ಹೊಸ್ತಿಲಲ್ಲಿ ಹಿಂದಿನ ಪರಿಸ್ಥಿತಿ ಎಂದೆ ಹೇಳಬಹುದು ತಾಲೂಕಿನ ಯುವಕರಲ್ಲೇ ರಾಜಕೀಯ ವೈಮನಸುಗಳ ಜಾತಿ ವೈಮನಸುಗಳು ಪ್ರೀತಿಯ ವೈಮನಸುಗಳು ಹಿಡಿದು ಈ ದಿನ ಮಧುಗಿರಿಯ ಯುವಕರಲ್ಲಿ ಎಂದೆಂದೂ ಕಾಣದಂತಹ ಕೊಲೆಗಳು ಆತ್ಮಹತ್ಯೆಗಳು ಇನ್ನಿತರ ಪ್ರಾಣ ಹಾನಿ ನಡೆಯುತ್ತಾ ಬಂದಿದೆ ಆದರೆ ಇತ್ತೀಚಿನ ದಿನಗಳಲ್ಲಿ ಕೆಲವು ಮೂರು ವರ್ಷಗಳ ಹಿಂದೆ ಮಿಡಿಗೇಶಿ ಡಬಲ್ ಮರ್ಡರ್. ಮತ್ತು ಪೋಲೆನಹಳ್ಳಿ ಕಸಾಪುರ ಮಧುಗಿರಿಯ ನಗರ ಹೀಗೆ ಅನೇಕ ಮಧುಗಿರಿ ಗ್ರಾಮೀಣ ಪ್ರದೇಶದಲ್ಲಿ ಕೊಲೆಗಳು ನಡೆಯುತ್ತಲೇ ಬರುತ್ತವೆ ಕಳ್ಳತನ ಮದ್ಯಪಾನ ಮತ್ತು ಧೂಮಪಾನ ದುಶ್ಚಟ ಗಳಿಗೆ ಬಲಿಯಾಗಿ ನಮ್ಮ ಮದುಗಿರಿ ಯಾವುದೋ ದೂರದ ಆಂಧ್ರಪ್ರದೇಶದ ಪ್ಯಾ ಆಗುವ ಲಕ್ಷಣಗಳು ಎದ್ದು ಕಾಣುತ್ತಿವೆ ಆದರೆ ಎಲ್ಲಿ ಮಧುಗಿರಿ ಇಲ್ಲಿ ಫ್ಯಾಕ್ಷನಿಷ್ಟ್ ಮಧುಗಿರಿ ಹೀಗೆ ಆಗುವುದಕ್ಕೆ ಕಾರಣ ರಾಜಕೀಯ ಮೂಲ ಕಾರಣವೇ ಎಂದು ಹೇಳಬಹುದು ಮುಂದಿನದು ದೇವರ ಚಿತ್ತ.

**ಅಂತರಾಷ್ಟ್ರೀಯ ಯೋಗಪಟು ಕೃಷ್ಣಮೂರ್ತಿ ಬಿ ಎಲ್ ಬಿದರಕೆರೆ**

# ರಂಗೇರಿದ ಪರಿಷತ್ ಚುನಾವಣೆ

**ಬೆಂಗಳೂರು:** ವಿಧಾನಪರಿಷತ್‌ನ ದ್ವೈ ವಾರ್ಷಿಕ ಚುನಾವಣೆಯಲ್ಲಿ ಶಿಕ್ಷಕ ಮತ್ತು ಪದವೀಧರ ಕ್ಷೇತ್ರಗಳಿಂದ ಒಟ್ಟು 43 ಅಭ್ಯರ್ಥಿಗಳು ಚುನಾವಣಾ ಕಣದಲ್ಲಿ ಇದ್ದಾರೆ.ಅ.23 ರಂದು ಮತದಾನ ನಡೆಯಲಿರುವ 2 ಪದವೀಧರ ಹಾಗೂ 2 ಶಿಕ್ಷಕರ ಕ್ಷೇತ್ರದ ಚುನಾವಣೆ ಕಾವು ದಿನದಿಂದ ದಿನಕ್ಕೆ ಏರತೊಡಗಿದೆ.

ಬೆಂಗಳೂರು ಶಿಕ್ಷಕ ಕ್ಷೇತ್ರದಲ್ಲಿ ಆಡಳಿತಾರೂಢ ಕಾಂಗ್ರೆಸ್ ಅಭ್ಯರ್ಥಿ ಪುಟ್ಟಣ್ಣ, ಜೆಡಿಎಸ್ ಅಭ್ಯರ್ಥಿ ಎ.ಪಿ.ರಂಗನಾಥ ಸೇರಿದಂತೆ ಆರು ಮಂದಿ ಚುನಾವಣಾ ಸ್ಪರ್ಧೆಯಲ್ಲಿದ್ದಾರೆ.ಪಶ್ಚಿಮ ಪದವೀಧರ ಕ್ಷೇತ್ರದಲ್ಲಿ ಕಾಂಗ್ರೆಸ್‌ನ ಮೋಹನ್ ಲಿಂಬಿಕಾಯಿ, ಬಿಜೆಪಿಯ ಎಸ್.ವಿ.ಸಂಕನೂರ ಸೇರಿದಂತೆ 14 ಮಂದಿ ಅಭ್ಯರ್ಥಿಗಳು ಚುನಾವಣಾ ಕಣದಲ್ಲಿದ್ದಾರೆ. ಆಗ್ನೇಯ ಪದವೀಧರ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಶಶಿ, ಹುಲಿಕುಂಟೇಮಠ್, ಬಿಜೆಪಿ ಅಭ್ಯರ್ಥಿ ಕೆ.ಎಂ.ಸುರೇಶ ಸೇರಿದಂತೆ 10 ಅಭ್ಯರ್ಥಿಗಳು ಸ್ಪರ್ಧೆಯಲ್ಲಿದ್ದಾರೆ.ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು, ಬಿಜೆಪಿ ಅಭ್ಯರ್ಥಿ ಶಶಿಲ್ ಜಿ ನಮೋಶಿ ಸೇರಿದಂತೆ ಒಟ್ಟು 13 ಅಭ್ಯರ್ಥಿಗಳು ಮೇಲನೆ ಚುನಾವಣೆ ಸ್ಪರ್ಧೆಯಲ್ಲಿದ್ದಾರೆ.

ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಈ ಚುನಾವಣೆ ಪ್ರತಿಷ್ಠೆಯಾಗಿದ್ದು, ಶಿಕ್ಷಕರ ಮತ್ತು ಪದವೀಧರ ಮತದಾರರ ಮನ ಗೆಲ್ಲಲು ಮೂರೂ ಪಕ್ಷಗಳು ಹರಸಾಹಸ ಮಾಡುತ್ತಿದ್ದು, ನಿರಂತರ ಚುನಾವಣಾ ಪ್ರಚಾರದಲ್ಲಿ ತೊಡಗಿವೆ. ಪ್ರತಿನಿತ್ಯ ಒಂದಲ್ಲಾ ಒಂದು ಸಭೆ, ಸಮಾವೇಶಗಳನ್ನು ನಡೆಸಿ ಮತದಾರರ ಮನವೊಲಿಸುವ ಪ್ರಯತ್ನವನ್ನು ರಾಜಕೀಯ ಪಕ್ಷಗಳ ನಾಯಕರು, ಮುಖಂಡರು, ಕಾರ್ಯಕರ್ತರು ಮಾಡುತ್ತಿದ್ದಾರೆ. ಅ.27 ರಂದು ಮತ ಎಣಿಕೆ ನಡೆಯಲಿದ್ದು, ಬಹುತೇಕ ಅಂದು ಸಂಜೆ ವೇಳೆಗೆ ಫಲಿತಾಂಶ ದೊರೆಯುವ ಸಾಧ್ಯತೆಯಿದೆ. ಪ್ರಾಶಸ್ತ್ಯದ ಮತದಾನವಾಗಿರುವುದರಿಂದ ಫಲಿತಾಂಶ ವಿಳಂಬವಾದರೂ ಆಗಬಹುದು.

# ಅವೈಜ್ಞಾನಿಕ ಮೀಸಲಾತಿ ಪಟ್ಟಿ ರದ್ದಾಗದಿದ್ದರೆ ಬೀದಿಗಿಳಿದು ಹೋರಾಟ: ಬಿ. ಕೆ. ಮಂಜುನಾಥ್

**ಶಿರಾ:** ತಾಲೂಕು ಹಾಗೂ ಜಿಲ್ಲಾ ಪಂಚಾಯಿತಿ ಚುನಾವಣೆಯ ಮೀಸಲಾತಿಯನ್ನು ಸ್ಥಳೀಯ ಕಾಂಗ್ರೆಸ್ ಶಾಸಕರು ತಮ್ಮ ಸ್ವಾರ್ಥಕ್ಕಾಗಿ ದುರ್ಬಳಕೆ ಮಾಡಿಕೊಂಡಿದ್ದು, ನಿಷ್ಠಾವಂತ ಕಾರ್ಯಕರ್ತರು, ಹಿಂದುಳಿದ ವರ್ಗ ಹಾಗೂ ದಲಿತರನ್ನು ರಾಜಕೀಯವಾಗಿ ತುಳಿಯಲಾಗುತ್ತಿದೆ ಎಂದು ಹಿಂದುಳಿದ ವರ್ಗದ ನಾಯಕ, ಬಿಜೆಪಿ ಮುಖಂಡ ನಾರು ಅಭಿವೃದ್ಧಿ ನಿಗಮ ಮಂಡಳಿ ಮಾಜಿ ಅಧ್ಯಕ್ಷ ಬಿ. ಕೆ. ಮಂಜುನಾಥ್ ಗಂಭೀರವಾಗಿ ಆರೋಪಿಸಿದ್ದಾರೆ.

ನಗರದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಹಾಲಿ ಶಾಸಕರ ಕಾರ್ಯವೈಖರಿ, ಮೀಸಲಾತಿ ಹಂಚಿಕೆಯಲ್ಲಿನ ತಾರತಮ್ಯ ಹಾಗೂ ಮದ್ದೂರು ಕೆರೆಗೆ ನೀರು ತಂದ ವಿಚಾರದ ಕುರಿತು ತೀವ್ರ ವಾಗ್ದಾಳಿ ನಡೆಸಿದರು.

ಮೀಸಲಾತಿಯಲ್ಲಿ ಸಾಮಾಜಿಕ ನ್ಯಾಯದ ಕಗ್ಗೊಲೆ: ಶಿರಾ ವಿಧಾನಸಭಾ ಕ್ಷೇತ್ರದಲ್ಲಿ ಕಾಡುಗೊಲ್ಲ, ಕುರುಬ, ಬಲಿಜಿಗ, ಮಡಿವಾಳ, ತಿಗಳ, ಮುಸ್ಲಿಂ ಹಾಗೂ ಎಸ್‌ಸಿ/ಎಸ್‌ಟಿ ಸಮುದಾಯ ಸೇರಿದಂತೆ ಒಟ್ಟು 1,80,000 ಕ್ಕೂ ಹೆಚ್ಚು ಜನಸಂಖ್ಯೆ ಇದೆ. ಶಾಸಕರಿಗೆ ಶೇ. 80ರಷ್ಟು ಮತ ನೀಡಿದ್ದೇ ಈ ವರ್ಗಗಳು. ಆದರೆ, ಮೀಸಲಾತಿ ಪಟ್ಟಿಯಲ್ಲಿ ಈ ಸಮುದಾಯಗಳಿಗೆ ತೀವ್ರ ಅನ್ಯಾಯವಾಗಿದೆ. ಶೇ. 80ರಷ್ಟು ಹಿಂದುಳಿದ ವರ್ಗಗಳೇ ಇರುವ ನಾದೂರು ಜಿಲ್ಲಾ ಪಂಚಾಯಿತಿ ಕ್ಷೇತ್ರವನ್ನು ಸಾಮಾನ್ಯ ವರ್ಗಕ್ಕೆ ಮೀಸಲಿಟ್ಟಿರುವುದು ಇದಕ್ಕೆ ಸ್ಪಷ್ಟ ನಿದರ್ಶನ. ಮಧುಗಿರಿ ಸಂಘಟನಾತ್ಮಕ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ 7 ಕ್ಷೇತ್ರಗಳ ಪೈಕಿ 5 ಕ್ಷೇತ್ರಗಳನ್ನು ಮಹಿಳೆಯರಿಗೆ ಮೀಸಲಿಡುವ ಮೂಲಕ ಪಕ್ಷಕ್ಕಾಗಿ ದುಡಿದ ಪುರುಷರು ರಾಜಕೀಯಕ್ಕೆ ಬರದಂತೆ ವ್ಯವಸ್ಥಿತ ಸಂಚು ರೂಪಿಸಲಾಗಿದೆ," ಎಂದು ಆರೋಪಿಸಿದರು.

ಸ್ವಪಕ್ಷೀಯ ಮುಖಂಡರ ಕಡೆಗಣನೆ: ಶಾಸಕರು "ದೆಹಲಿ ವಿಶೇಷ ಪ್ರತಿನಿಧಿಯಂತಹ ಪ್ರಭಾವಿ ಸ್ಥಾನದಲ್ಲಿರುವ ಶಾಸಕರು, ದಶಕಗಳಿಂದ ಕಾಂಗ್ರೆಸ್ ಪಕ್ಷವನ್ನು ಕಟ್ಟಿ ಬೆಳೆಸಿದ್ದ ಭೂವನಹಳ್ಳಿ, ಶ್ರೀನಿವಾಸ್ ,ಗುಳಿಗೇನಹಳ್ಳಿ, ನಾಗರಾಜ್ ,ಬರಗೂರು ರಾಮೇಗೌಡರ ಕುಟುಂಬ,ಸೋರೆಕುಂಟೆ ಹಾಗೂ ಚಿರತಹಳ್ಳಿ ಗ್ರಾಮಗಳ ತಮ್ಮದೇ ಸಮಾಜದ ಪ್ರಬಲ ಮುಖಂಡರನ್ನು ವ್ಯವಸ್ಥಿತವಾಗಿ ಮೂಲೆಗುಂಪು ಮಾಡಿದ್ದಾರೆ. ಇನ್ನು ಇವರು ಹಿಂದುಳಿದ ವರ್ಗದವರನ್ನು ಎಲ್ಲಿ ಬೆಳೆಸುತ್ತಾರೆ?" ಎಂದು ಪ್ರಶ್ನಿಸಿದರು.

ಸ್ವಾಭಿಮಾನಿ ಕಾರ್ಯಕರ್ತರು, ಆದರೆ ಹಣಬಲವಿಲ್ಲ: ರಾಜಕಾರಣ ಇಂದು ಕೇವಲ ಹಣ ಮತ್ತು ಜಾತಿಯ ಆಧಾರದ ಮೇಲೆ ನಡೆಯುತ್ತಿದೆ. 2018ರ ಚುನಾವಣೆಯಲ್ಲಿ ನನಗೆ ಬಿಜೆಪಿ ಪಕ್ಷದಿಂದ ಟಿಕೆಟ್ ಘೋಷಣೆಯಾಗಿದ್ದರೂ, ಹಣದ ಬಲವಿಲ್ಲದ ಕಾರಣ ನಾನೇ ಸ್ಪರ್ಧೆಯಿಂದ ಹಿಂದೆ ಸರಿದೆ. ಆದರೆ ಬಿಜೆಪಿ ಕಾರ್ಯಕರ್ತರನ್ನು 'ಬೀದಿ ನಾಟಕಗಾರರು' ಎಂದು ಶಾಸಕರು ಟೀಕಿಸುತ್ತಿರುವುದು ಖಂಡನೀಯ. ನಮ್ಮ ಕಾರ್ಯಕರ್ತರು ಹಣಕ್ಕೆ ಮಾರಾಟವಾಗುವವರಲ್ಲ, ಸ್ವಾಭಿಮಾನಿಗಳು. ಶಿರಾ ಜನತೆ ಬುದ್ಧಿವಂತರಿದ್ದು, ಮುಂದಿನ ದಿನಗಳಲ್ಲಿ ತಕ್ಕ ಪಾಠ ಕಲಿಸಲಿದ್ದಾರೆ," ಎಂದರು.

ಈ ಸಂದರ್ಭದಲ್ಲಿ ಬಿಕೆ ಮಂಜುನಾಥ್ ಗಿರಿಧರ, ಪಡಿ ರಮೇಶ್, ರಂಗಸ್ವಾಮಿ, ಸಿಪಿಸಿ ಕರಿಯಣ್ಣ, ಮಾಜಿ ತಾಲೂಕ ಪಂಚಾಯತ್ ಸದಸ್ಯ ನಾಗರಾಜ್, ಶಿವಕುಮಾರ್, ಮಾಂತೇಶ್ ಸೈಯದ್ ಬಾಬಾ, ಕವಿತಾ ಸೇರಿದಂತೆ ಹಿಂದುಳಿದ ಮುಖಂಡರು ಉಪಸ್ಥಿತರಿದ್ದರು.



## 'ಮದಲೂರು ಕೆರೆ ಶ್ರೇಯಸ್ಸು ಬಿಜೆಪಿಗೆ ಸಲ್ಲಬೇಕು'

**ಮದಲೂರು ಕೆರೆಗೆ ನೀರು ತರುವ ಹೋರಾಟದ ನಿಜವಾದ ರೂವಾರಿಗಳು ದಿವಂಗತ ಮಾಜಿ ಶಾಸಕರಾದ ದಾಸಪ್ಪ ಹಾಗೂ ಪಿ.ಎನ್.ರಂಗನಾಥಪ್ಪ ಅವರು, ಬಿ.ಎಸ್. ಯಡಿಯೂರಪ್ಪನವರು ಮುಖ್ಯಮಂತ್ರಿ ಯಾಗಿದ್ದಾಗ ಹಾಗೂ ಮಾಜಿ ಶಾಸಕ ರಾಜೇಶ್ ಗೌಡರ ನಿರಂತರ ಪ್ರಯತ್ನದಿಂದ, ಜಿಲ್ಲೆಯಲಿ ಸಾಕಷ್ಟು ವಿರೋಧದ ನಡುವೆಯೂ ಮಾಧುಸ್ವಾಮಿ ನೇತೃತ್ವದಲ್ಲಿ ನೀರು ತರಲಾಯಿತು. ಇದರಲ್ಲಿ ಹಾಲಿ ಶಾಸಕರ ಸಾಧನೆ ಏನೂ ಇಲ್ಲ," ಎಂದು ಸ್ಪಷ್ಟಪಡಿಸಿದರು.**

## ಉಗ್ರ ಹೋರಾಟದ ಎಚ್ಚರಿಕೆ

**"ಕೇವಲ ತಮ್ಮ ಸ್ವಾರ್ಥಕ್ಕಾಗಿ ರೂಪಿಸಿರುವ ಈ ಅವೈಜ್ಞಾನಿಕ ಮೀಸಲಾತಿ ಪಟ್ಟಿಯನ್ನು ಶಾಸಕರು ಮತ್ತು ಸರ್ಕಾರ ಈ ಕೂಡಲೇ ರದ್ದುಪಡಿಸಿ ಸಾಮಾಜಿಕ ನ್ಯಾಯ ಒದಗಿಸಬೇಕು. ಇಲ್ಲವಾದಲ್ಲಿ, ಹಿಂದುಳಿದ ವರ್ಗಗಳು ಹಾಗೂ ಎಸ್‌ಸಿ/ಎಸ್‌ಟಿ ಸಮುದಾಯದ ಪರವಾಗಿ ನಾನೇ ಖುದ್ದಾಗಿ ಬೀದಿಗಿಳಿದು ಉಗ್ರ ಹೋರಾಟ ಹಮ್ಮಿಕೊಳ್ಳುತ್ತೇನೆ," ಎಂದು ಎಚ್ಚರಿಕೆ ನೀಡಿದರು.**

# ಕವಿತೆ ಹೇಳಿ ಗಿಡ ಪಡೆಯಿರಿ ವಿಶಿಷ್ಟ ಕಾರ್ಯಕ್ರಮಕ್ಕೆ ಚಾಲನೆ



**ತಿಪಟೂರು:** ಮೈಸೂರಿನ ದಸರಾ ಮಹೋತ್ಸವ ಕಾರ್ಯಕ್ರಮದಲ್ಲಿ ಸಸ್ಯ ಯಜ್ಞ ತಂಡದ ವತಿಯಿಂದ ವಿಶಿಷ್ಟ ಕಾರ್ಯಕ್ರಮವಾದ "ಕವಿತೆ ಹೇಳಿ, ಗಿಡ ಪಡೆಯಿರಿ" ಎಂಬ ಸಾಮಾಜಿಕ ಕಾರ್ಯಕ್ರಮವನ್ನು ತಿಪಟೂರಿನ ಕೆಪಿಸಿಸಿ ಸದಸ್ಯ ಹಾಗೂ ಸಮಾಜ ಸೇವಕ ವಿ.ಯೋಗೇಶ್ ಉದ್ಘಾಟಿಸಿ ಮಾತನಾಡಿದ ಅವರು, ನಮ್ಮ ಪೂಜ್ಯನೀಯ ತಂದೆ-ತಾಯಿಯವರ ಹೆಸರಿನಲ್ಲಿ 1,000 ಸಸಿಗಳನ್ನು ಸಾರ್ವಜನಿಕರಿಗೆ ವಿತರಣೆ ಮಾಡುತ್ತಿದ್ದು, ಸಾರ್ವಜನಿಕರಿಗೆ ಪರಿಸರ ಜಾಗೃತಿ ಮೂಡಿಸುವುದರೊಂದಿಗೆ, ಕನ್ನಡ ಸಾಹಿತ್ಯವನ್ನು ಬೆಳೆಸುವ ವಿಶಿಷ್ಟ ಪ್ರಯತ್ನಕ್ಕೆ ಸಸ್ಯ ಯಜ್ಞ ತಂಡಕ್ಕೆ ಹಾಗೂ ಮೈಸೂರಿನ ಜನತೆಗೆ ಅಭಿನಂದನೆಗಳನ್ನು ಸಲ್ಲಿಸುತ್ತೇನೆ ಎಂದು ತಿಳಿಸಿದರು.

ತಿಪಟೂರಿನ ಸಮಾಜ ಸೇವಕ ವಿ.ಯೋಗೇಶ್ ರವರು ಮೈಸೂರಿನಂತಹ ಸಾಂಸ್ಕೃತಿಕ ನಗರಿಯಲ್ಲಿ, ಬಹು ಮುಖ್ಯವಾದ ದಸರಾ ಕಾರ್ಯಕ್ರಮದಲ್ಲಿ ಗಿಡ ವಿತರಣೆ ಮಾಡುವುದರ ಮೂಲಕ ಸಾಹಿತ್ಯ ಲೋಕಕ್ಕೆ ವಿಶಿಷ್ಟವಾದ ಆದ್ಯತೆ ನೀಡಿ, ಸಾಮಾಜಿಕ ಸೇವೆ ಮೂಲಕ ಕಲ್ಪತರು ನಾಡಿಗೆ ಹೆಚ್ಚಿನ ಗರಿಮೆ ತಂದುಕೊಡುವಲ್ಲಿ, ಅವರ ಸೇವೆಗೆ ಸಾಕ್ಷಿಯಾಗಿದೆ ಎಂದು ದಸರಾ ಸಮಿತಿಯ ಪದಾಧಿಕಾರಿ ತಿಳಿಸಿದರು.

# ಹುಳಿಯಾರಿನಲ್ಲಿ ಬೆಂಕಿ ಗಣಪತಿ ವಿಸರ್ಜನಾ ಮಹೋತ್ಸವದ ಸಂಭ್ರಮ



**ಚಿಕ್ಕನಾಯಕನಹಳ್ಳಿ:** ತಾಲೂಕಿನ ಹುಳಿಯಾರು ಪಟ್ಟಣದ ಇಂದಿರಾನಗರದಲ್ಲಿರುವ ಬೆಂಕಿ ಗಣಪತಿ ದೇವಸ್ಥಾನದಲ್ಲಿ ಪ್ರತಿಷ್ಠಾಪಿಸಲಾಗಿದ್ದ ಗಜಾನನ ಸ್ವಾಮಿಯ ವಿಸರ್ಜನಾ ಮಹೋತ್ಸವದ ಅಂಗವಾಗಿ ಅಲಂಕೃತ ಮಂಟಪದಲ್ಲಿ ಸ್ವಾಮಿಯವರ ವಿಜೃಂಭಣೆಯ ರಾಜಬೀದಿ ಮೆರವಣಿಗೆ ಸಂಭ್ರಮದಿಂದ ಸಾಗುತ್ತಿದೆ.

ಮೆರವಣಿಗೆಯಲ್ಲಿ ಹಾಡುಗಳಿಗೆ ಹೆಜ್ಜೆ ಹಾಕುತ್ತಿರುವ ಯುವಕ-ಯುವತಿಯರು, ಮಹಿಳೆಯರ ಆಕರ್ಷಕ ಕೋಲಾಟ, ಹೆಣ್ಣುಮಕ್ಕಳ ವೀರಗಾಸೆ ನೃತ್ಯ ಹಾಗೂ ಪಟಾಕಿಗಳ ಸಿಡಿತ ಉತ್ಸವದ ಪ್ರಮುಖ ಆಕರ್ಷಣೆಗಳಾಗಿವೆ. ಭಕ್ತರ ಜೈಕಾರ ಹಾಗೂ ಮಂಗಳವಾದ್ಯಗಳ ನಡುವೆ ಗಣೇಶೋತ್ಸವಕ್ಕೆ ಭಕ್ತಿಭಾವದ ಸಂಭ್ರಮ ಮೆರಗು ನೀಡಿದೆ.

ವಿಸರ್ಜನಾ ಮಹೋತ್ಸವದಲ್ಲಿ ಭಕ್ತಾದಿಗಳು ಹಾಗೂ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಉತ್ಸವದ ಸಂಭ್ರಮವನ್ನು ಹೆಚ್ಚಿಸುವಂತೆ ಗಜಾನನ ಸೇವಾ ಚಾರಿಟಬಲ್ ಟ್ರಸ್ಟ್ ಹಾಗೂ ಗಜಾನನ ಯುವಕ ಸಂಘದ ಪದಾಧಿಕಾರಿಗಳು ಮನವಿ ಮಾಡಿದ್ದಾರೆ.

# ಶೈಲಪುತ್ರಿ ರೂಪದಲ್ಲಿ ಕಂಗೊಳಿಸಿದ ಹುಳಿಯಾರಮ್ಮ



**ಚಿಕ್ಕನಾಯಕನಹಳ್ಳಿ:** ತಾಲೂಕಿನ ಹುಳಿಯಾರುಗ್ರಾಮದೇವತೆ ಶ್ರೀ ಹುಳಿಯಾರಮ್ಮ ದೇವಾಲಯದಲ್ಲಿ ನವರಾತ್ರಿ ಮಹೋತ್ಸವದ ಮೊದಲ ದಿನವಾದ ಭಾನುವಾರ ದೇವಿಗೆ ಶೈಲಪುತ್ರಿ ಅಲಂಕಾರ ಮಾಡಲಾಗಿದ್ದು, ಭಕ್ತರ ಗಮನ ಸೆಳೆಯಿತು. ಮಹಾಲಯ ಅಮಾವಾಸ್ಯೆಯಂದು ಶ್ರೀ ಅಮ್ಮನವರನ್ನು ಪಟ್ಟಕ್ಕೆ ಕೂರಿಸುವ ಮೂಲಕ ಸಾಂಪ್ರದಾಯಿಕವಾಗಿ ನವರಾತ್ರಿ ಮಹೋತ್ಸವಕ್ಕೆ ಚಾಲನೆ ನೀಡಲಾಗಿತ್ತು. ನವರಾತ್ರಿ ಅಂಗವಾಗಿ ಪಾಡ್ಯದಿಂದ ವಿಜಯದಶಮಿಯವರೆಗೆ ಪ್ರತಿದಿನ ದೇವಿಗೆ ವಿಶೇಷ ಅಲಂಕಾರ ಹಾಗೂ ನಿತ್ಯ ಪೂಜೆ ನೆರವೇರಿಸಲಾಗುತ್ತದೆ. ಪ್ರತಿದಿನ ಸಂಜೆ 7 ಗಂಟೆಗೆ ಮಹಾಮಂಗಳಾರತಿ ನೆರವೇರಲಿದ್ದು, ಬಳಿಕ ಭಕ್ತರಿಗೆ ಪ್ರಸಾದ ವಿನಿಯೋಗ ಮಾಡಲಾಗುತ್ತದೆ. ಭಕ್ತರು ಪ್ರತಿದಿನ ದೇವಾಲಯಕ್ಕೆ ಭೇಟಿ ನೀಡಿ ಅಮ್ಮನವರ ವಿಶೇಷ ಅಲಂಕಾರಗಳ ದರ್ಶನ ಪಡೆದು ದೇವಿಯ ಕೃಪೆಗೆ ಪಾತ್ರರಾಗುವಂತೆ ದೇವಾಲಯ ಸಮಿತಿಯವರು ಮನವಿ ಮಾಡಿದ್ದಾರೆ.

# ಚಾಮುಂಡೇಶ್ವರಿ ದೇವಿಗೆ ಪೂಜೆ



**ತುಮಕೂರು:** ದಸರಾ ಉತ್ಸವ ಪ್ರಯುಕ್ತ ನಗರದ ಸರ್ಕಾರಿ ಜೂನಿಯರ್ ಕಾಲೇಜು ಮೈದಾನದಲ್ಲಿ ಪ್ರತಿಷ್ಠಾಪಿಸಿರುವ ಬ್ರಹ್ಮಚಾರಿಣಿ ಅಲಂಕಾರದಲ್ಲಿ ಕಂಗೊಳಿಸುತ್ತಿದ್ದ ಚಾಮುಂಡೇಶ್ವರಿ ದೇವಿಗೆ ಸೋಮವಾರ ಉಪಮುಖ್ಯಮಂತ್ರಿ ಡಾ: ಜಿ. ಪರಮೇಶ್ವರ್ ಅವರ ಧರ್ಮ ಪತ್ನಿ ಕನ್ನಿಕಾಪರಮೇಶ್ವರಿ ಅವರು ಪೂಜೆ ಸಲ್ಲಿಸಿದರು. ಪೂಜಾ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಸೇರಿದಂತೆ ವಿವಿಧ ಅಧಿಕಾರಿ/ಸಿಬ್ಬಂದಿ ಹಾಗೂ ಭಕ್ತಾದಿಗಳು ಭಾಗಿಯಾಗಿ ದೇವಿಯ ಆಶೀರ್ವಾದ ಪಡೆದರು.

# ವಿಶೇಷ ಸಾಧಕರಿಗೆ ಸನ್ಮಾನ



ತುಮಕೂರಿನ ಕನ್ನಡ ಭವನದಲ್ಲಿ ಗ್ರೇಟರ್ ತುಮಕೂರು ಕನ್ನಡ ಮಾಸಿಕ ಪತ್ರಿಕೆ ಬಿಡುಗಡೆ ಹಾಗೂ ವಿಶೇಷ ಸಾಧಕರಿಗೆ ಸನ್ಮಾನ ಸಮಾರಂಭ ಕಾರ್ಯಕ್ರಮದಲ್ಲಿ ಪತ್ರಿಕಾ ವಿತರಕರಾದ ಗಿರೀಶ್, ಟಿ.ಆರ್.ನಾಗರಾಜು,ಜೀವನ್, ರವಿ, ಮೂರ್ತಿ ಇವರನ್ನು ಅಭಿನಯಿಸಲಾಯಿತು ಈ ಸಂಧರ್ಭದಲ್ಲಿ ಮಾಜಿ ಸಂಸದರಾದ ಎಸ್.ಪಿ.ಮುದ್ದಹನುಮೇಗೌಡ, ಶ್ರೀ ಶಿವಶೈಕ್ಷಣಿಕ ಆಶ್ರಮದ ಅಧ್ಯಕ್ಷರಾದ ಲೇಪಾಕ್ಷಯ್ಯ, ಸಿ.ಡಿ. ಕೃಷ್ಣಮೂರ್ತಿ, ನಿವೃತ್ತ ಉಪನ್ಯಾಸಕರಾದ ದೇವರಾಜಯ್ಯ ಸಿ., ಮಾಜಿ ವಾಲ್ಮೀಕಿ ನಿಗಮದ ನಿರ್ದೇಶಕರಾದ ಸಿ.ಬಿ. ನರಸಿಂಹಯ್ಯ, ಡಾ. ಪದ್ಮನಾಭ ಶೆಟ್ಟರು, ಗ್ರೇಟರ್ ತುಮಕೂರು ಮಾಸಿಕ ಪತ್ರಿಕೆಯ ಸಂಪಾದಕರಾದ ಜಗದೀಶ್ ಬಿ. ಸಹ ಸಂಪಾದಕರಾದ ಸುಧಾಮಣಿ ಹೆಚ್.ಎಸ್. ಮತ್ತಿತರರು ಹಾಜರಿದ್ದರು.

# ಮೋದಿ ಹುಟ್ಟುಹಬ್ಬಕ್ಕೆ ಉಚಿತ ಚಹಾ ವಿತರಿಸಿದ ಬಿಜೆಪಿ ಮುಖಂಡರು!



**ಮಧುಗಿರಿ / ದೊಡ್ಡೇರಿ:** ತಾಲೂಕಿನ ದೊಡ್ಡೇರಿ ಹೋಬಳಿಯ ಬಿಜೆಪಿ ಮುಖಂಡರಿಂದ ಪ್ರಧಾನಮಂತ್ರಿ ನರೇಂದ್ರ ಮೋದಿಜಿಯವರ ಹುಟ್ಟು ಹಬ್ಬ ಆಚರಣೆ ಮಾಡಲಾಯಿತು. ಭಾರತದ ಪ್ರಧಾನ ಮಂತ್ರಿಗೆ 76 ವಸಂತಗಳು ಪೂರೈಸಿದ ಹಿನ್ನೆಲೆಯಲ್ಲಿ ಇಡೀ ದೇಶದಾದ್ಯಂತ ವಿಶೇಷ ರೀತಿಯಲ್ಲಿ ಅವರ ಸವಿನೆನಪಿನಲ್ಲಿ ಹುಟ್ಟು ಹಬ್ಬವನ್ನು ಆಚರಿಸಿದರು. ಅದೇ ರೀತಿ ಮಧುಗಿರಿ ಇತರೆ ಭಾಗದಲ್ಲಿಯೂ ಬಹಳ ವಿಶಿಷ್ಟವಾಗಿ ಸರ್ಕಾರಿ ಆಸ್ಪತ್ರೆಗಳ ರೋಗಿಗಳಿಗೆ ಹಣ್ಣು ಹಂಪಲು ಬ್ರೆಡ್ ವಿತರಿಸಿ ಜೊತೆಗೆ ಮೋದಿ ಚಾಯಿವಾಲ ಎಂದು ಹೆಮ್ಮೆಯಿಂದ ಹೇಳುತ್ತೇವೆ ಎಂದು ಬಡವನಹಳ್ಳಿ ರಸ್ತೆ ಇಕ್ಕಲದಲ್ಲಿ ಎಲ್ಲರಿಗೂ ಉಚಿತವಾಗಿ ಚಹಾ ವಿತರಿಸಲಾಯಿತು..

ಮೋದಿಯವರಿಗೆ ವಯಸ್ಸಾಗಿರಬಹುದು ಆದರೆ ಅವರ ಆಡಳಿತಾರೂಢ ಆಲೋಚನೆ ಹಾಗೂ ವಿವಿಧ ಯೋಜನೆಗಳಿಗೆ ಎಷ್ಟೇ ವರ್ಷ ಕಳೆದರೂ ವಯಸ್ಸಾಗುವುದಿಲ್ಲ. ಮೋದಿಯವರು ಮತ್ತೊಮ್ಮೆ ಪ್ರಧಾನಮಂತ್ರಿಯಾಗಿ ನಮ್ಮ ದೇಶವನ್ನು ಮುನ್ನಡೆಸುವಂತಹ ಅಗಲಿ ಎಂದು ಮಧುಗಿರಿ ಬಿಜೆಪಿ ಜಿಲ್ಲಾ ಕಾರ್ಯದರ್ಶಿ ನಾಗರಾಜು ಹಾರೈಸಿದರು.

ನರೇಂದ್ರ ಮೋದಿಯವರು ಸುಧೀರ್ಘ 13 ವರ್ಷಗಳ ದೇಶ ಸೇವೆಯನ್ನು ಪ್ರಧಾನಮಂತ್ರಿಯಾಗಿ ನಿಭಾಯಿಸಿ ಇಡೀ ಪ್ರಪಂಚಕ್ಕೆ ಮಾದರಿಯ ಪ್ರಧಾನಿ ಎನಿಸಿದ್ದಾರೆ. ಎಂದು ರೈತ ಮೋರ್ಚಾ ಕಾರ್ಯಕಾರಿಣಿ ಸದಸ್ಯೆ ಕವಿತಾ ತಿಳಿಸಿದರು

ನರೇಂದ್ರ ಮೋದಿಯವರ ದೇಶದ ಆಡಳಿತವನ್ನು ಇಡೀ ಪ್ರಪಂಚವೇ ಒಪ್ಪಿ, ಹರಸುತ್ತಿದೆ. ಮುಂದಿನ ದಿನಮಾನಗಳಲ್ಲೂ ಬಿಜೆಪಿ ಸರ್ಕಾರ ಮತ್ತೆ ಅಧಿಕಾರಕ್ಕೆ ಬರಲಿ ಎಂದು ಮಾಜಿ ದೊಡ್ಡೇರಿ ಹೋಬಳಿಯ ಬಿಜೆಪಿ ಅಧ್ಯಕ್ಷ ಪ್ರಸನ್ನ ಕುಮಾರ್ ತಿಳಿಸಿದರು. ಒಟ್ಟಿನಲ್ಲಿ ಸಿರಾ ಮಧುಗಿರಿ ಹೆದ್ದಾರಿಯಲ್ಲಿ ಬರುವ ಸಾರ್ವಜನಿಕರಿಗೆ ಉಚಿತವಾಗಿ ಚಹಾ ವಿತರಿಸಿ ಮೋದಿ ಚಾಯಿವಾಲ ಚಹಾ ಮಾರುತ್ತಿದ್ದ ವ್ಯಕ್ತಿ ದೇಶದ ಅಪ್ರತಿಮ ದೇಶಭಕ್ತನಾದ ಪ್ರಧಾನಿ ನರೇಂದ್ರ ಮೋದಿಯವರನ್ನು ಜೀವನದಲ್ಲಿ ಆದರ್ಶ ವ್ಯಕ್ತಿಯನ್ನಾಗಿ ಸ್ವೀಕರಿಸಿ ಎನ್ನುವ ಸಂದೇಶವನ್ನು ಸಾರಿದರು.

ಈ ಸಂದರ್ಭದಲ್ಲಿ ದೊಡ್ಡೇರಿ ಹೋಬಳಿಯ ಬಿಜೆಪಿ ಮುಖಂಡರಾದ ದೇವರಾಜು, ಚೌಡಪ್ಪ, ಮಂಜುನಾಥ್, ಕಿರಣ್, ಮಾರಣ್ಣ, ಸೀನಣ್ಣ ಮತ್ತಿತರರು ಉಪಸ್ಥಿತರಿದ್ದರು.

# ನಿಟ್ಟೂರು ತಾಪಂ ಎಸ್ಸಿ ಮೀಸಲು ಕ್ಷೇತ್ರಕ್ಕೆ ನಾಗಭೂಷಣ್ ಪ್ರಬಲ ಆಕಾಂಕ್ಷಿ




**ಗುಬ್ಬಿ:** ತಾಲ್ಲೂಕಿನ ನಿಟ್ಟೂರು ತಾಲ್ಲೂಕು ಪಂಚಾಯಿತಿ ಕ್ಷೇತ್ರವು ಪರಿಶಿಷ್ಟ ಜಾತಿ ಮೀಸಲು ಕ್ಷೇತ್ರವಾಗಿದೆ. ಇಲ್ಲಿನ ಜನಾಭಿಪ್ರಾಯದಂತೆ ನಾನು ಕಾಂಗ್ರೆಸ್ ಪಕ್ಷದಿಂದ ಪ್ರಬಲ ಆಕಾಂಕ್ಷಿಯಾಗಿದ್ದೇನೆ ಎಂದು ವಕೀಲ ಹಾಗೂ ದಲಿತ ಹೋರಾಟಗಾರ ನಿಟ್ಟೂರು ನಾಗಭೂಷಣ್ ತಿಳಿಸಿದರು.

ಗುಬ್ಬಿ ಪಟ್ಟಣದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಕಳೆದ 25 ವರ್ಷಗಳಿಂದ ನಾನು ಶಾಸಕ ಎಸ್. ಆರ್.ಶ್ರೀನಿವಾಸ್ ಅವರ ಜೊತೆ ಜೊತೆಯಲ್ಲೇ ಕಟ್ಟ ಬೆಂಬಲಿಗನಾಗಿ ದುಡಿಯುತ್ತಾ ಬಂದಿದ್ದು ಕ್ಷೇತ್ರದಲ್ಲಿ ಎಲ್ಲಾ ಸಮುದಾಯದವರ ಉತ್ತಮ ಒಡನಾಟವನ್ನು ಹೊಂದಿದ್ದೇನೆ. ಈ ನಿಟ್ಟಿನಲ್ಲಿ ನಿಟ್ಟೂರು ತಾಲೂಕು ಪಂಚಾಯಿತಿ ಎಸ್ಸಿ ಮೀಸಲು ಕ್ಷೇತ್ರವಾಗಿರುವುದರಿಂದ ದಲಿತ ಸಮುದಾಯದ ಮತಗಳು ಹೆಚ್ಚಿರುವುದರಿಂದ ನನಗೆ ಪಕ್ಷದಿಂದ ಟಿಕೆಟ್ ನೀಡಿದರೆ ಗೆದ್ದು ಬರುವುದಾಗಿ ಭರವಸೆ ವ್ಯಕ್ತಪಡಿಸಿದರು.

ದಲಿತ ಮುಖಂಡ ಅದಲಗೆರೆ ಈಶ್ವರಯ್ಯ ಮಾತನಾಡಿ ಈಗಾಗಲೇ ಸರ್ಕಾರವು ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯತಿ ಮೀಸಲು ಪ್ರಕಟಿಸಿದ್ದು ಈ ನಿಟ್ಟೂರು ತಾಪಂ ಎಸ್ಸಿ ಮೀಸಲು ಆಗಿದ್ದು ಪ್ರಬಲ ಆಕಾಂಕ್ಷಿಯಾಗಿ ನಿಟ್ಟೂರು ನಾಗಭೂಷಣ್ ಅವರು ಈ ವ್ಯಾಪ್ತಿಯಲ್ಲಿ ಜನಾನುರಾಗಿಯಾಗಿ ಸಾಮಾಜಿಕ ಕಳಕಳಿಯನ್ನು ಹೊಂದಿದ್ದು ಯಾವುದೇ ಜಾತಿ ಮತವಿಲ್ಲದೆ ಸಾರ್ವಜನಿಕರ ಸೇವೆಯನ್ನು ಮಾಡುತ್ತಾ ಬಂದಿದ್ದಾರೆ. ಶಾಸಕರು ಹಾಗೂ ಕಾಂಗ್ರೆಸ್ ಪಕ್ಷದ ಅಧ್ಯಕ್ಷರು ಟಿಕೆಟ್ ನೀಡಿದರೆ ನಾಗಭೂಷಣ್ ಅವರನ್ನು ನಮ್ಮ ಸಮುದಾಯದಿಂದ ಗೆಲ್ಲಿಸಿಕೊಂಡು ಬರುತ್ತವೆ ಎಂದು ಭರವಸೆ ನೀಡಿದರು.

ದಲಿತ ಮುಖಂಡ ಕುಂದರನಹಳ್ಳಿ ನಟರಾಜು ಮಾತನಾಡಿ ಗುಬ್ಬಿ ಗ್ರಾಮಂತರ ಜಿಲ್ಲಾ ಪಂಚಾಯತಿ ಎಸ್ ಸಿ ಮೀಸಲು ಕ್ಷೇತ್ರವಾಗಿದ್ದು ಮಾದಿಗ ಸಮಾಜಕ್ಕೆ ಕಾಂಗ್ರೆಸ್ ನಿಂದ ಟಿಕೆಟ್ ನೀಡಬೇಕೆಂದು ಒತ್ತಾಯಿಸಿದರು ಹಾಗೂ ನಿಟ್ಟೂರು ತಾಲೂಕು ಪಂಚಾಯತಿ ಕ್ಷೇತ್ರಕ್ಕೆ ನಾಗಭೂಷಣ್ ಅವರಿಗೆ ನೀಡಬೇಕೆಂದು ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ದಲಿತ ಮುಖಂಡರಾದ ಪಾಂಡಣ್ಣ, ಪಾಪಣ್ಣ, ಶಿವರಾಜು ಸೇರಿದಂತೆ ದಲಿತ ಮುಖಂಡರು ಇದ್ದರು.

# ಡಿಜಿಟಲ್ ಯುಗದಲ್ಲಿ ಕಣ್ಣು ರಕ್ಷಣೆ ಮುಖ್ಯ: ಟಿಎಚ್‌ಓ ಡಾ.ಸವಿತಾ



**ಗುಬ್ಬಿ:** ಆಧುನಿಕತೆಗೆ ತಕ್ಕಂತೆ ಬೆಳೆದ ನಮ್ಮ ಡಿಜಿಟಲ್ ಸಮಾಜದಲ್ಲಿ ಅಂಧತ್ವ ಶಾಪ ಹೆಚ್ಚಿದೆ. ಮನುಷ್ಯನ ಅತ್ಯಮೂಲ್ಯ ಕಣ್ಣುಗಳ ರಕ್ಷಣೆ ಎಲ್ಲರ ಕರ್ತವ್ಯವಾಗಿದೆ ಎಂದು ತಾಲ್ಲೂಕು ವೈದ್ಯಾಧಿಕಾರಿ ಡಾ.ಸವಿತಾ ತಿಳಿಸಿದರು.

ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಆಯೋಜಿಸಿದ್ದ 27 ನೇ ವಿಶ್ವ ದೃಷ್ಟಿ ದಿನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ದೃಷ್ಟಿ ಜೀವನದ ಪ್ರಮುಖ ಅಂಶ. ಪ್ರತಿಯೊಬ್ಬ ವ್ಯಕ್ತಿಗೂ ಸ್ಪಷ್ಟ ನೋಡುವ ಹಕ್ಕಿದೆ. ಹಾಗೆಯೇ ಕಣ್ಣಿನ ಆರೋಗ್ಯವನ್ನು ಕಾಪಾಡಿಕೊಳ್ಳುವುದು ಎಲ್ಲರ ಕರ್ತವ್ಯ. ಈ ನಿಟ್ಟಿನಲ್ಲಿ ಸರ್ಕಾರ ಕೂಡ ಎಲ್ಲಾ ವಯೋಮಾನದ ಪ್ರಜೆಗಳಿಗೆ ಕಣ್ಣಿನ ತಪಾಸಣೆ, ಅಗತ್ಯ ಕನ್ನಡಕ ನೀಡುತ್ತದೆ ಎಂದರು.

ಆಡಳಿತ ವೈದ್ಯಾಧಿಕಾರಿ ಡಾ.ಕೇಶವರಾಜ್ ಮಾತನಾಡಿ ಅಕ್ಟೋಬರ್ 8 ರಂದು ವಿಶ್ವದಾದ್ಯಂತ ವಿಶ್ವ ಕಣ್ಣಿನ ದಿನ ಆಚರಣೆ ನಡೆಯುತ್ತದೆ. ಎಲ್ಲರ ಕಣ್ಣಿನ ಆರೋಗ್ಯಕ್ಕೆ ಸರ್ಕಾರ ವಿಶೇಷ ಗಮನಹರಿಸಿದೆ. ನೇತ್ರ ವೈದ್ಯರ ಕೊರತೆ ನೀಗಿಸುವ ಜೊತೆಗೆ ಕಣ್ಣಿನ ಆರೋಗ್ಯ ಬಗ್ಗೆ ಕನಿಷ್ಠ ಚಿಕಿತ್ಸೆ ತರಬೇತಿ ಸ್ಥಳೀಯ ಆರೋಗ್ಯ ಅಧಿಕಾರಿಗೆ ಹಾಗೂ ಆಶಾ ಕಾರ್ಯಕರ್ತೆರಿಗೂ ನೀಡಲಾಗಿದೆ. 13 ಅತ್ಯಾಧುನಿಕ ಕಣ್ಣಿನ ಆಸ್ಪತ್ರೆ ಜೊತೆ ಟಯಪ್ ಆಗಿರುವ ಸರ್ಕಾರ ಕಣ್ಣಿನ ಶಸ್ತ್ರ ಚಿಕಿತ್ಸೆ ಸಹ ಒದಗಿಸುವ ಕೆಲಸ ಮಾಡುತ್ತಿದೆ. ಗುಬ್ಬಿಯಲ್ಲಿ ಸಹ ಕಣ್ಣಿನ ಪ್ರತ್ಯೇಕ ಓಟಿ ವ್ಯವಸ್ಥೆ ಶೀಘ್ರದಲ್ಲಿ ಆಗಲಿದೆ ಎಂದರು. ನೇತ್ರ ವೈದ್ಯೆ ಡಾ.ಕುಸುಮಾ ಮಾತನಾಡಿ ಕಣ್ಣು ಎಲ್ಲಾ ಅಂಗಕ್ಕಿಂತ ವಿಶೇಷತೆ ಗಳಿಸಿದೆ. ಸೂಕ್ಷ್ಮ ಕೂಡಾ ಹೌದು. ಅತಿಯಾದ ಕಂಪ್ಯೂಟರ್ ಮೊಬೈಲ್ ಬಳಕೆಯಿಂದ ಕಣ್ಣುಗಳ ಆರೋಗ್ಯ ಏರುಪೇರು ಕಾಣುತ್ತಿದೆ. ಪ್ರತಿ 20 ನಿಮಿಷಕ್ಕೊಮ್ಮೆ ಕಣ್ಣಿನ ದೃಷ್ಟಿ ಬೇರೆಡೆ ಹೋಗಬೇಕು. ವಿಶ್ರಾಂತಿ ನೀಡಬೇಕು ಎಂದು ಸಲಹೆ ನೀಡಿದರು.

ನೇತ್ರಾಧಿಕಾರಿ ಕುಮಾರಸ್ವಾಮಿ ಮಾತನಾಡಿ ನಿಮ್ಮ ಕಣ್ಣುಗಳನ್ನು ಪ್ರೀತಿಸಿ ಎಂಬ ಘೋಷಣೆ ಜೊತೆ ಸರ್ಕಾರ ಈ ಕಾರ್ಯಕ್ರಮ ನಡೆಸಿದೆ. ಈ ಜೊತೆಗೆ ಆಶಾ ಕಿರಣ ಕಾರ್ಯಕ್ರಮದಡಿ ಆರು ವರ್ಷದ ಮಕ್ಕಳಿಂದ 60 ವರ್ಷದವರೆಗೆ ಎಲ್ಲಾ ವ್ಯಕ್ತಿಗಳಿಗೂ ಉಚಿತ ಕನ್ನಡಕ ವಿತರಣೆ ನಡೆದಿದೆ. ಮಕ್ಕಳಿಗೆ ವಿಶೇಷ ತಪಾಸಣೆ ಕೂಡಾ ನಡೆಸಲಾಗುತ್ತಿದೆ. ಈ ಎಲ್ಲಾ ಅನುಕೂಲದ ಜೊತೆಗೆ ಜಾಗೃತಿ ಸಂದೇಶವನ್ನು ಎಲ್ಲೆಡೆ ಪ್ರಚಾರ ಮಾಡಲಾಗುತ್ತಿದೆ ಎಂದರು. ಕಾರ್ಯಕ್ರಮದಲ್ಲಿ ನೇತ್ರಾಧಿಕಾರಿಗಳಾದ ನಂದೀಶ್, ಆರ್.ವಿ.ಗೌಡ, ಪತಂಜಲಿ ಯೋಗ ಶಿಕ್ಷಣ ಸಮಿತಿಯ ಬಸವರಾಜು ಇತರರು ಇದ್ದರು.

# ಸ್ಟಿಂಗ್ ಕಾರ್ಯಾಚರಣೆ ತನಿಖೆಗೆ ಹಿಂದೇಟೇಕೆ– ಹೆಚ್‌ಡಿಕೆ ಪ್ರಶ್ನೆ

**ಬೆಂಗಳೂರು:** ರಾಜ್ಯದಲ್ಲಿಸ್ಟಿಂಗ್‌ಕಾರ್ಯಾಚರಣೆ ನಡೆದಿರುವ ಬಗ್ಗೆ ತನಿಖೆ ಆಗಲೇಬೇಕು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ತನಿಖೆಗೆ ಇನ್ನೇಟು ಹಾಕುತ್ತಿರುವುದು ಏಕೆ ಎಂದು ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಪ್ರಶ್ನಿಸಿದ್ದಾರೆ ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಹ ಸ್ಟಿಂಗ್ ನಡೆಯುತ್ತಿರುವ ಬಗ್ಗೆ ಮಾತನಾಡಿದ್ದಾರೆ ತನಿಖೆ ಆಗಬೇಕು ಎಂದು ಅವರು ಹೇಳಿದ್ದಾರೆ ಹೀಗಿರುವಾಗ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ತನಿಖೆಗೆ ಯಾಕೆ ನಿರ್ಧಾರ ಮಾಡುತ್ತಿಲ್ಲ ಎಂದು ಪ್ರಶ್ನಿಸಿದರು.

ಎಲ್ಲದ್ದಕ್ಕೂ ಕಾಲಕೂಡಿಬರುತ್ತೆ ಎಂದು ಸಿಎಂ ಹೇಳಿಕೆಗೆ ಪ್ರತಿಕ್ರಿಸಿದ ಅವರು ಟೈಮ್ ಯಾವಾಗ ಬರುತ್ತೆ ಮೇಲುಗಡೆಯಿಂದ ಹಾಗೆ ಟೈಮ್ ಬರುತ್ತಾ ಎಂದು ವ್ಯಂಗ್ಯವಾಡಿ, ಕಾಲ ಉತ್ತರ ಕೊಡುತ್ತೆ ಅಂತ ಹೇಳುತ್ತಿದ್ದಾರೆ. ಸಿಎಂ ಕಾಲ ಉತ್ತರ ಕೊಡೊದು ಅಲ್ಲಾ. ರಾಜ್ಯ ಸರ್ಕಾರ ಯಾಕೆ ತನಿಖೆ ಮಾಡುತ್ತಿಲ್ಲ .ಮಾಜಿ ಸಿಎಂ ನಿನ್ನೆ ಸ್ಟಿಂಗ್ ಆಗ್ತಿರೋದು ನಿಜ ಅಂತ ಹೇಳಿದ್ದಾರೆ. ಯಾರು ಇದ್ದಾರೆ ಅನ್ನೋದನ್ನ ಕಂಡುಹಿಡಿಯಬೇಕು. ಸರ್ಕಾರ ತೀರ್ಮಾನ ತೆಗೆದುಕೊಳ್ಳಬೇಕಂತ ಯಾಕೆ ಹೇಳಿದ್ದಾರೆ. ತನಿಖೆ ಆಗಬೇಕು ಅಂತ ಅವರು ಹೇಳ್ತಿದ್ದಾರೆ. ಯಾತಕ್ಕಾಗಿ ನೀವು ಸುಮ್ಮನೆ ಇದ್ದೀರಾ. ತನಿಖೆ ಮಾಡಿಸೋಕೆ ಏನ್ ಕಷ್ಟ ನಿಮಗೆ ಎಂದು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ವಿರುದ್ಧ ವಾಗ್ದಾಳಿ ನಡೆಸಿದರು. ಕೆಲಸಕ್ಕೆ ಬಾರದೆ ಇರೋದನ್ನ ತನಿಖೆ ಮಾಡಿಸ್ತಿದ್ದಿರಿ. ಇದಕ್ಕೆ ಯಾಕೆ ಅವಕಾಶ ಕೊಟ್ಟಿಲ್ಲ ಸರ್ಕಾರ ಯಾಕೆ ತನಿಖೆಗೆ ಕೊಡ್ತಿಲ್ಲಾ. ಇವರೇ ನೇರವಾಗಿ ಇದ್ದಾರಲಾ, ಇವರೇ ಮೂಲ ಮಹಾನ್ ನಾಯಕ ಅಂತರಲ್ಲಾ ತನಿಖೆ ಮಾಡುದ್ರೆ ಇದೆಲ್ಲಾ ಹೊರಗೆ ಬರುತ್ತೆ ಅನ್ನುವ ಭಯ



ಎಂದು ಲೇವಡಿ ಮಾಡಿದರು. ನೀವೆ ತೋರಿಸಿದ್ರಲ್ಲಾ ಫೈಲ್ ಇಡುಕೊಂಡು ಹೋಗಿದ್ದು ಫೈಲ್ ನ ಕ್ಯಾಬಿನೆಟ್‌ಗೆ ಇವರೇ ತಗೊಂಡು ಹೋಗಿರೋದುಸ್ಟಿಂಗ್ ಅಪರೇಷನ್ ಮಾಹಿತಿ ತೆಗೆದುಕೊಂಡೆ ಕ್ಯಾಬಿನೆಟ್ ಗೆ ಹೋಗಿದ್ದಾರೆ. ಅವರೇ ಸ್ಟಿಂಗ್ ಸೋರ್ಸ್ ಲೀಕ್ ಮಾಡಿರೋದು ಯಾತಕ್ಕಾಗಿ ಮಾಡಿರೋದು ಸಣ್ಣ ವಿಚಾರನಾ, ಮಾನ ಮರ್ಯಾದೆ ಯಾರದ್ದು ಹೋಗ್ತಿದೆ. ಯಾರ ಮರ್ಯಾದಿ ಕಳೆಯೋದಕ್ಕೆ ಇವೆಲ್ಲಾ ಮಾಡಿಕೊಂಡ್ರಿ,

ತನಿಖೆ ಮಾಡದೆ ಗುಪ್ತವಾಗಿ ಇಟ್ಟುಕೊಂಡು ಕಾಲ ಉತ್ತರ ಕೊಡುತ್ತೆ ಅಂದ್ರೆ,ಆಗುತ್ತಾ ನಿಮ್ಮವರೆ ಹೇಳಿದ್ದಾರಲ್ಲಾ ಕ್ಯಾಮೆರಾ ಇಡಕೊಂಡು ಉತ್ತರ ಭಾರತದಿಂದ ಬಂದಿದ್ರು ಅಂತ ಹೇಳಿದ್ದಾರಲ್ಲಾ ಉತ್ತರ ಭಾರತದವರು, ಕೇಂದ್ರ ಸಚಿವರು ಅಂತ ನೀವೆ ಹೇಳಿಸಿಕೊಂಡು ಕೂತಿದ್ದಿರಲ್ಲಾ.

ನಿಮ್ಮ ಪೆನ್ ಡ್ರೈವ್ ವಿಚಾರ ಬಂದಾಗೆಲ್ಲಾ ಈ ವಿಚಾರ ಚರ್ಚೆ ಆಗ್ತಿದೆ ಎಂಬ ವಿಚಾರ.. ನನ್ನ ಸ್ಟೈಲ್ ನಲ್ಲಿ ಮಾಡೋಕೆ ಆಗೊಲ್ಲಾ ಅವರಿಗೆ ನನ್ನ ಪೆನ್ ಡ್ರೈವ್ ವರ್ಜಿನಲ್ , ಅವರು ನಕಲಿ ಮಾಡೋದು ನಾನು ಇಲ್ಲಿ ಪೆನ್ ಡ್ರೈವ್ ಅಂದ್ರೆ ಅಲ್ಲಿ ಅವರಿಗೆ ನಡುಕ ಶುರುವಾಗುತ್ತೆ ಸತ್ಯಾಸತ್ಯತೆ ಹೊರಗೆ ಬರಲೇಬೇಕು. ಇದನ್ನ ಅಷ್ಟು ಸುಲಭವಾಗಿ ಬಿಡೋದಕ್ಕೆ ಅಗೊಲ್ಲಾ ಎಂದರು. ನಮ್ಮ ರಾಜ್ಯ ಅತ್ಯಂತ ಗೌರವವುಳ್ಳ ರಾಜ್ಯ. ಕ್ಯಾಬಿನೆಟ್ ನಲ್ಲಿ ಸಿಎಂ ಚರ್ಚೆ ಮಾಡಿ ಮಾಧ್ಯಮದಲ್ಲಿ ಬಿಟ್ಟವರು ಯಾರು. ನಾವು ಕೇಂದ್ರದಲ್ಲಿ ಹಲವಾರು ವಿಚಾರ ಚರ್ಚೆ ಮಾಡ್ತಿವಿ ಅದು ಹೊರಗೆ ಬರುತ್ತಾ. ನೀವೇ ದೊಡ್ಡದಾಗಿ ಪ್ರಚಾರ ಮಾಡ್ತಿದ್ದಿರಾ ಎಂದು ಟೀಕಿಸಿದರು. ಎಸ್ ಐ ಆರ್ ಪ್ರಕ್ರಿಯೆಯಲ್ಲಿ ಮತದಾರರ ಹೆಸರು ಖಡಿತ ಮಾಡಿದಾರೆ ಅನ್ನೋ ಆರೋಪ ಮಾಡಿದ್ದಾರೆ. ನಾನು ಕಾಂಗ್ರೆಸ್ ನಾಯಕರಿಗೆ ಕೇಳ್ತೇನೆ. ಈ ಪ್ರಕ್ರಿಯೆ ಹಲವಾರು ವರ್ಷಗಳಿಂದ ನಡೆದುಕೊಂಡು ಬರ್ತಿರೋದು ಹೊಸದಲ್ಲ ಎಂದರು.

# ಅ.14ರಿಂದ ರಾಜ್ಯದಲ್ಲಿ ಮತ್ತೊಂದು ಸುತ್ತಿನ ಮಳೆ

**ಬೆಂಗಳೂರು:** ವಾತಾವರಣದಲ್ಲಿ ಉಂಟಾಗಿರುವ ಬದಲಾವಣೆಯ ಪರಿಣಾಮ ಅ.14ರಿಂದ ರಾಜ್ಯದಲ್ಲಿ ಮತ್ತೊಂದು ಸುತ್ತಿನ ಮಳೆಯಾಗುವ ಮುನ್ಸೂಚನೆಗಳಿವೆ.ಅ.14ರಿಂದ 18ರವರೆಗೆ ರಾಜ್ಯದಲ್ಲಿ ಸಾಧಾರಣ ಪ್ರಮಾಣದ ಮಳೆಯಾಗುವ ಸಾಧ್ಯತೆಗಳು ಕಂಡುಬರುತ್ತಿವೆ. ಬಂಗಾಳಕೊಲ್ಲಿಯಲ್ಲಿ ವಾಯುಭಾರ ಕುಸಿತ ಉಂಟಾಗುತ್ತಿದ್ದು, ಅದರ ಪರಿಣಾಮ ರಾಜ್ಯದಲ್ಲೂ ಮಳೆಯಾಗುವ ನಿರೀಕ್ಷೆಗಳಿವೆ.

ಅಕ್ಟೋಬರ್ ತಿಂಗಳ ಮೊದಲರೆಡು ವಾರದಲ್ಲೂ ಉತ್ತಮ ಮಳೆಯಾಗಿಲ್ಲ. ಬಹುತೇಕ ಕಡೆಗಳಲ್ಲಿ ಮಳೆ ಕೊರತೆ ಮುಂದುವರೆದಿದ್ದು, ಬರದ ತೀವ್ರತೆ ಮತ್ತಷ್ಟು ಹೆಚ್ಚಾಗಿದೆ. ಮುಂಗಾರು ಹಂಗಾಮಿನ ವಿವಿಧ ಬೆಳೆಗಳಿಗೆ ತೇವಾಂಶದ ಕೊರತೆ ಉಂಟಾಗಿದ್ದು, ರೈತರು ಮಳೆಯ ನಿರೀಕ್ಷೆಯಲ್ಲಿದ್ದಾರೆ. ಅ.14ರಂದು ಕೋಲಾರ, ಬೆಂಗಳೂರು ದಕ್ಷಿಣ ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ. ಅ.15ರಂದು ಕರಾವಳಿ ಹಾಗೂ ಉತ್ತರ ಕರ್ನಾಟಕದ ಕೆಲ ಜಿಲ್ಲೆಗಳನ್ನು ಹೊರತುಪಡಿಸಿ ದಕ್ಷಿಣ ಒಳನಾಡು ಹಾಗೂ ಉತ್ತರ ಕರ್ನಾಟಕದ ಒಳನಾಡು



ಜಿಲ್ಲೆಗಳಲ್ಲಿ ಗುಡುಗು ಮಿಂಚಿನಿಂದ ಕೂಡಿದ ಮಳೆಯಾಗುವ ಮುನ್ಸೂಚನೆಗಳಿವೆ. ಬೆಂಗಳೂರು ಸುತ್ತಮುತ್ತಲಿನ ಜಿಲ್ಲೆಗಳಲ್ಲಿ ಮಳೆಯ ಪ್ರಮಾಣ ಹೆಚ್ಚಾಗಿರಲಿದೆ. ಅ.16ರಂದು ರಾಜ್ಯಾದ್ಯಂತ ಮಳೆ ವ್ಯಾಪಿಸಲಿದ್ದು, ಭಾಗಶಃ ವ್ಯಾಪಕ ಮಳೆಯಾಗುವ ಸಾಧ್ಯತೆಗಳಿವೆ.

ಈ ತಿಂಗಳ 18ರವರೆಗೂ ಮಳೆ ಮುಂದುವರೆಯುವ ನಿರೀಕ್ಷೆಗಳಿವೆ. ನಿರೀಕ್ಷೆಯಂತೆ ಮತ್ತೊಂದು ಸುತ್ತಿನ ಮಳೆಯಾದರೆ ಮುಂಗಾರು ಹಂಗಾಮಿನ ಬೆಳೆಗಳಿಗೆ ಅನುಕೂಲವಾಗಲಿದೆ. ಒಂದು ವೇಳೆ ಇನ್ನೊಂದು ವಾರದಲ್ಲಿ ಮಳೆ ಬಾರದಿದ್ದರೆ ಉಳಿದಿರುವ ಅಲ್ಪಸ್ವಲ್ಪ ಬೆಳೆಯೂ ರೈತರ ಕೈ ತಪ್ಪುವುದು ನಿಚ್ಚಳವಾಗಿದೆ.

# ನಾಳೆ ಕಲಬುರಗಿಯಲ್ಲಿ ಇಂಡಿಯಾ ಒಕ್ಕೂಟದಿಂದ ಬೃಹತ್ ಪ್ರತಿಭಟನೆ

**ಕಲಬುರಗಿ:** ಎಸ್‌ಐಆರ್ ಪ್ರಕ್ರಿಯೇ ದೊಷಪೂರಿತವಾಗಿದ್ದು ಜನರ ಮತದಾನದ ಹಕ್ಕನ್ನು ಕಿತ್ತುಕೊಳ್ಳಲಾಗುತ್ತಿದೆ ಇದನ್ನು ರದ್ದುಪಡಿಸಬೇಕು ಹಾಗೂ ಅಕ್ರಮ ಎಸಗಿದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶಕುಮಾರ್ ಅವರ ರಾಜಿನಾಮೆಗೆ ಆಗ್ರಹಿಸಿ ಪ್ರಜಾಪ್ರಭುತ್ವದ ಉಳಿವಿಗಾಗಿ ಇಂಡಿಯಾ ಒಕ್ಕೂಟದಿಂದ ಅ.13 ರಂದು ನಗರದಲ್ಲಿ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಕಿರಣ್ ದೇಶಮುಖ ತಿಳಿಸಿದ್ದಾರೆ.



ಈ ಪ್ರತಿಭಟನೆಯು ಬೆಳಿಗ್ಗೆ 10–30 ಗಂಟೆಗೆ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಯಿಂದ ಜಗತ್ ವೃತ್ತದವರೆಗೆ ಹೊರಡಲಿದೆ. ಕಾರಣ ಅಂದು ಬೆಳಿಗ್ಗೆ 10–30 ಗಂಟೆಗೆ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಗೆ ಕಾಂಗ್ರೆಸ್ ಪಕ್ಷದ ಹಾಲಿ ಹಾಗೂ ಮಾಜಿ ಸಂಸದರು, ಸಚಿವರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ನಿಗಮ/ಮಂಡಳಿ/ಪ್ರಾಧಿಕಾರದ ಅಧ್ಯಕ್ಷರು, ಮುಖಂಡರು, ಕೆಪಿಸಿಸಿ ಹಾಗೂ ಡಿಸಿಸಿ ಪದಾಧಿಕಾರಿಗಳು ಹಾಗೂ ಸದಸ್ಯರು, ಜಿಲ್ಲಾ ಕಾಂಗ್ರೆಸ್ ಸಮಿತಿ ಮಾಜಿ ಅಧ್ಯಕ್ಷರು, ಡಿಸಿಸಿ ಡೇಲಿಗೇಟ ಸದಸ್ಯರು, ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಕಾಂಗ್ರೆಸ್ ಸಮಿತಿ ವಿವಿಧ ಮೂಂಚೂಣಿ ಘಟಕ, ವಿಭಾಗಗಳ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಚುನಾಯಿತ ಹಾಲಿ ಹಾಗೂ ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರುಗಳು, ಎಪಿಎಂಸಿಯ ಹಾಲಿ ಹಾಗೂ ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರುಗಳು, ಮಹಾ ನಗರ ಪಾಲಿಕೆಯ ಹಾಲಿ ಹಾಗೂ ಮಾಜಿ ಮಹಾಪೌರರು, ಉಪ ಮಹಾಪೌರರು ಹಾಗೂ ಸದಸ್ಯರುಗಳು, ಮಹಿಳೆಯರು, ಯುವಕರು ಕಾಂಗ್ರೆಸ್ ಪಕ್ಷದ ಎಲ್ಲಾ ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು ಹೆಚ್ಚು ಹೆಚ್ಚು ಸಂಖ್ಯೆಯಲ್ಲಿ ಆಗಮಿಸಿ ಬೃಹತ್ ಪ್ರತಿಭಟನೆಯನ್ನು ಯಶಸ್ವಿಗೊಳಿಸಬೇಕೆಂದು ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಸಮುದಾಯ ಕಾಮಗಾರಿ ಸ್ಥಳಕ್ಕೆ ಅಧಿಕಾರಿಗಳ ಭೇಟಿ ಪರಿಶೀಲನೆ

**ಶಿರಹಟ್ಟಿ:** ಗದಗ ಜಿಲ್ಲೆ ಶಿರಹಟ್ಟಿ ತಾಲೂಕಿನ ಮಾಗಡಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಹೊಳಲಾಪುರ ಗ್ರಾಮದ ಕೆರೆಯಲ್ಲಿ ವಿಬಿಜಿ–ರಾಮ್–ಜಿ ಯೋಜನೆಯಡಿ ಕೆರೆ ಪುನಶ್ಚೇತನಗೊಳಿಸುವ ಸಮುದಾಯ ಕಾಮಗಾರಿಗೆ ಚಾಲನೆ ನೀಡಲಾಗಿದೆ.



ಗ್ರಾಮದ ಜಲಸಂಪನ್ಮೂಲ ಸಂರಕ್ಷಣೆ ಹಾಗೂ ಕೆರೆಯ ಪುನಶ್ಚೇತನಕ್ಕೆ ಆದ್ಯತೆ ನೀಡುವ ಉದ್ದೇಶದಿಂದ ಕೈಗೊಳ್ಳಲಾಗಿರುವ ಈ ಕಾಮಗಾರಿಯ ಸ್ಥಳಕ್ಕೆ ತಾಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕಾಮಗಾರಿಯ ಪ್ರಗತಿ, ಸ್ಥಳೀಯ ಅಗತ್ಯತೆ ಹಾಗೂ ಕೈಗೊಳ್ಳಲಾಗುತ್ತಿರುವ ಕಾಮಗಾರಿಯ ಗುಣಮಟ್ಟವನ್ನು ಪರಿಶೀಲಿಸಿ, ನಿಗದಿತ ಮಾನದಂಡಗಳಂತೆ ಕಾಮಗಾರಿ ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ತಾಂತ್ರಿಕ ಸಹಾಯಕ, ಜಿ.ಕೆ.ಎಂ., ಕೂಲಿ ಕಾರ್ಮಿಕರು ಸೇರಿದಂತೆ ಗ್ರಾಮ ಪಂಚಾಯತ್ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ತಮಿಳುನಾಡಿಗೆ ಕಾವೇರಿ ನೀರು ಹರಿವು ಕುರಿತ ಆದೇಶ ಮರುಪರಿಶೀಲನೆಗೆ ಮನವಿ: ಸಚಿವ ಚೆಲುವರಾಯ ಸ್ವಾಮಿ

**ನವದೆಹಲಿ:** ಕಾವೇರಿ ನದಿ ಪಾತ್ರದಲ್ಲಿನ ಜಲಾಶಯಗಳಿಗೆ ಒಳ ಹರಿವು ಕಡಿಮೆಯಾಗಿರುವುದರಿಂದಾಗಿ ತಮಿಳುನಾಡಿಗೆ ನೀರು ಹರಿಸುವುದನ್ನು ನಿಲ್ಲಿಸಲು ಆದೇಶ ನೀಡುವಂತೆ ಕಾವೇರಿ ನೀರು ನಿರ್ವಹಣಾ ಸಮಿತಿಗೆ ಮನವಿ ಮಾಡುವುದಾಗಿ ಜಲ ಸಂಪನೂಲ ಸಚಿವ ಚೆಲುವರಾಯ ಸ್ವಾಮಿ ಹೇಳಿದ್ದಾರೆ. ದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾವೇರಿ ಜಲಾನಯನ ಪ್ರದೇಶದಲ್ಲಿನ ವಾಸ್ತವ ಸ್ಥಿತಿಯನ್ನು ಮನವರಿಕೆ ಮಾಡಿಕೊಟ್ಟಿದ್ದರಿಂದಾಗಿ ನೀರಿನ ಹರಿವನ್ನು 3 ಸಾವಿರ ಕ್ಯೂಸೆಕ್‌ಗೆ ಸಿಡಬ್ಲ್ಯೂಆರ್‌ಸಿ ಕಡಿತ ಮಾಡಿದೆ ಎಂದು ಹೇಳಿದರು. ನಮಗೆ ಸಮಸ್ಯೆಗಳಿದ್ದರೂ, ಸುಪ್ರೀಂಕೋರ್ಟ್ ಮತ್ತು ಸಿಡಬ್ಲ್ಯೂಆರ್‌ಸಿ ಆದೇಶ ಪಾಲನೆ ಮಾಡಿದ್ದೇವೆ. ಈಗ ನೀರಿನ ಒಳ ಹರಿವು ಕಡಿಮೆಯಾಗಿದೆ. ಇಂತಹ ಸಂದರ್ಭದಲ್ಲಿ ತಮಿಳುನಾಡಿಗೆ ನೀರು ಬಿಡಲು ಕಷ್ಟ ಸಾಧ್ಯವಾಗುತ್ತದೆ. ಹೀಗಾಗಿ ತಮ ಆದೇಶವನ್ನು ಪುನರ್ ಪರಿಶೀಲಿಸುವಂತೆ ಸಿಡಬ್ಲ್ಯೂಆರ್‌ಸಿಗೆ ಮೇಲನವಿ ಸಲ್ಲಿಸಲಾಗುವುದು ಎಂದು ಹೇಳಿದರು. ತಮಿಳುನಾಡಿಗೆ ಕಾವೇರಿ ನೀರಿ ಬಿಡುವ ವಿಚಾರವಾಗಿ ಸಂಕಷ್ಟ



ಸೂತ್ರ ಪಾಲನೆಯಾಗಬೇಕು. ನಮಗೆ ನೀರಿಲ್ಲದಿದ್ದಾಗ ತಮಿಳುನಾಡಿಗೆ ನೀರು ಹರಿಸಲು ಹೇಗೆ ಸಾಧ್ಯ? ಈ ಕುರಿತಂತೆ ಒಟ್ಟಾರೆ ಪರಿಶೀಲನೆ ನಡೆಸಲು ಮನವಿ ಸಲ್ಲಿಸುತ್ತಿದ್ದೇವೆ ಎಂದು ಹೇಳಿದರು. ಆರಂಭದಲ್ಲಿ 10 ಸಾವಿರ ಕ್ಯೂಸೆಕ್‌ವರೆಗೂ ನೀರು ಬಿಡುವಂತೆ ನ್ಯಾಯಾಧಿಕರಣ ಆದೇಶ ನೀಡಿತ್ತು. ರಾಜ್ಯ ಸರ್ಕಾರದ ವಾದಗಳು ತೀವ್ರವಾದ ಹಿನ್ನೆಲೆಯಲ್ಲಿ 3 ಸಾವಿರ ಕ್ಯೂಸೆಕ್‌ಗೆ ಬಂದು ನಿಂತಿದೆ. ನೈಸರ್ಗಿಕವಾಗಿ ಅಷ್ಟು ನೀರು ಹರಿದುಹೋಗುವುದು ಸಹಜ. ಇದಕ್ಕೆ ಎಲ್ಲರೂ ಸಹಕರಿಸಬೇಕೆಂದು ಮನವಿ ಮಾಡಿದರು. ದೆಹಲಿಯಲ್ಲಿಂದು ನಡೆದ ಸುಪ್ರೀಂಕೋರ್ಟ್ ಚಲೋ ಕಾರ್ಯಕ್ರಮದಲ್ಲಿ ತಾವು ಭಾಗವಹಿಸುತ್ತಿದ್ದು, ದೇಶದ ಮತದಾರರ ರಕ್ಷಣೆಗೆ ಹೋರಾಟ ನಡೆಸುತ್ತಿದ್ದೇವೆ ಎಂದು ಹೇಳಿದರು. ಅರ್ಜಿ ನಮೂನೆ–7ರ ಹೆಸರಿನಲ್ಲಿ ಅರ್ಹ ಮತದಾರರನ್ನು ತೆಗೆದು ಹಾಕಲಾಗಿದೆ.

ಕೇಂದ್ರಸರ್ಕಾರಚುನಾವಣಾಆಯೋಗವನ್ನು ದುರುಪಯೋಗಪಡಿಸಿಕೊಂಡು ಚುನಾವಣೆ ಗೆಲ್ಲುವ ವ್ಯವಸ್ಥೆಗಳನ್ನು ರೂಪಿಸಿಕೊಂಡಿದೆ. ಅರ್ಹ ಮತದಾರರ ಹಕ್ಕುಗಳಿಗಾಗಿ ಆಯೋಗ ನಿರಂತರ ಹೋರಾಟ ನಡೆಸುತ್ತಿದೆ ಎಂದು ಅವರು ಹೇಳಿದರು.

# Chalo Supreme Court: ಭೇಟಿ ಮನವಿ ತಿರಸ್ಕರಿಸಿದ CJI ಸೂರ್ಯಕಾಂತ್: ಸುಪ್ರೀಂ ಕೋರ್ಟ್‌ನತ್ತ ಇಂಡಿಯಾ ಬ್ಲಾಕ್ ಮೆರವಣಿಗೆ

**ನವದೆಹಲಿ:** ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ವಿರುದ್ಧದ ಪ್ರತಿಭಟನೆಯನ್ನು ಮತ್ತಷ್ಟು ತೀವ್ರಗೊಳಿಸಲು, ಕಾಂಗ್ರೆಸ್ ನೇತೃತ್ವದ ವಿರೋಧ ಪಕ್ಷಗಳು ಸೋಮವಾರ ಸುಪ್ರೀಂ ಕೋರ್ಟ್‌ವರೆಗೆ ಪ್ರತಿಭಟನಾ ಮೆರವಣಿಗೆಯನ್ನು ಹಮ್ಮಿಕೊಂಡಿವೆ.

ಕಾಂಗ್ರೆಸ್ ಕರೆ ನೀಡಿರುವ 'ದಿಲ್ಲಿ ಚಲೋ' ಪ್ರತಿಭಟನಾ ಮೆರವಣಿಗೆಯಲ್ಲಿ ಕಾಂಗ್ರೆಸ್ ನಾಯಕರಾದ ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ವಾದ್ರಾ, ಶಶಿ ತರೂರ್, ಸಚಿನ್ ಪೈಲಟ್ ಮತ್ತು ಮುಕುಲ್ ವಾಸ್ನಿಕ್, ತೃಣಮೂಲ ಕಾಂಗ್ರೆಸ್ ನಾಯಕಿ ಮಮತಾ ಬ್ಯಾನರ್ಜಿ, ಸಮಾಜವಾದಿ ಪಕ್ಷದ ಅಖಿ??ಶ್ ಯಾದವ್ ಮತ್ತು ರಾಷ್ಟ್ರೀಯ ಜನತಾ ದಳದ ಮುಖ್ಯಸ್ಥ ತೇಜಸ್ವಿ ಯಾದವ್ ಸೇರಿದಂತೆ 'ಇಂಡಿಯಾ' (INDIA) ಮೈತ್ರಿಕೂಟದ ಪ್ರಮುಖ ನಾಯಕರು ಭಾಗವಹಿಸುತ್ತಿದ್ದಾರೆ. ಇದಕ್ಕು ಮುನ್ನ ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ(CJI) ಸೂರ್ಯಕಾಂತ್ ಅವರು ವಿರೋಧ ಪಕ್ಷಗಳ ನಿಯೋಗ ಭೇಟಿ ಮಾಡಲು ನಿರಾಕರಿಸಿದ್ದು, ಬದಲಿಗೆ ನೇರವಾಗಿ ಕೋರ್ಟ್



ಗೆ ಅರ್ಜಿ ಸಲ್ಲಿಸುವಂತೆ ಸೂಚಿಸಿದ್ದಾರೆ. ಸರ್ಕಾರದ 200 ಅಧಿಕಾರಿಗಳು ವಿರೋಧ ಪಕ್ಷದ ಸಂಪರ್ಕದಲ್ಲಿ: ಪ್ರತಿಭಟನಾ ಜಾಥಾಕ್ಕೂ ಮುನ್ನ ರಾಹುಲ್ ಗಾಂಧಿ ಹೊಸಬಾಂಬ್! ಭೇಟಿಯ ಮನವಿಗೆ ಸಿಜೆಐ ನೀಡಿದ ಪ್ರತಿಕ್ರಿಯೆಯಲ್ಲಿ, ಪ್ರತಿಪಕ್ಷಗಳು ಪ್ರಸ್ತಾಪಿಸಲು ಉದ್ದೇಶಿಸಿರುವ ವಿಷಯಗಳು ಈಗಾಗಲೇ ನ್ಯಾಯಾಲಯದ ಪರಿಶೀಲನೆಯಲ್ಲಿವೆ (sub judice) ಮತ್ತು ಸುಪ್ರೀಂ ಕೋರ್ಟ್‌ನಲ್ಲಿ ಅವುಗಳ ವಿಚಾರಣೆ ನಡೆಯುತ್ತಿದೆ ಎಂದು ಹೇಳಿರುವುದಾಗಿ ಮೂಲಗಳು ಹೇಳಿವೆ. 'ಇಂಡಿಯಾ' (INDIA) ಮೈತ್ರಿಕೂಟದ ಸಂಸದರು ಇಂದು 'ಕಾನ್ಸ್ಟಿಟ್ಯೂಷನ್ ಕ್ಲಬ್'ನಲ್ಲಿ ಜಮಾಯಿಸಿ, ಸುಪ್ರೀಂ ಕೋರ್ಟ್‌ವರೆಗೆ ತಮ್ಮ ಪ್ರತಿಭಟನಾ ಮೆರವಣಿಗೆ ನಡೆಸಲು ಬಾರಾಖಂಬ ರಸ್ತೆ ಜಂಕ್ಷನ್‌ನತ್ತ ತೆರಳಿದರು.

ವಿರೋಧ ಪಕ್ಷದ ನಾಯಕರು ಬಾರಾಖಂಬ ರಸ್ತೆಯಿಂದ ಸುಪ್ರೀಂ ಕೋರ್ಟ್‌ವರೆಗೆ "ಪ್ರಜಾಪ್ರಭುತ್ವಕ್ಕಾಗಿ ಮೆರವಣಿಗೆ"ಯನ್ನು (March for Democracy) ಆರಂಭಿಸಲು ಸಿದ್ಧರಾಗಿದ್ದಾರೆ. ನಂತರ, "ಮತ ಕಳ್ಳತನ"ವನ್ನು ತಡೆಯುವಂತೆ ಕೋರಿ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ಅವರು ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಲಿದ್ದಾರೆ. ಸುಪ್ರೀಂ ಕೋರ್ಟ್‌ಗೆ 'ಇಂಡಿಯಾ' (INDIA) ಮೈತ್ರಿಕೂಟವು ನಡೆಸಲು ಉದ್ದೇಶಿಸಿದ್ದ ಪ್ರತಿಭಟನಾ ಮೆರವಣಿಗೆ ಹಿನ್ನೆಲೆಯಲ್ಲಿ ದೆಹಲಿಯಲ್ಲಿ ವಿಧಿಸಲಾದ ಭದ್ರತಾ ನಿರ್ಬಂಧಗಳ ಬಗ್ಗೆ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಪ್ರಶ್ನಿಸಿದ್ದಾರೆ.

# ಭಯೋತ್ಪಾದನೆ ಪ್ರೋತ್ಸಾಹಿಸುವ ದೇಶಗಳಿಗೆ ಉಪರಾಷ್ಟ್ರಪತಿ ರಾಧಾಕೃಷ್ಣನ್ ಎಚ್ಚರಿಕೆ

**ನವದೆಹಲಿ:** ಭಯೋತ್ಪಾದನೆಗೆ ಪ್ರೋತ್ಸಾಹ ನೀಡುವ ದೇಶಗಳಿಗೆ ಒಂದು ದಿನ ಅದೇ ಅಪಾಯ ತಮ ಜನರಿಗೂ ತಟ್ಟಲಿದೆ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಎಚ್ಚರಿಕೆ ನೀಡಿದ್ದಾರೆ. ಅಕ್ರಮ ಚಟುವಟಿಕೆಗಳಿಗೆ ಬೆಂಬಲ ನೀಡುವ ದೇಶಗಳ ರಾಜಕೀಯ ನಾಯಕತ್ವವು ಅದರ ದೀರ್ಘಕಾಲೀನ ಪರಿಣಾಮಗಳನ್ನು ಅರಿತುಕೊಳ್ಳಬೇಕು ಎಂದು ಅವರು ಹೇಳಿದ್ದಾರೆ.

ನವದೆಹಲಿಯ ರಾಷ್ಟ್ರೀಯ ರಕ್ಷಣಾ ಕಾಲೇಜಿನಲ್ಲಿ ಸೋಮವಾರ ನಡೆದ ಭಾರತದ ಪ್ರಮುಖ ರಾಷ್ಟ್ರೀಯ ಹಿತಾಸಕ್ತಿಗಳು, ಮೌಲ್ಯಗಳು ಮತ್ತು ಕಾರ್ಯತಂತ್ರದ ಉದ್ದೇಶಗಳು ಕುರಿತ ಉಪನ್ಯಾಸದಲ್ಲಿ ಅವರು ಮಾತನಾಡಿದರು.

ಭಯೋತ್ಪಾದನೆಯನ್ನು ಇತರರಿಗೆ ಹಾನಿ ಮಾಡುವ ಅಕ್ರಮ ಅಸ್ತ್ರವಾಗಿ ಬಳಸಬಹುದು. ಆದರೆ, ದೀರ್ಘಾವಧಿಯಲ್ಲಿ ಅದರಿಂದ ತಮ್ಮ ದೇಶದ ಜನರಿಗೂ ಹಾನಿಯಾಗಲಿದೆ ಎಂಬುದನ್ನು ಭಯೋತ್ಪಾದನೆಗೆ ಪ್ರಾಯೋಜಕತ್ವ ನೀಡುವ ದೇಶಗಳು ಅರ್ಥಮಾಡಿಕೊಳ್ಳಬೇಕು ಎಂದು ರಾಧಾಕೃಷ್ಣನ್ ಹೇಳಿದರು.



ಭಾರತದ ರಾಷ್ಟ್ರೀಯ ಭದ್ರತಾ ಆದ್ಯತೆಗಳನ್ನು ವಿವರಿಸಿದ ಉಪರಾಷ್ಟ್ರಪತಿ, ದೇಶದ ಆಂತರಿಕ ಭದ್ರತೆಯನ್ನು ಕಾಪಾಡುವುದು, ರಾಷ್ಟ್ರೀಯ ಏಕತೆ ಮತ್ತು ಅಭಿವೃದ್ಧಿಯನ್ನು ರಕ್ಷಿಸುವುದು ಹಾಗೂ ದೇಶದ ಭೂಪ್ರದೇಶ, ವಾಯುಪ್ರದೇಶ ಮತ್ತು ಸಮುದ್ರ ಹಿತಾಸಕ್ತಿಗಳನ್ನು ಸಂರಕ್ಷಿಸುವುದು ಪ್ರಮುಖ ಉದ್ದೇಶಗಳಾಗಿವೆ ಎಂದು ತಿಳಿಸಿದರು. ಭಾರತದ ಆರ್ಥಿಕತೆಗೆ ನಿರ್ಣಾಯಕವಾಗಿರುವ ಅಂತರರಾಷ್ಟ್ರೀಯ ವ್ಯಾಪಾರ ಮಾರ್ಗಗಳ ಸುರಕ್ಷತೆಯೂ ಅತ್ಯಂತ ಮುಖ್ಯವಾಗಿದೆ ಎಂದು ಅವರು ಹೇಳಿದರು.

ಇದರ ಜೊತೆಗೆ, ಸೈಬರ್ ವಲಯದ ಭದ್ರತೆಯನ್ನು ಬಲಪಡಿಸುವುದು ಹಾಗೂ ಪ್ರಾದೇಶಿಕ ಮತ್ತು ಜಾಗತಿಕ ಶಾಂತಿ, ಅಂತರರಾಷ್ಟ್ರೀಯ ಸ್ಥಿರತೆ ಉತ್ತೇಜಿಸಲು ಇತರ ರಾಷ್ಟ್ರಗಳೊಂದಿಗೆ ರಚನಾತ್ಮಕ ಸಹಕಾರ ಬೆಳೆಸುವುದು ಅಗತ್ಯ ಎಂದು ಅಭಿಪ್ರಾಯಪಟ್ಟರು. ಭಾರತವು ಸುರಕ್ಷಿತ ವಾತಾವರಣದಲ್ಲಿ ಅಭಿವೃದ್ಧಿ ಹೊಂದಲು, ಸಮೃದ್ಧಿ ಸಾಧಿಸಲು ಮತ್ತು ತನ್ನ ಗುರಿಗಳನ್ನು ತಲುಪಲು ಭದ್ರತೆ ನೆರವಾಗುತ್ತದೆ ಎಂದು ಅವರು ವಿವರಿಸಿದರು.

ವಿಶ್ವದ ಅತ್ಯಂತ ಶಕ್ತಿಶಾಲಿ ರಾಷ್ಟ್ರವಾಗಬೇಕೆಂಬ ಭಾರತದ ಆಶಯವು ಇತರ ದೇಶಗಳ ಮೇಲೆ ತನ್ನ ನಿರ್ಧಾರಗಳನ್ನು ಹೇರುವುದಲ್ಲ. ಬದಲಾಗಿ, ಯಾವುದೇ ದೇಶವು ಭಾರತದ ಮೇಲೆ ಅನೈತಿಕ ಷರತ್ತುಗಳನ್ನು ಹೇರದಂತೆ ಸ್ವಾವಲಂಬಿ ಮತ್ತು ಶಕ್ತಿಶಾಲಿಯಾಗುವುದು ಇದರ ಉದ್ದೇಶ ಎಂದು ಉಪರಾಷ್ಟ್ರಪತಿ ಸ್ಪಷ್ಟಪಡಿಸಿದರು.

# ಸಿಇಸಿಗೆ ಕೇಂದ್ರದ ರಕ್ಷಣೆ: ರಾಹುಲ್ ಆರೋಪ ಹೋರಾಟದಿಂದ ಹಿಂದೆ ಸರಿಯದಿರಲು ನಿರ್ಧಾರ

**ನವದೆಹಲಿ:** ಕೇಂದ್ರ ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಜ್ಞಾನೇಶ್ ಕುಮಾರ್ ಅವರನ್ನು ರಕ್ಷಿಸುವ ಮೂಲಕ ಕೇಂದ್ರ ಸರ್ಕಾರ ದೊಡ್ಡ ತಪ್ಪು ಮಾಡಿದೆ ಎಂದು ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಆರೋಪಿಸಿದ್ದಾರೆ.



ಯಾವುದೇ ಕಾರಣಕ್ಕೂ ಹೋರಾಟದಿಂದ ಹಿಂದೆ ಸರಿಯುವುದಿಲ್ಲ ಎಂದು ಅವರು ತಿರುಗೇಟು ನೀಡಿದ್ದಾರೆ. ಸಂವಿಧಾನವನ್ನು ರಕ್ಷಿಸುವ ಹೋರಾಟ ಇದಾಗಿದ್ದು ಇದು ತಮಗೆ ಅಥವಾ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸಂಬಂಧಿಸಿದ್ದಲ್ಲ ಎಂದು ಗುಡುಗಿದ್ದಾರೆ.

ಮತಗಳ್ಳತನ ಮತ್ತು ಚುನಾವಣಾ ಪ್ರಕ್ರಿಯೆಯಲ್ಲಿನ ಅಕ್ರಮಗಳ ಆರೋಪದ ವಿರುದ್ಧ ಇಂಡಿಯಾ ಮೈತ್ರಿಕೂಟ ಸುಪ್ರೀಂ ಕೋರ್ಟ್‌ಗೆ ಪಾದಯಾತ್ರೆ ನಡೆಸಲು ಸಿದ್ಧತೆ ನಡೆಸುತ್ತಿರುವ ಹೊತ್ತಲ್ಲೇ ನವದೆಹಲಿಯಲ್ಲಿ ಇಂದು

ಸುದ್ದಿಗೋಷ್ಠಿ ನಡೆಸಿ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ತಾವು ಚುನಾವಣಾ ಪ್ರಕ್ರಿಯೆಯ ನ್ಯಾಯಸಮ್ಮತತೆ ಕುರಿತು ಕಳವಳ ವ್ಯಕ್ತಪಡಿಸಿ ಭಾರತದ ಮುಖ್ಯ ನ್ಯಾಯಮೂರ್ತಿಗಳಿಗೆ ಪತ್ರ ಬರೆದಿದ್ದೇವೆ ಎಂದು ರಾಹುಲ್ ಗಾಂಧಿ ತಿಳಿಸಿದರು. ಇಂಡಿಯಾ ಮೈತ್ರಿಕೂಟದ ನಾಯಕರು ಒಟ್ಟಾಗಿ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಲಿದ್ದಾರೆ ಎಂದರು.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಬಿಜೆಪಿ ರಕ್ಷಿಸಲು ಪ್ರಯತ್ನಿಸುತ್ತಿದೆ.ಸಿಇಸಿಗೆ ನೀಡುತ್ತಿರುವ ಭದ್ರತೆಯ ಬಗ್ಗೆಯೂ ಆಕ್ಷೇಪ ವ್ಯಕ್ತಪಡಿಸಿದ ಅವರು, ಕೇಂದ್ರ ಸರ್ಕಾರ 20 ಸಾವಿರದಿಂದ 30 ಸಾವಿರ ಪೊಲೀಸರನ್ನು ಬೀದಿಗಳಲ್ಲಿ ನಿಯೋಜಿಸಬೇಕೆಂದು ಪ್ರತಿಪಾದಿಸಿದರು.

?ಸಿಇಸಿಗೆ ಎಷ್ಟು ಹೆಚ್ಚು ರಕ್ಷಣೆ ನೀಡುತ್ತಾರೋ, ಅಷ್ಟು ಅಂತಿಮವಾಗಿ ಅವರ ನಿಯಂತ್ರಕರ ಬಳಿಗೆ ನಾವು ತಲುಪುತ್ತೇವೆ? ಎಂದು ತಿಳಿಸಿದರು.

ಚುನಾವಣಾ ಪ್ರಕ್ರಿಯೆಯಲ್ಲಿ ಅಕ್ರಮಗಳು ನಡೆಯುತ್ತಿವೆ ಎಂಬ ತಮ್ಮ ಆರೋಪವನ್ನು ಪುನರುಚ್ಚರಿಸಿದ ಅವರು, ಈ ವಿಚಾರದಲ್ಲಿ ಹೊಣೆಗಾರಿಕೆಯನ್ನು ನಿಗದಿಪಡಿಸಬೇಕು. ಆದರೆ, ಅವರು ಮಾಡಿರುವ ಆರೋಪಗಳು ಸ್ವತಂತ್ರವಾಗಿ ದೃಢಪಟ್ಟಿಲ್ಲ.ಪೊಲೀಸರಿಗೂ ಈ ಬಗ್ಗೆ ಅಸಮಾಧಾನವಿದೆ ಎಂದ ರಾಹುಲ್ ಹೇಳಿದರು.

# ನಂದಿನಿ ಹಾಲಿನ ಪುಡಿ ಸಂಪೂರ್ಣ ಸುರಕ್ಷಿತ: ಕಲಬೆರಕೆ ಆರೋಪಗಳಿಗೆ ತೆರೆ ಎಳೆದ ಲ್ಯಾಬ್ ವರದಿ

**ಬೆಂಗಳೂರು:** ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳದ (ಕೆಎಂಎಫ್) ಹೆಮೆಯ ಬ್ರ್ಯಾಂಡ್ 'ನಂದಿನಿ?ಯ ಹಾಲಿನ ಪುಡಿಯಲ್ಲಿ ಕಲಬೆರಕೆಯಾಗಿದೆ ಎಂಬ ಆರೋಪಗಳಿಗೆ ಕೊನೆಗೂ ತೆರೆ ಬಿದ್ದಿದೆ. ಆಹಾರ ಸುರಕ್ಷತೆ ಮತ್ತು ಗುಣ ಮಟ್ಟ ಕಾಯ್ದೆಯಡಿ ನಡೆಸಲಾದ ತಾಲೂಕು ಮತ್ತು ರಾಜ್ಯ ಮಟ್ಟದ ಪ್ರಯೋಗಾಲಯದ (ಲ್ಯಾಬ್) ಪರೀಕ್ಷಾ ವರದಿಗಳು ಹೊರಬಿದ್ದಿದ್ದು, ನಂದಿನಿ ಹಾಲಿನ ಪುಡಿ ಸಂಪೂರ್ಣವಾಗಿ ಸುರಕ್ಷಿತ ಹಾಗೂ ಉತ್ಕೃಷ್ಟ ಗುಣಮಟ್ಟದಿಂದ ಕೂಡಿದೆ ಎಂಬುದು ಅಧಿಕೃತವಾಗಿ ದೃಢಪಟ್ಟಿದೆ.




ಕೆಲ ದಿನಗಳ ಹಿಂದೆ ನಂದಿನಿ ಹಾಲಿನ ಪುಡಿಯಲ್ಲಿ ಕಲಬೆರಕೆ ಮಾಡಲಾಗುತ್ತಿದೆ ಎಂಬ ಗಂಭೀರ ಆರೋಪಗಳು ಕೇಳಿಬಂದಿದ್ದವು. ಸಾರ್ವಜನಿಕರ ಆರೋಗ್ಯ ಮತ್ತು ಕೆಎಂಎಫ್‌ನ ವಿಶ್ವಾಸಾರ್ಹತೆಯ ದೃಷ್ಟಿಯಿಂದ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿದ ರಾಜ್ಯ ಆರೋಗ್ಯ ಸಚಿವರು, ತಕ್ಷಣವೇ ಹಾಲಿನ ಪುಡಿಯ ಗುಣಮಟ್ಟ ಪರೀಕ್ಷೆ ನಡೆಸುವಂತೆ ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಿದ್ದರು

ಆರೋಗ್ಯ ಸಚಿವರ ನಿರ್ದೇಶನದಂತೆ, ಕಳೆದ ಸೆಪ್ಟೆಂಬರ್ 26 ರಂದು ರಾಜ್ಯದ ವಿವಿಧ ಕೆಎಂಎಫ್ ಡೈರಿಗಳಿಂದ ನಂದಿನಿ ಮಿಲ್?ಕ ಪೌಡರ್‌ನ ಮಾದರಿಗಳನ್ನು ಆಹಾರ ಸುರಕ್ಷತಾ ಇಲಾಖೆಯ ಅಧಿಕಾರಿಗಳು ಸಂಗ್ರಹಿಸಿದ್ದರು. ಬಳಿಕ ಈ ಮಾದರಿಗಳನ್ನು ಎಫ್‌ಎಸ್‌ಎಸ್‌ಎಐ ಅನುಮೋದಿತ ಮಾನ್ಯತೆ ಪಡೆದ ಪರೀಕ್ಷಾಗಾರಗಳಿಗೆ ರವಾನಿಸಲಾಗಿತ್ತು.

ಲ್ಯಾಬ್ ವರದಿಯ ಅಧಿಕೃತ ಪ್ರಯೋಗಾಲಯ ವರದಿಯ ಪ್ರಕಾರ,ನಂದಿನಿ ಹಾಲಿನ ಪುಡಿಯಲ್ಲಿ ಯಾವುದೇ ರೀತಿಯ ಹಾನಿಕಾರಕ ರಾಸಾಯನಿಕಗಳು, ಅನಗತ್ಯ ಪದಾರ್ಥಗಳು ಅಥವಾ ಕಲಬೆರಕೆ ಅಂಶಗಳು ಪತ್ತೆಯಾಗಿಲ್ಲ. ನಿಗದಿಪಡಿಸಿದ ಎಲ್ಲಾ ಆಹಾರ ಸುರಕ್ಷತಾ ನಿಯಮಗಳು ಹಾಗೂ ಗುಣಮಟ್ಟದ ಮಾನದಂಡಗಳನ್ನು ನಂದಿನಿ ಉತ್ಪನ್ನವು ಪೂರೈಸಿದೆ. ಸಾರ್ವಜನಿಕರು ಮತ್ತು ಮಕ್ಕಳು ಯಾವುದೇ ಆತಂಕವಿಲ್ಲದೆ ಬಳಸಲು ಇದು ಸಂಪೂರ್ಣ ಯೋಗ್ಯವಾಗಿದೆ ಎಂಬುದು ಅಧಿಕೃತವಾಗಿ ದೃಢಪಟ್ಟಿದೆ. ಕೋಟಿಗಟ್ಟಲೆ ಗ್ರಾಹಕರ ನಂಬಿಕೆಗೆ ಹೆಸರುವಾಸಿಯಾಗಿರುವ ಟಿನಂದಿನಿಟಿ ಬ್ರ್ಯಾಂಡ್ ವಿರುದ್ಧ ಕೇಳಿಬಂದಿದ್ದ ಅಪಪ್ರಚಾರಕ್ಕೆ ಈ ವರದಿಯು ಸೂಕ್ತ ಉತ್ತರ ನೀಡಿದೆ. ಸುಳ್ಳು ವದಂತಿಗಳಿಗೆ ಕಿವಿಗೊಡದೆ ಗ್ರಾಹಕರು ನಂದಿನಿ ಉತ್ಪನ್ನಗಳನ್ನು ಎಂದಿನಂತೆ ಬಳಸಬಹುದು ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

ಗುಣಮಟ್ಟ ಪರೀಕ್ಷೆಆಹಾರ ಉತ್ಪನ್ನಗಳ ಗುಣಮಟ್ಟದಬಗ್ಗೆ ಆರೋಪಗಳುಕೇಳಿಬಂದಾಗ, ಅವುಗಳ ಸತ್ಯಾಸತ್ಯತೆಯನ್ನು ವೈಜ್ಞಾನಿಕ ಪರೀಕ್ಷೆಗಳ ಮೂಲಕ ಪರಿಶೀಲಿಸುವುದು ಮಹತ್ವದ್ದಾಗಿದೆ. ನಂದಿನಿ ಮಿಲ್ಕ್ ಪೌಡರ್ ವಿಚಾರದಲ್ಲಿಯೂ ಮಾದರಿಗಳನ್ನು ಪ್ರಯೋಗಾಲಯಕ್ಕೆ ಕಳುಹಿಸುವ ಮೂಲಕ ಗುಣಮಟ್ಟದ ಕುರಿತು ಸ್ಪಷ್ಟತೆ ಪಡೆಯಲು ಕ್ರಮ ಕೈಗೊಳ್ಳಲಾಗಿತ್ತು.

# ದೇಶದಲ್ಲಿ ಅರಾಜಕತೆ ಸೃಷ್ಟಿಯಾಗಲು ಬಿಜೆಪಿಯೇ ಕಾರಣ: ಹರಿಪ್ರಸಾದ್ ಆರೋಪ

**ನವದೆಹಲಿ:** ದೇಶದಲ್ಲಿ ಅರಾಜಕತೆ ಸೃಷ್ಟಿಯಾಗಲು ಬಿಜೆಪಿಯೇ ಕಾರಣ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಆರೋಪಿಸಿದರು. ದ'ಹ'ಲಿಂು'ುಲ್ಲಿಂದ'ು ಸ'ುದ್ದಿಗಾರ'ರ'ೊಂದಿಗ' ಮಾತನಾಡಿದ ಅವರು, ಬಿಜೆಪಿ ಮತ್ತು ಆರ್‌ಎಸ್‌ಎಸ್ ಜನ ತಾಳಿದ್ದೇ ಅರಾಜಕತೆಯಿಂದ ಎಂದು ವಾಗ್ದಾಳಿ ನಡೆಸಿದರು.



ಸುಪ್ರೀಂಕೋರ್ಟ್‌ಗೆ ಪ್ರಮಾಣಪತ್ರ ಸಲ್ಲಿಸಿ, ನಂತರ ಅದನ್ನು ಉಲ್ಲಂಘನೆ ಮಾಡಿದ್ದು ಆರ್‌ಎಸ್‌ಎಸ್ ಮತ್ತು ಬಿಜೆಪಿಯವರು. ಸಂವಿಧಾನ ಮತ್ತು ಪ್ರಜಾಪ್ರಭುತ್ವಕ್ಕೆ ವಿರುದ್ಧವಾಗಿರುವ, ಅವರಿಂದ ನಾವು ಪಾಠ ಕಲಿಯಬೇಕಿಲ್ಲ ಎಂದು ತಿರುಗೇಟು ನೀಡಿದರು.

ಎಸ್‌ಐಆರ್ ಹೆಸರಿನಲ್ಲಿ 13 ಕೋಟಿ ಅರ್ಹ ಮತದಾರರನ್ನು ಪಟ್ಟಿಯಿಂದ ಕೈ ಬಿಡಲಾಗಿದೆ. ಅದರ ವಿರುದ್ಧ ಕಾಂಗ್ರೆಸ್‌ನ ನಾಯಕ ರಾಹುಲ್ ಗಾಂಧಿ ನೇತೃತ್ವದಲ್ಲಿ ಇಂಡಿಯಾ ಒಕ್ಕೂಟದ ನಾಯಕರು ನಿರಂತರ ಪ್ರತಿಭಟನೆ ನಡೆಸುತ್ತಿದ್ದಾರೆ. ಈಗಾಗಲೇ ರಾಷ್ಟ್ರಪತಿಯವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದಾರೆ.

ಇಂದು ಸುಪ್ರೀಂಕೋರ್ಟ್‌ನ ನ್ಯಾಯಮೂರ್ತಿಯವರನ್ನು ಭೇಟಿ ಮಾಡಿ ಮನವಿ ಸಲ್ಲಿಸುವ ಸಲುವಾಗಿ ಸುಪ್ರೀಂಕೋರ್ಟ್ ಚಲೋ ಹಮಿಕೊಳ್ಳಲಾಗಿದೆ ಎಂದು ವಿವರಿಸಿದ್ದಾರೆ. ಸುಪ್ರೀಕೋರ್ಟ್ ಮುಖ್ಯ ನ್ಯಾಯಮೂರ್ತಿಯವರನ್ನು ಭೇಟಿ ಮಾಡುತ್ತಿರುವುದಕ್ಕೂ ಬಿಜೆಪಿಯವರು ಟೀಕೆ ಮಾಡುತ್ತಿದ್ದಾರೆ. ದೇಶದ ಜನರ ಸಮಸ್ಯೆ ಆಲಿಸಲಿಕ್ಕಾಗಿಯೇ ಸುಪ್ರೀಂಕೋರ್ಟ್ ಇದೆ.

ಈ ಮೊದಲು ಪೋಸ್ಟ್ ಕಾರ್ಡ್‌ನಲ್ಲಿ ಜನ ಸಾಮಾನ್ಯರು ಪತ್ರ ಬರೆದರೂ ಸುಪ್ರೀಂಕೋರ್ಟ್ ಅದನ್ನು ಮಾನ್ಯ ಮಾಡಿ ವಿಚಾರಣೆ ನಡೆಸಿ, ನ್ಯಾಯ ಕೊಡಿಸಿದ ಉದಾಹರಣೆಗಳಿವೆ. ಹೀಗಾಗಿ ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ನಮ ಪಕ್ಷದ ನಾಯಕರು ನ್ಯಾಯಾಧೀಶರನ್ನು ಭೇಟಿಯಾಗುತ್ತಿದ್ದಾರೆ ಎಂದು ಹೇಳಿದರು. ಸುಪ್ರೀಂಕೋರ್ಟ್ ನ್ಯಾಯಮೂರ್ತಿಯವರನ್ನು ಭೇಟಿಯಾಗಲು ಆಯೋಜಿಸಲಾಗಿದ್ದ ಜಾಥಾದಲ್ಲಿ ದೇಶಾದ್ಯಂತದಿಂದ ಶಾಸಕರು, ಸಂಸದರು, ರಾಜ್ಯಸಭಾ ಸದಸ್ಯರು, ವಿಧಾನಪರಿಷತ್ ಸದಸ್ಯರು ಭಾಗವಹಿಸಿದ್ದರು ಎಂದು

# ಪ್ರಜ್ವಲ್ ರೇವಣ್ಣ ಬೆಂಗಳೂರಿಗೆ ವಾಪಸ್

**ಬೆಂಗಳೂರು:** ಲೈಂಗಿಕ ದೌರ್ಜನ್ಯ ಪ್ರಕರಣಗಳಲ್ಲಿ ಶಿಕ್ಷೆಗೆ ಗುರಿಯಾಗಿರುವ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರನ್ನು ಬೆಳಗಾವಿಯ ಹಿಂಡಲಗಾ ಕೇಂದ್ರ ಕಾರಾಗೃಹಕ್ಕೆ ಸ್ಥಳಾಂತರಿಸುವ ಪ್ರಕ್ರಿಯೆ ಕೊನೆಯ ಕ್ಷಣದಲ್ಲಿ ಸ್ಥಗಿತಗೊಂಡಿದೆ. ಪರಪ್ಪನ ಅಗ್ರಹಾರ ಕೇಂದ್ರಕಾರಾಗೃಹದಿಂದ ಬಿಗಿ ಭದ್ರತೆಯಲ್ಲಿ ಬೆಳಗಾವಿಗೆ ಕರೆದೊಯ್ಯುತ್ತಿದ್ದ ಪೊಲೀಸರು, ತುಮಕೂರು ತಲುಪಿದ ಬಳಿಕ ವಾಹನವನ್ನು ಹಿಂದಕ್ಕೆ ತಿರುಗಿಸಿ ಮತ್ತೆ ಬೆಂಗಳೂರಿಗೆ ಕರೆತಂದಿದ್ದಾರೆ. ಕಳೆದ ಅ.10ರಂದು ಸಂಜೆ ಸಿಎಆರ್ ಎಸ್ಕಾರ್ಟ್ ಪೊಲೀಸರು ಬಿಗಿ ಭದ್ರತೆಯೊಂದಿಗೆ ಪ್ರಜ್ವಲ್ ರೇವಣ್ಣನನ್ನು ಬೆಳಗಾವಿಯ ಹಿಂಡಲಗಾ ಜೈಲಿಗೆ ಕರೆದೊಯ್ಯುತ್ತಿದ್ದರು. ಪೊಲೀಸ್ ವಾಹನ ತುಮಕೂರು ತಲುಪುತ್ತಿದ್ದಂತೆ ಹಿರಿಯ ಪೊಲೀಸ್ ಅಧಿಕಾರಿಯೊಬ್ಬರಿಂದ ಬೆಂಗಾವಲು ಪಡೆಗೆ ತುರ್ತು ಕರೆ ಬಂದಿದೆ. ಮೇಲಧಿಕಾರಿಗಳ ಸೂಚನೆಯಂತೆ ಪೊಲೀಸರು ತಕ್ಷಣ ವಾಹನವನ್ನು ವಾಪಸ್ ತಿರುಗಿಸಿ, ರಾತ್ರಿ ವೇಳೆಯೇ ಪ್ರಜ್ವಲ್ ರೇವಣ್ಣ ಅವರನ್ನು ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹಕ್ಕೆ ಕರೆತಂದಿದ್ದಾರೆ ಎಂದು ತಿಳಿದುಬಂದಿದೆ.



ಪ್ರಜ್ವಲ್ ರೇವಣ್ಣ ವಿರುದ್ಧದ ಎರಡು ಪ್ರಮುಖ ಪ್ರಕರಣಗಳ ವಿಚಾರಣೆ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ನಡೆಯುತ್ತಿದೆ. ವಿಚಾರಣೆಯ ಕೆಲವು ಪ್ರಮುಖ ಹಂತಗಳಲ್ಲಿ ಅವರು ನ್ಯಾಯಾಲಯಕ್ಕೆ ಖುದ್ದಾಗಿ ಹಾಜರಾಗಬೇಕಾದ ಅಗತ್ಯವಿದೆ. ಈ ಹಿನ್ನೆಲೆಯಲ್ಲಿ ಅವರನ್ನು ಬೆಳಗಾವಿಯ ಹಿಂಡಲಗಾ ಜೈಲಿಗೆ ಸ್ಥಳಾಂತರಿಸಿದರೆ, ಪ್ರತಿ ಬಾರಿ ವಿಚಾರಣೆಗಾಗಿ ಅಲ್ಲಿಂದ ಬೆಂಗಳೂರಿಗೆ ಕರೆತರುವುದು ಭದ್ರತೆ ಹಾಗೂ ಆಡಳಿತಾತ್ಮಕ ದೃಷ್ಟಿಯಿಂದ ಸವಾಲಾಗಬಹುದು ಎಂಬ ವಿಚಾರ ಚರ್ಚೆಗೆ ಬಂದಿದೆ ಎನ್ನಲಾಗಿದೆ. ನ್ಯಾಯಾಲಯದ ವಿಚಾರಣೆಗೆ ಹಾಜರುಪಡಿಸುವುದು ಹಾಗೂ ಭದ್ರತಾ ವ್ಯವಸ್ಥೆಗಳನ್ನು ಗಮನದಲ್ಲಿಟ್ಟುಕೊಂಡು, ಕೊನೆಯ ಕ್ಷಣದಲ್ಲಿ ಸ್ಥಳಾಂತರ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಿ ಪ್ರಜ್ವಲ್ ರೇವಣ್ಣ ಅವರನ್ನು ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಲ್ಲೇ ಇರಿಸಲು ನಿರ್ಧರಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKANAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKANAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. CONTACT : 9901010109 GMAIL: suryapragathi2021@gmail.com.